ಸಂಪುಟ: 13 Volume | ಸಂಚಿಕೆ: 186 Issue | ಪುಟಗಳು: 08 Pages | ಶುಕ್ರವಾರ 05 ಸೆಪ್ಟೆಂಬರ್ 2025 | ₹2 | RNI NO: KARKAN/2011/48371 | BDR/054/2026-2027 | mallammanudi@gmail.com | www.mallammanudi.in | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನಮ್ಮನ್ನು ಅತ್ಯಂತ ಕೀಳಾಗಿ ಕಾಣುವ ಹಿಂದೂ ಧರ್ಮವನ್ನು ನನ್ನ ಧರ್ಮವೆಂದು ಹೇಗೆ ಕರೆಯಲಿ ? ಹೇಗೆ ಭಾವಿಸಲಿ ?

-ಡಾ.ಬಿಆರ್.ಅಂಬೇಡ್ಕರ್

ಸುದ್ದಿ ಮುಟ್ಟಿಸುವಲ್ಲಿ ಪತ್ರಿಕಾ ವಿತರಕರ ಸೇವೆ 4

ಆಳಂದ ಬಸ್ ನಿಲ್ದಾಣದ ಶಂಕುಸ್ಥಾಪನೆ 6ಕ್ಕೆ 2

ಭಾಗ್ಯವಂತಿ ದೇವಾಲಯ ಹುಂಡಿ ಎಣಿಕೆ ಕಾರ್ಯ 8

## ಮಾವೋವಾದಿ: ಗುಂಡಿನ ಚಕಮಕಿ

**ರಾಂಚಿ:** ಜಾರ್ಖಂಡ್‌ನ ಪಲಾಮು ಜಿಲ್ಲೆಯಲ್ಲಿ ನಿಷೇಧಿತ ಟಿಎಸ್ಪಿಸಿ, ಸಿಪಿಐ (ಮಾವೋವಾದಿ) ವಿಭಜನೆಯಾದ ಗುಂಪಿನ ಸದಸ್ಯರೊಂದಿಗೆ ನಡೆದ ಗುಂಡಿನ ಚಕಮಕಿ ನಡೆದಿದೆ.



ಇದರಲ್ಲಿ ಇಬ್ಬರು ಭದ್ರತಾ ಸಿಬ್ಬಂದಿ ಮೃತಪಟ್ಟಿದ್ದಾರೆ, ಇನ್ನೊಬ್ಬರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಮನಾಟು ಪೊಲೀಸ್ ಠಾಣೆ ವ್ಯಾಪ್ತಿಯ ಕೇದಾಲ್ ಗ್ರಾಮದಲ್ಲಿ ಭದ್ರತಾ ಪಡೆಗಳು ಮತ್ತು ನಿಷೇಧಿತ ತೃತೀಯಾ ಸಮ್ಮೇಳನ ಪ್ರಸ್ತುತಿ ಸಮಿತಿ (ಟಿಎಸ್ಪಿಸಿ) ಸದಸ್ಯರ ನಡುವೆ ಬೆಳಿಗ್ಗೆ 12.30 ರ ಸುಮಾರಿಗೆ ಗುಂಡಿನ ಚಕಮಕಿ ನಡೆಯಿತು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಗುಂಡೇಟಿನಲ್ಲಿ ಇಬ್ಬರು ಭದ್ರತಾ ಸಿಬ್ಬಂದಿ ಸಾವನ್ನಪ್ಪಿದ್ದು, ಮತ್ತೊಬ್ಬರು ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಮೇದಿನಿರೈ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪಲಾಮು ಡಿಐಜಿ ನೌಶಾದ್ ಆಲಂ ಪಿಟಿಐಗೆ ತಿಳಿಸಿದ್ದಾರೆ. ಕೇದಾಲ್ ಗ್ರಾಮದಲ್ಲಿ ಟಿಎಸ್‌ಪಿಸಿ ಕಮಾಂಡರ್ ಶಶಿಕಾಂತ್ ಗಂಜು ಮತ್ತು ಅವರ ತಂಡದ ಉಪಸ್ಥಿತಿಯ ಬಗ್ಗೆ ಮಾಹಿತಿಯ ಆಧಾರದ ಮೇಲೆ, ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ ಎಂದು ಮತ್ತೊಬ್ಬ ಅಧಿಕಾರಿ ತಿಳಿಸಿದ್ದಾರೆ.

## ಬುರುಡೆ ಕೇಸ್ ಎನ್‌ಐಗೆ ಕೊಡಿ



**ನವದೆಹಲಿ:** ದೇಶದದ್ಯಾಂತ ಭಾರೀ ಸದ್ದು ಮಾಡಿರುವ ಧರ್ಮಸ್ಥಳ ಪ್ರಕರಣದ ತನಿಖೆಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಗೆ ವಹಿಸಬೇಕೆಂದು ಶ್ರೀಗಳ ತಂಡ ಒತ್ತಾಯಿಸಿದೆ. ಕರ್ನಾಟಕದ ಸನಾತನ ಸಂತರ ನಿಯೋಗವು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ದೆಹಲಿಯಲ್ಲಿ ಭೇಟಿಯಾಗಿ ಮನವಿ ಸಲ್ಲಿಸಿದೆ. ಪಂಚಮಸಾಲಿ ಲಿಂಗಾಯತ ಮಠದ ವಚನಾನಂದ ಸ್ವಾಮೀಜಿ ನೇತೃತ್ವದ ಈ ನಿಯೋಗದಲ್ಲಿ, ಮಂಗಳೂರಿನ ಗುರುಪುರ ವಜ್ರದೇಹಿ ಮಠದ ಶ್ರೀ ರಾಜಶೇಖರಾನಂದ ಸ್ವಾಮೀಜಿ ಸೇರಿದಂತೆ ವಿವಿಧ ಪೀಠಗಳ ಒಟ್ಟು ಎಂಟು ಸ್ವಾಮೀಜಿಗಳು ಭಾಗವಹಿಸಿದ್ದರು.

## ಬಿಜೆಪಿ ಜೆಡಿಎಸ್ ಪ್ರತ್ಯೇಕ ಹೋರಾಟ

**ಬೆಂಗಳೂರು:** ಧರ್ಮಸ್ಥಳ ಕ್ಷೇತ್ರದ ವಿರುದ್ಧ ವ್ಯವಸ್ಥಿತ ಅಪಪ್ರಚಾರ ನಡೆಯುತ್ತಿದೆ ಎಂದು ಬಿಜೆಪಿ ಮತ್ತು ಜೆಡಿಎಸ್ ಪ್ರತ್ಯೇಕವಾದ ಹೋರಾಟವನ್ನು ನಡೆಸಿದೆ. ಬಿಜೆಪಿಯ ಧರ್ಮಸ್ಥಳ ಚಲೋ ಕಾರ್ಯಕ್ರಮಕ್ಕೆ ಒಂದು ದಿನದ ಮುನ್ನ, ಜೆಡಿಎಸ್ ನಾಯಕರು ಧರ್ಮಸ್ಥಳಕ್ಕೆ ಹೋಗಿ ಬಂದಿದ್ದಾರೆ. ಬಿಜೆಪಿಯ ಧರ್ಮಸ್ಥಳ ಚಲೋ ಕಾರ್ಯಕ್ರಮ ದೊಡ್ಡ ಮಟ್ಟದ ಯಶಸ್ಸನ್ನು ಕಂಡಿತ್ತು. ಇದಾದ ನಂತರ, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಸೌಜನ್ಯ ನಿವಾಸಕ್ಕೆ ಸಾಂತ್ವನ ಹೇಳಲು ಹೋಗಿದ್ದರು. ಆ ವೇಳೆ, ಅವರ ಜೊತೆ ದಕ್ಷಿಣ ಕನ್ನಡ ಸಂಸದ ಬ್ರಿಜೇಶ್ ಚೌಟ ಮತ್ತು ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ ಅವರ ಜೊತೆಗಿದ್ದರು. ಬಿಜೆಪಿ ಹಿರಿಯ ನಾಯಕರು ಧರ್ಮಸ್ಥಳದಲ್ಲಿ ಇದ್ದರು, ಅವರಿಗೆ ಅಲ್ಲಿಗೆ ಹೋಗುವ ಮಾಹಿತಿ ತಡವಾಗಿ ಗೊತ್ತಾಗಿದೆ ಎಂದು ಹೇಳಲಾಗುತ್ತಿದೆ.

## ರಾಜ್ಯಾದ್ಯಂತ 10 ರವರೆಗೆ ಮಳೆ



**ಬೆಂಗಳೂರು:** ಕರ್ನಾಟಕದಾದ್ಯಂತ ಸೆಪ್ಟೆಂಬರ್ 10ರವರೆಗೂ ಅಧಿಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಬಹುತೇಕ ಕಡೆ ಭಾರಿ ಮಳೆಯಾಗಲಿದೆ. ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ತುಮಕೂರು, ವಿಜಯನಗರ, ರಾಮನಗರ, ಮೈಸೂರು, ಮಂಡ್ಯ, ಕೋಲಾರ, ಹಾಸನ, ದಾವಣಗೆರೆ, ಚಿಕ್ಕಬಳ್ಳಾಪುರ, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಯಾದಗಿರಿ, ವಿಜಯಪುರ, ರಾಯಚೂರು, ಕೊಪ್ಪಳ, ಕಲಬುರಗಿ, ಹಾವೇರಿ, ಗದಗ, ಧಾರವಾಡ, ಬೀದರ್, ಬೆಳಗಾವಿ ಜಿಲ್ಲೆಗಳಲ್ಲಿ ಕೂಡ ಮಳೆಯಾಗಲಿದೆ.

## ಗ್ರೇಟರ್ ಬೆಂಗಳೂರು ಕಾರ್ಯ

**ಬೆಂಗಳೂರು:** ಬಿಬಿಎಂಪಿ ಆಡಳಿತ ಮುಕ್ತಾಯವಾಗಿ ಬುಧವಾರದಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಆಡಳಿತ ಜಾರಿಯಾಗಿದೆ. 15 ಐಎಎಸ್ ಅಧಿಕಾರಿಗಳನ್ನು ನೇಮಕ



ಮಾಡಿದ್ದು, ಎಲ್ಲಾ ಅಧಿಕಾರಿಗಳು ಕಾರ್ಯಾರಂಭ ಮಾಡಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಹಾಗೂ 5 ಪಾಲಿಕೆಗಳಿಗೆ ಮುಖ್ಯ ಆಯುಕ್ತರು, ವಿಶೇಷ ಆಯುಕ್ತರು, ಆಯುಕ್ತರು ಹಾಗೂ ಹೆಚ್ಚುವರಿ ಆಯುಕ್ತರನ್ನು ನೇಮಕ ಮಾಡಲಾಗಿದೆ. ಜಿಬಿಎ ಮತ್ತು ನಗರ ಪಾಲಿಕೆಗಳಿಗೆ ಹುದ್ದೆಗಳನ್ನು ಮರು ಹಂಚಿಕೆ ಮಾಡಿ, ಪದನಾಮಗಳನ್ನು ಮರುವಿನ್ಯಾಸಗೊಳಿಸಲಾಗಿದೆ. ಬಿಬಿಎಂಪಿ ಮುಖ್ಯ ಆಯುಕ್ತರಾಗಿದ್ದ ಎಂ.ಮಹೇಶ್ವರ ರಾವ್ ಅವರನ್ನೇ ಜಿಬಿಎ ಮುಖ್ಯ ಆಯುಕ್ತರನ್ನಾಗಿ ನಿಯೋಜಿಸಲಾಗಿದೆ.



ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಸಿ.ಮಹದೇವಪ್ಪ ಮತ್ತು ಮೈಸೂರು ಜಿಲ್ಲಾಡಳಿತ ಇಂದು ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನಾಡ ಹಬ್ಬ ದಸರಾದ ಆಹ್ವಾನ ಪತ್ರಿಕೆ ನೀಡಿ ಆಹ್ವಾನಿಸಿದರು. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಉಪಸ್ಥಿತರಿದ್ದರು.

## ಮೋದಿಯ ದೀಪಾವಳಿ ಕೊಡುಗೆ

**ನವದೆಹಲಿ:** ಕೇಂದ್ರದ ನರೇಂದ್ರ ಮೋದಿ ಅವರ ಸರ್ಕಾರ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವ್ಯವಸ್ಥೆಯಲ್ಲಿ ಕ್ರಾಂತಿಕಾರಿ ಬದಲಾವಣೆಗಳನ್ನು ಜಾರಿಗೆ ತಂದಿದ್ದು, ರಾಷ್ಟ್ರಕ್ಕೆ ಐತಿಹಾಸಿಕ



ದೀಪಾವಳಿ ಉಡುಗೊರೆ ನೀಡಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಬಣ್ಣಿಸಿದ್ದಾರೆ. ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಸಚಿವರು; ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯು ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಯನ್ನು ಅನುಮೋದಿಸಿದೆ. ಇದು ಜನಜೀವನ ಸುಲಭಗೊಳಿಸುವುದು ಮತ್ತು ಆತ್ಮನಿರ್ಭರಭಾರತ್ ಅನ್ನು ಬಲಪಡಿಸುವ ಒಂದು ಪರಿವರ್ತನಾತ್ಮಕ ಹೆಜ್ಜೆಯಾಗಿದೆ ಎಂದು ಹೇಳಿದ್ದಾರೆ.

# ಜಿಎಸ್ಟಿ ಭರ್ಜರಿ ರಿಲೀಫ್

### ನಮ್ಮ ಒತ್ತಾಯಕ್ಕೆ ಮಣಿದ ಕೇಂದ್ರ ಸರ್ಕಾರ: ಮಲ್ಲಿಕಾರ್ಜುನ ಖರ್ಗೆ | ಜನರಿಗೆ ಹೊರೆ: ಕಾಂಗ್ರೆಸ್

**ಹೊಸದಿಲ್ಲಿ:** ಜಿಎಸ್ಟಿ ಮಂಡಳಿಯ 56ನೇ ಸಭೆ, ಜನಸಾಮಾನ್ಯರಿಗೆ ಭರ್ಜರಿ ರಿಲೀಫ್ ನೀಡಿದೆ. ಎರಡು ತೆರಿಗೆ ಸ್ಲ್ಯಾಬ್‌ಹಾಗೂ ಜಿಎಸ್ಟಿ ದರ ಬದಲಾವಣೆಗೆ ಮುನ್ನುಡಿ ಬರೆದಿರುವ ಜಿಎಸ್ಟಿ ಮಂಡಳಿ ಸಭೆಯ ಅಧ್ಯಕ್ಷತೆವಹಿಸಿದ್ದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಅಗತ್ಯ ವಸ್ತುಗಳು, ವಾಹನಗಳು, ಕೃಷಿ ಮತ್ತು ಎಲೆಕ್ಟ್ರಾನಿಕ್ ಉಪಕರಣಗಳ ಮೇಲಿನ ಜಿಎಸ್ಟಿ ದರಗಳಲ್ಲಿ ಭಾರೀ ಕಡಿತ ಘೋಷಣೆ ಮಾಡಿದ್ದಾರೆ.

**ತೆರಿಗೆ ಯಾವಾಗಿನಿಂದ?:** ಸೆ.22ರ ನವರಾತ್ರಿಯ ಮೊದಲ ದಿನದಿಂದ ಜಾರಿಗೆ ಬರುವ ಸ್ಲ್ಯಾಬಗಳನ್ನು, ಶೇ.5, ಶೇ.18ಕ್ಕೆ ಸೀಮಿತಗೊಳಿಸುವ ಮೂಲಕ, ಜಿಎಸ್ಟಿ ಕೌನ್ಸಿಲ್ ದರ ಪರಿಷ್ಕರಣೆಯನ್ನು ಅನುಮೋದಿಸಿದೆ. ದುಬಾರಿ ಬೆಲೆಯ ಕಾರು, ತಂಬಾಕು, ಸಿಗರೇಟ್ ಳಂತಹ ಆಯ್ದ ಕೆಲವು ವಸ್ತುಗಳಿಗೆ ವಿಶೇಷ ಶೇ.40 ಸ್ಲ್ಯಾಬ್‌ಗಳನ್ನು ಪ್ರಸ್ತಾಪಿಸಲಾಗಿದೆ.

**ಕಾಂಗ್ರೆಸ್ ವಿರುದ್ಧ ಕಿಡಿ:** ತಂಬಾಕು, ಸಿಗರೇಟ್ಗಳಂತಹ ಆಯ್ದ ಕೆಲವು ವಸ್ತುಗಳಿಗೆ ವಿಶೇಷ ಶೇ. 40ರಷ್ಟು ಸ್ಲ್ಯಾಬ್ ನಿಗದಿಪಡಿಸುವ ಕೇಂದ್ರದ ನಿರ್ಧಾರವನ್ನು ಕಾಂಗ್ರೆಸ್ ಪ್ರಶ್ನಿಸಿದೆ. ಇದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, 'ಕಾಂಗ್ರೆಸ್ ಪಕ್ಷವು ತಂಬಾಕು ಮತ್ತು ಗುಟ್ಕಾ ಮೇಲೆ ಕೇವಲ ಶೇ. 5ರಷ್ಟು ಜಿಎಸ್ಟಿ ತೆರಿಗೆ ವಿಧಿಸಬೇಕೆಂದು ಬಯಸುತ್ತದೆಯೇ ಎಂದು ಪ್ರಶ್ನಿಸಿದ್ದಾರೆ.

> ಕಾಂಗ್ರೆಸ್ ಅಧಿಕಾರಾವಧಿಯಲ್ಲಿ ರಾಜ್ಯಗಳು ಕೇಂದ್ರ ಸರ್ಕಾರದ ಮೇಲೆ ನಂಬಿಕೆ ಇಡುತ್ತಿರಲಿಲ್ಲ. ಈ ಕಾರಣಕ್ಕೆ ಜಿಎಸ್ಟಿಜಾರಿಗೆತರುವುದುಅಸಾಧ್ಯವೆಂದು ಕಾಂಗ್ರೆಸ್‌ನಂಬಿತ್ತು.ಆದರೆನಮ್ಮ ಸರ್ಕಾರ ಜಿಎಸ್ಟಿಯನ್ನು ಜಾರಿಗೆ ತಂದಿದ್ದಲ್ಲದೇ, ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಮುಂದಿನ ಳಿಗೆಯ ಜಿಎಸ್ಟಿ ಪರಿಷ್ಕರಣೆ ಜಾರಿಗೊಳಿಸಿದೆ
>
> -ನಿರ್ಮಲಾ ಸೀತಾರಾಮನ್
> ಕೇಂದ್ರ ವಿತ್ತ ಸಚಿವೆ

> ಒಂದು ದಶಕದಿಂದ ಕಾಂಗ್ರೆಸ್ ಪಕ್ಷ ಜಿಎಸ್ಟಿಯನ್ನು ಸರಳೀಕರಿಸಬೇಕೆಂದು ಒತ್ತಾಯಿಸುತ್ತಿದೆ.ಮೋದಿಸರ್ಕಾರಒಂದು ರಾಷ್ಟ್ರ,ಒಂದುತೆರಿಗೆಯನ್ನುಒಂದುರಾಷ್ಟ್ರ, 9 ತೆರಿಗೆಗಳಾಗಿ ರಿವರ್ತಿಸಿದೆ. ಇದರಲ್ಲಿ ಶೇಕಡಾ 0, ಶೇಕಡಾ 5, ಶೇಕಡಾ 12, ಶೇಕಡಾ18, ಶೇಕಡಾ28 ಮತ್ತುಶೇಕಡಾ 0.25, ಶೇಕಡಾ1.5, ಶೇಕಡಾ 3 ಮತ್ತು ಶೇಕಡಾ 6 ರ ವಿಶೇಷ ದರಗಳು ಸೇರಿವೆ
>
> -ಮಲ್ಲಿಕಾರ್ಜುನ ಖರ್ಗೆ
> ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ



### ಹೊಸ ಜಿಎಸ್ ಟಿ ಲೆಕ್ಕಾಚಾರ..?

ಐಪಿಎಲ್‌ನಲ್ಲಿ 1000 ರೂ.ಟಿಕೆಟ್ ಬೆಲೆ ಈ ಹಿಂದೆ ಜಿಎಸ್‌ಟಿ ಸೇರಿಸಿ 1280 ರೂ. ಆಗುತ್ತಿತ್ತು. ಆದರೀಗ 1400 ರೂ.ಏರಿಕೆ ಆಗಲಿದೆ. ಅದೇರೀತಿ500 ರೂ.ಟಿಕೆಟ್ ಬೆಲೆ 700 ರೂಗೆ ಏರಲಿದೆ. 2000 ರೂ. ಟಿಕೆಟ್ ಬೆಲೆ 2800 ರೂ. ಆಗಲಿದೆ. 1500 ರೂ. ಟಿಕೆಟ್ ಬೆಲೆ2100 ರೂಗೆಏರಲಿದೆ. 2500 ರೂ.ಟಿಕೆಟ್ ಬೆಲೆ 3500 ರೂ.ಆಗಲಿದೆ.

### ಸಾಮಾನ್ಯರಿಗೆ ಜಿಎಸ್‌ಟಿ ಬರೆ

ಜಿಎಸ್ಟಿಯ ಹೊರೆಯನ್ನು ಸಾಮಾನ್ಯ ನಾಗರಿಕರು ಅಸಮಾನವಾಗಿ ಭರಿಸುತ್ತಾರೆ. ಒಟ್ಟು ಜಿಎಸ್ಟಿಯ ಮೂರನೇ ಎರಡರಷ್ಟು, ಅಂದರೆ ಶೇ. 64 ರಷ್ಟು ಬಡವರು ಮತ್ತು ಮಧ್ಯಮ ವರ್ಗದವರ ಜೇಬಿನಿಂದ ಬರುತ್ತದೆ. ಆದರೆ ಜಿಎಸ್ಟಿಯ ಕೇವಲ ಶೇ. 3 ರಷ್ಟು ಮಾತ್ರ ಕೋಟ್ಯಾಧಿಪತಿಗಳಿಂದ ಸಂಗ್ರಹವಾಗುತ್ತದೆ, ಆದರೆಕಾರ್ಪೊರೇಟ್ ತೆರಿಗೆದರವನ್ನುಶೇ.30 ರಿಂದಶೇ.22ಕ್ಕೆಇಳಿಸಲಾಗಿದೆ ಎಂದು ಮಲ್ಲಿಕಾರ್ಜುನ ಖರ್ಗೆ ದುರಿದ್ದಾರೆ.

> ಜಿಎಸ್ಟಿ ಮಂಡಳಿ ಸಭೆಯಲ್ಲಿ ಭಾಗವಹಿಸಿದ್ದವರು ಮೌನವಾದರೆ ಅಪಾಯ ಹೆಚ್ಚು. ಈ ಎರಡು ಸ್ಲ್ಯಾಬ್‌ಳ ಜಿಎಸ್ಟಿ ರಚನೆಯನ್ನು ದೇಶಾದ್ಯಂತ ಜಾರಿಗೊಳಿಸಿದರೆ ಕೇಂದ್ರ ಸರ್ಕಾರವು ಪ್ರತಿ ವರ್ಷ 15,000 ಕೋಟಿ ರೂ.ಗಳನ್ನು ಕಳೆದುಕೊಳ್ಳುತ್ತದೆ
>
> -ಸಿದ್ದರಾಮಯ್ಯ, ಮುಖ್ಯಮಂತ್ರಿ

### ಯಾವುದರ ಬೆಲೆ ಕಡಿಮೆ?

ತೆರಿಗೆ ದರವು ಶೇಕಡಾ 28 ರಿಂದ ಶೇಕಡಾ 18 ಕ್ಕೆ ಇಳಿಯುವುದರಿಂದಸಿಮೆಂಟ್‌ಬೆಲೆಕಡಿಮೆಯಾಗಲಿದೆ. 1,200ಸಿಸಿಗಿಂತಕಡಿಮೆ,4,000ಎಂಎಂಗಿಂತಹೆಚ್ಚಿಲ್ಲದ ಪೆಟ್ರೋಲ್, ಸಿಎನ್ಜಿ ವಾಹನ, 1,500ಸಿಸಿ,4,000 ಎಂಎಂಉದ್ದದಡೀಸೆಲ್‌ವಾಹನಗಳುಸಹಶೇಕಡಾ 28 ರಿಂದಶೇಕಡಾ18ಕ್ಕೆಇಳಿಯುತ್ತವೆ. ಪೆಟ್ರೋಲ್ ಗೆ1,200 ಸಿಸಿ, ಡೀಸೆಲ್‌ಗೆ1,500 ಸಿಸಿಗಿಂತದೊಡ್ಡದಾದ ಕಾರುಗಳಿಗೆ ಶೇ.40 ಶುಲ್ಕ ವಿಧಿಸಲಾಗುತ್ತದೆ.

### ಯಾವುದರ ಬೆಲೆ ಅಗ್ಗ..?

ದೈನಂದಿನಅಗತ್ಯವಸ್ತುಗಳುಮತ್ತುವೈಯಕ್ತಿಕಆರೈಕೆ ಕೂದಲಿನ ಎಣ್ಣೆ, ಶಾಂಪೂ, ಟೂತ್‌ಪೇಸ್ಟ್, ಸೋಪ್, ಟೂತ್ ಬ್ರಷ್‌ಗಳು, ಶೇವಿಂಗ್ ಕ್ರೀಮ್, ಬೆಣ್ಣೆ, ತುಪ್ಪ,ಪನೀರ್‌ಮತ್ತುಪ್ಯಾಕ್‌ಮಾಡಿದತಿಂಡಿಗಳಾದ ನಮ್ಕೀನ್ ಮತ್ತು ಮಿಶ್ರಣಗಳಂತಹ ಉತ್ಪನ್ನಗಳಿಗೆ ಈಗ ಶೇ.5 ತೆರಿಗೆ ವಿಧಿಸಲಾಗುವುದು, ಇದರಿಂದ ಈ ವಸ್ತುಗಳ ಮೇಲಿನ ತೆರಿಗೆ ಶೇಕಡಾ 12ರಿಂದ 18ರಿಂದ ಶೇಕಡಾ 12ಕ್ಕೆ ಇಳಿಯಲಿದೆ.

## ಉತ್ಪಾದನೆ ಹೆಚ್ಚಳಕ್ಕೆ ಇದು ಪೂರಕ: ಶಾಸಕ

**ಬೆಂಗಳೂರು:** ಜಿಎಸ್‌ಟಿ ಮಂಡಳಿ ಸಭೆಯಲ್ಲಿ ಒಂದು ಕ್ರಾಂತಿಕಾರಿ, ಐತಿಹಾಸಿಕ ಸುಧಾರಣೆಯ ನಿರ್ಧಾರವನ್ನು ಮಾಡಿದ್ದಾರೆ ಎಂದು ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಡಾ. ಸಿ.ಎನ್. ಅಶ್ವತ್ಥನಾರಾಯಣ್ ಅವರು ತಿಳಿಸಿದರು. ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಜನತೆ ಮತ್ತು ಬಿಜೆಪಿ ರಾಜ್ಯ ಘಟಕವು ಇದನ್ನು ಹೃದಯಪೂರ್ವಕವಾಗಿ ಸ್ವಾಗತಿಸುತ್ತದೆ. ಧನ್ಯವಾದ ಸಮರ್ಪಿಸಲು ಬಯಸುವುದಾಗಿ ಹೇಳಿದರು. ಹಿಂದೆ ದೇಶದಲ್ಲಿ ಒಂದು ದೇಶ, ಒಂದು ಮಾರುಕಟ್ಟೆ ಇರಲಿಲ್ಲ; ರಾಜ್ಯ ರಾಜ್ಯದ ನಡುವೆ ನಿರ್ಬಂಧ, ಅಡಚಣೆಗಳಿದ್ದವು. ಇದನ್ನು ಉತ್ತಮಗೊಳಿಸಲು ನಮ್ಮೆಲ್ಲರ ನೆಚ್ಚಿನ ಪ್ರಧಾನಿ ನರೇಂದ್ರ ಮೋದಿಜೀ ಅವರು ಮತ್ತು ಎಲ್ಲ ರಾಜ್ಯ ಸರಕಾರಗಳು ನಿರ್ಧಾರ ಮಾಡಿದ್ದವು. ಒಮ್ಮತ, ಒಗ್ಗಟ್ಟಿನಿಂದ ಜಿಎಸ್‌ಟಿ ಅನುಷ್ಠಾನ ಮಾಡಲಾಯಿತು ಎಂದು ವಿವರಿಸಿದರು. ಕೈಗಾರಿಕಾ ವಲಯ, ನಾಗರಿಕರ ಬೇಡಿಕೆಯ ಅನುಗುಣವಾಗಿ ಈಗ ಸ್ಲ್ಯಾಬ್‌ಗಳಲ್ಲಿ ಬದಲಾವಣೆ ತರಲಾಗಿದೆ. ಸಡಿಲ- ಸರಳ- ಸುಧಾರಿತ ದರಗಳನ್ನು ಜಾರಿಗೊಳಿಸಲಾಗುತ್ತಿದೆ. ಎರಡು ಸ್ಲ್ಯಾಬ್ ವ್ಯವಸ್ಥೆ ತರಲು ಕೋರಿಕೆ ಇತ್ತು ಎಂದು ತಿಳಿಸಿದರು. ಶೇ 12 ಮತ್ತು ಶೇ 28 ಇದ್ದುದನ್ನು ತೆಗೆದುಹಾಕಿ ಈಗ ಶೇ 5 ಮತ್ತು ಶೇ 18 ಸ್ಲ್ಯಾಬ್ ಜಾರಿ ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

## ಎಸ್‌ಐಟಿ ಮುಂದೆ ಅಭಿಷೇಕ್ ಕಣ್ಣೀರು

**ಮಂಗಳೂರು:** ಧರ್ಮಸ್ಥಳದಲ್ಲಿ ಅನ್ಯಾಯ, ಅತ್ಯಾಚಾರಗಳು, ಅಕ್ರಮಗಳಾಗಿವೆ ಎಂದು ತಮ್ಮ ಯುಟ್ಯೂಬ್ ಚಾನೆಲ್ ನಲ್ಲಿ ಹೇಳಿಕೊಂಡಿದ್ದ ಅಭಿಷೇಕ್, ಈ ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿ ಅಧಿಕಾರಿಗಳ ಮುಂದೆ ಕಣ್ಣೀರು ಹಾಕಿದ್ದಾನೆ. ಆ. 3ರಂದು ಎಸ್‌ಐಟಿ ಮುಂದೆ ವಿಚಾರಣೆಗಾಗಿ ಆಗಮಿಸಿದ್ದ ಅಭಿಷೇಕ್ ನನ್ನು ತಡರಾತ್ರಿ 2.30ರವರೆಗೆ ಪೊಲೀಸ್ ಅಧಿಕಾರಿಗಳು ವಿಚಾರಣೆಗೊಳಪಡಿಸಿದ್ದರು.

ಆ ಸಂದರ್ಭದಲ್ಲಿ ಕೆಲವು ಸ್ಫೋಟಕ ಮಾಹಿತಿಗಳನ್ನು ಆತ ಅಧಿಕಾರಿಗಳಿಗೆ ನೀಡಿದ್ದ ಎಂದು ತಿಳಿದುಬಂದಿದೆ. ಖಾಸಗಿ ಮಾಧ್ಯಮವೊಂದರಲ್ಲಿ ಪ್ರಸಾರದ ಮಾಹಿತಿಯ ಪ್ರಕಾರ, ''ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಮಾಡಿದರೆ ತನ್ನ ಯುಟ್ಯೂಬ್



ಚಾನೆಲ್ ಗೆ ಹೆಚ್ಚಿನ ಲೈಕ್ಸ್ ಹಾಗೂ ವ್ಯೂಸ್ ಬರುತ್ತದೆ ಎಂಬ ಕಾರಣದಿಂದ ಈ ಕೆಲಸಕ್ಕೆ ಕೈ ಹಾಕಿದ್ದಾಗಿ ತಿಳಿಸಿದ್ದಾನೆ.

## 15 ಸಾವಿರ ಕೋಟಿ ರೂ.ಕೊರತೆ

**ಬೆಂಗಳೂರು:** ಕೇಂದ್ರ ಸರ್ಕಾರ ಜಿಎಸ್‌ಟಿ ವ್ಯವಸ್ಥೆ ಜಾರಿಗೆ ತಂದು ಜನರಿಗೆ ಸಾಕಷ್ಟು ಹೊರೆ ಮಾಡಿದ್ದರು. ಬಡವರು, ಮಧ್ಯಮವರ್ಗದ ಮೇಲೆ ಹೊಡೆತ ಬಿದ್ದಿತ್ತು. ರಾಜ್ಯದಿಂದ 4.5 ಲಕ್ಷ ಕೋಟಿ ಜಿಎಸ್‌ಟಿ ಸಂಗ್ರಹವಾಗಿ ಕೇಂದ್ರ ಸರ್ಕಾರಕ್ಕೆ ಹೋಗುತ್ತಿತ್ತು. ಅಲ್ಲಿಂದ ನಮಗೆ ತೀರಾ ಕಡಿಮೆ ವಾಪಸ್ ಬರುತ್ತಿತ್ತು ಎಂದು



ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಎಸ್‌ಟಿ ಸ್ತರ, ದರ ಇಳಿಕೆಯ ಬಳಿಕ ಕರ್ನಾಟಕಕ್ಕೆ 15 ಸಾವಿರ ಕೋಟಿ ಕೊರತೆಯಾಗುವುದು. ಇದನ್ನು ಕೇಂದ್ರ ಸರ್ಕಾರ ಕೊಡಬೇಕು. ನಮಗೆ ಅಲ್ಲ ಎಲ್ಲ ರಾಜ್ಯಗಳಿಗೂ ಕೊಡಬೇಕು. ರಾಜ್ಯ ಸರ್ಕಾರ ಕೊಡುವ 1 ರೂಪಾಯಿ ತೆರಿಗೆಯಲ್ಲಿ ಹಣದಲ್ಲಿ 12 ಪೈಸೆ ಮಾತ್ರ ಕೊಡುತ್ತಿದೆ ಎಂದು ಲೆಕ್ಕ ಹೇಳಿದರು.

**ಜನರಿಗೆ ಅನುಕೂಲವಾಗಲಿದೆ:** ಜಿಎಸ್‌ಟಿ ಇಳಿಕೆ ಬಿಹಾರ ಚುನಾವಣೆ ಮೇಲೆ ಪರಿಣಾಮ ಬೀರುತ್ತಾ ಎಂಬ ಪ್ರಶ್ನೆಗೆ, ಕೇಂದ್ರ ಸರ್ಕಾರದ ಈ ನಿರ್ಧಾರ ಜನರಿಗೆ ಅನುಕೂಲ ಆಗುತ್ತದೆ. ರಾಜ್ಯ ಸರ್ಕಾರಕ್ಕೆ ನಷ್ಟವಾಗುತ್ತೆ. ನಮ್ಮಿಂದ ಹೆಚ್ಚುವರಿ ಕಲೆಕ್ಟ್ ಮಾಡ್ತಿದ್ದಾರೆ. ಆದರೆ, ನಮಗೆ ಕೊಡೋದು ಅತ್ಯಲ್ಪ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇನ್ನು, ರಾಜಣ್ಣ ಬಿಜೆಪಿಗೆ ಹೋಗುವ ವಿಚಾರದ ಕುರಿತು ಪ್ರತಿಕ್ರಿಯಿಸಿ, ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರು ಕಾಂಗ್ರೆಸ್ ಬಿಟ್ಟು ಎಲ್ಲೂ ಹೋಗಲ್ಲ. ಅವರು ಇಲ್ಲೇ ಇರ್ತಾರೆ. ನಾನು ಅವರ ಹುಟ್ಟುಹಬ್ಬಕ್ಕೆ ಹೋಗಿದ್ದೆ. ಅವರು 1972 ರಿಂದಲೂ ಕಾಂಗ್ರೆಸ್‌ನಲ್ಲಿದ್ದಾರೆ. ಅವರು ಎಲ್ಲೂ ಹೋಗಲ್ಲ ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿದರು. ಬುರುಡೆ ಕೇಸ್ ತಾರ್ಕಿಕ ಅಂತ್ಯಕ್ಕೆ ಬರುತ್ತೆ: ಧರ್ಮಸ್ಥಳ ವಿರುದ್ಧ ಷಡ್ಯಂತ್ರದ ಕುರಿತು ಸ್ವಾಮೀಜಿಗಳಿಂದ ಎನ್ ಐಎ ತನಿಖೆಗೆ ಒತ್ತಾಯ ಕೇಳಿಬರುತ್ತಿರುವ ವಿಚಾರವಾಗಿ ಮಾತನಾಡಿ, ಪ್ರಕರಣವನ್ನು ಎಸ್‌ಐಟಿ ತನಿಖೆ ಮಾಡುತ್ತಿದೆ. ಸರಿಯಾದ ದಾರಿಯಲ್ಲೇ ತನಿಖೆ ನಡೆಯುತ್ತಿದೆ. ಬಿಜೆಪಿಯವರು ಎನ್‌ಐಎ ತನಿಖೆಗೆ ನೀಡಿ ಎಂದು ಆಗ್ರಹಿಸುತ್ತಿದ್ದಾರೆ ಎಂದರು.

## ಬ್ರಿಮ್ಸ್ ಆಸ್ಪತ್ರೆ ಬಳಿ ಕಸದ ರಾಶಿ

**ಬೀದರ್:** ನಗರದ ಬೃಹತ್ ವೈದ್ಯಕೀಯ ಸಂಸ್ಥೆ ಆವರಣದಲ್ಲಿ ಕಸದ ರಾಶಿ ಹೆಚ್ಚಾದ ಪರಿಣಾಮ ಸಾರ್ವಜನಿಕರ ಆರೋಗ್ಯದ ಹಿನ್ನಲೆಯಲ್ಲಿ ಆತಂಕ ವ್ಯಕ್ತಪಡಿಸಿದ್ದಾರೆ. ಆಸ್ಪತ್ರೆಯ ವಿವಿಧ ಭಾಗಗಳಲ್ಲಿ ಪ್ಲಾಸ್ಟಿಕ್ ಮುಕ್ತಾದಿ ವಸ್ತುಗಳು, ಬಾಯೋಮೆಡಿಕಲ್ ತ್ಯಾಜ್ಯ, ಆಹಾರ ಉಳಿಪಡಿಕೆ ಮೊದಲಾದವು ಸರಿಯಾಗಿ ವಿಲೇವಾರಿ ಆಗದೆ ಬಿದ್ದಿರುವುದು ಕಂಡುಬಂದಿದೆ.

ರೋಗಿಗಳು, ಭೇಟಿ ನೀಡುವ ಸಂಬಂಧಿಕರು ಮತ್ತು ಆಸ್ಪತ್ರೆಯ ಸಿಬ್ಬಂದಿ ಈ ಅನಿಯಮಿತತೆಗಳಿಂದ ತೊಂದರೆ ಅನುಭವಿಸುತ್ತಿದ್ದಾರೆ. ಆದರೂ ಕೂಡ, ಆಡಳಿತವು ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂಬ ಆರೋಪ ವ್ಯಕ್ತವಾಗಿದೆ.

**ಸಾರ್ವಜನಿಕರ ಒತ್ತಾಯ:** ಸ್ಥಳೀಯರು ಮತ್ತು ಸಮಾಜಸೇವಕರು ಆಸ್ಪತ್ರೆಯಲ್ಲಿ ಶೀಘ್ರ ಸ್ವಚ್ಛತೆ ಅಭಿಯಾನ ಕೈಗೊಳ್ಳಬೇಕೆಂದು ಹಾಗೂ ಅಧಿಕಾರಿಗಳನ್ನು ಹೊಣೆಪಡಿಸಬೇಕೆಂದು ಆಗ್ರಹಿಸುತ್ತಿದ್ದಾರೆ. ಜಿಲ್ಲೆಯ ಉಸ್ತುವಾರಿ ಸಚಿವರು, ಪೌರಾಡಳಿತ ಸಚಿವರು, ಹಾಗೂ ವೈದ್ಯಕೀಯ ಸಚಿವರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಒಂದು ವೇಳೆ ಕಸ ತೆಗೆಯದೇ ಇದ್ದರೆ ಈ ಬಗ್ಗೆ ಲಿಖಿತವಾಗಿ ದೇಶದ ಪ್ರಧಾನ ಮಂತ್ರಿಗಳಿಗೆ ಪತ್ರ ಬರೆಯಲಾಗುತ್ತದೆ ಎಂದು ಸಾರ್ವಜನಿಕ ರು ಎಚ್ಚರಿಸಿದ್ದಾರೆ. ಬೀದರ್ ಬ್ರಿಮ್ಸ್ ಆಸ್ಪತ್ರೆ ಮಾದರಿ ಆಸ್ಪತ್ರೆಯಾಗಬೇಕಾಗಿತ್ತು. ಆಸ್ಪತ್ರೆ ಯ ಅವರಣದಲ್ಲಿಯೇ ಕಸದ ರಾಶಿ ಹಾಕುವುದರ ಮೂಲಕ ತನ್ನ ಉದ್ದಟನವನ್ನು ತೋರಿಸುತ್ತಿದೆ. ಜಿಲ್ಲಾಡಳಿತ ತಕ್ಷಣ ಮದ್ಯ ಸ್ಥಿಕೆ ವಹಿಸಿ ಬ್ರಿಮ್ಸ್ ಅವರಣದಲ್ಲಿ ಹಾಕಲಾಗಿರುವ ಕಸವನ್ನು ಸ್ವಚ್ಚತೆಗೆ ಮಾಡಿಸಲು ಜನರು ಒತ್ತಾಯಿಸಿದ್ದಾರೆ.



## ರೈತರ ಪರಿಹಾರಕ್ಕೆ ಸಿಎಂಗೆ ಮನವಿ

**ಬೀದರ್:** ಜಿಲ್ಲೆಯ ವಿವಿಧ ಭಾಗಗಳಲ್ಲಿ ಭಾರಿ ಅನಾವೃಷ್ಟಿಯಿಂದಾಗಿ ನಷ್ಟ ಅನುಭವಿಸುತ್ತಿರುವ ರೈತರಿಗೆ ತುರ್ತು ಪರಿಹಾರ ನೀಡಬೇಕೆಂದು ಮಾಜಿ ಸಚಿವ ರಾಜಶೇಖರ ಪಾಟೀಲ ಅವರು ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದ್ದಾರೆ.




ತಮ್ಮ ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ ಸಾವಿರಾರು ಎಕರೆಗಳಲ್ಲಿ ಬೆಳೆ ಹಾನಿಯಾಗಿದೆ. ಈ ಹಿನ್ನೆಲೆಯಲ್ಲಿ ರೈತರ ಬದುಕು ತುಂಬಾ ಸಂಕಷ್ಟಕ್ಕೆ ಒಳಗಾಗಿದೆ. ಈ ಪರಿಸ್ಥಿತಿಯನ್ನು ಮನಗಂಡು, ಸರ್ಕಾರ ತಕ್ಷಣ ಸಂತ್ರಸ್ತ ರೈತರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಪಾಟೀಲ ಹೇಳಿದರು

ರಾಜ್ಯ ಸರ್ಕಾರ ತುರ್ತು ಪರಿಹಾರ ನೀಡಲು ಕ್ರಮ ಕೈಗೊಳ್ಳಬೇಕೆಂದು ಅವರು ಒತ್ತಾಯಿಸಿದರು. ರೈತರು ದೇಶದ ಹೃದಯವಾಗಿದ್ದಾರೆ. ಅವರನ್ನು ಬಲಪಡಿಸದೇ ರಾಷ್ಟ್ರದ ಅಭಿವೃದ್ಧಿ ಸಾಧ್ಯವಿಲ್ಲ, ಎಂದು ಪಾಟೀಲ ಹೇಳಿದರು. ಹುಮನಾಬಾದ್ ವಿಧಾನ ಸಭಾ ಕ್ಷೇತ್ರಕ್ಕೆ ವಿಶೇಷ ಪ್ಯಾಕೆಜ್ ಘೋಷಣೆ ಮಾಡಬೇಕು ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ರವರಿಗೆ ಮನವಿ ಮಾಡಿದ್ದಾರೆ.

## ಬ್ಯಾಲೆಟ್ ಪೇಪರ್ ಎಲೆಕ್ಷನ್: ಅಸ್ತು

**ಬೆಂಗಳೂರು:** ದೇಶದಲ್ಲಿ ಇವಿಎಂ ಚಾಲೆಂಜ್ ಮಾಡ್ತಿರುವ ಕಾಂಗ್ರೆಸ್ ರಾಜ್ಯದಲ್ಲಿ ಬ್ಯಾಲೆಟ್ ಪೇಪರ್ ಮೊರೆ ಹೋಗ್ತಿದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್ ಬಳಕೆಗೆ ಅಗತ್ಯ ಕಾನೂನು ತರಲು ಕ್ಯಾಬಿನೆಟ್ ಒಪ್ಪಿಗೆ ಸೂಚಿಸಿದೆ.

ಅಲ್ಲದೆ ಸ್ಥಳಿಯ ಸಂಸ್ಥೆಗಳ ಚುನಾವಣೆಗೆ ಮತದಾರರ ಪಟ್ಟಿಯನ್ನು ತಯಾರಿಸಲು, ಪರಿಷ್ಕರಣೆ ಮಾಡಲು ಅಗತ್ಯ ಕಾನೂನು ಮಾಡಲು ನಿಯಮಾವಳಿ




ರೂಪಿಸಲು ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸ್ಸು ಮಾಡಲು ಸಂಪುಟ ಒಪ್ಪಿಗೆ ಸಿಕ್ಕಿದೆ. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ಮಾಡಲು ಕಾಯ್ದೆಗೆ ತಿದ್ದುಪಡಿ ತರಬೇಕಿದ್ದು, ಸುಗ್ರೀವಾಜ್ಞೆ ಮೂಲಕ ಅಥವಾ ವಿಧಾನಸಭೆಯಲ್ಲಿ ಮಸೂದೆ ಅಂಗೀಕಾರ ಪಡೆಯಬೇಕಿದೆ. ಇಲ್ಲ ಸಚಿವ ಸಂಪುಟ ಶಿಫಾರಸ್ಸನ್ನ ಚುನಾವಣಾ ಆಯೋಗಕ್ಕೆ ಕಳುಹಿಸಬಹುದು. ಆಗ ಚುನಾವಣಾ ಆಯೋಗ ಒಪ್ಪಬಹುದು ಇಲ್ಲ. ಇಲ್ಲ ಬಿಡಬಹುದು. ಹಾಗಾಗಿ ಕಾಂಗ್ರೆಸ್ ಸರ್ಕಾರದ ಈ ಮಹತ್ವದ ನಿರ್ಧಾರ ಮುಂದಿನ ದಿನಗಳಲ್ಲಿ ರಾಜಕೀಯ ತಿರುವು ಪಡೆದುಕೊಳ್ಳುವ ಸಾಧ್ಯತೆ ಇದೆ.

ಗ್ರಾಮ ಪಂಚಾಯತ್ ಚುನಾವಣೆಗಳನ್ನ ಬಿಟ್ಟು ಉಳಿದ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಇವಿಎಂ ಬಳಕೆ ಮಾಡಲಾಗುತ್ತಿತ್ತು. ಆದರೆ ಬೀದರ್ ಜಿಲ್ಲೆಯಲ್ಲಿ ಮಾತ್ರ ಪ್ರಯೋಗಿಕವಾಗಿ ಗ್ರಾಮಪಂಚಾಯಿತ್ತಿ ಚುನಾವಣೆಗೆ ಇವಿಎಂ ಬಳಕೆ ಮಾಡಲಾಗಿತ್ತು. ಈ ಹೊಸ ಕಾನೂನಿಗೆ ಒಪ್ಪಿಗೆ ಸಿಕ್ಕಿದ್ರೆ, ಗ್ರೇಟರ್ ಬೆಂಗಳೂರು ಚುನಾವಣೆ ಸೇರಿದಂತೆ ಎಲ್ಲ ಮಹಾನಗರಪಾಲಿಕೆ, ನಗರಸಭೆ, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಚುನಾವಣೆಗಳಿಗೂ ಬ್ಯಾಲೆಟ್ ಪೇಪರ್ ಮೂಲಕ ಮತದಾನ ಆಗಲಿದೆ.

● ಮೇರಿ ಕೋಮ್: ಆರು ವಿಶ್ವ ಚಾಂಪಿಯನ್ಶಿಪ್ಗಳಲ್ಲಿ ಪದಕ ಗೆದ್ದ ಏಕೈಕ ಮಹಿಳಾ ಬಾಕ್ಸರ್. 2014ರ ಏಷ್ಯನ್ ಕ್ರೀಡಾಕೂಟದಲ್ಲಿ ಚಿನ್ನದ ಪದಕ ಗೆದ್ದ ಮೊದಲ ಭಾರತೀಯ ಮಹಿಳಾ ಬಾಕ್ಸರ್

# ಸೆ. 6 ರಂದು ಆಳಂದ ನೂತನ ಬಸ್ ನಿಲ್ದಾಣದ ಶಂಕುಸ್ಥಾಪನೆ

ಕಲಬುರಗಿ,ಸೆ.04–ಕಲ್ಯಾಣ ಕರ್ನಾಟಕರಸ್ತೆಸಾರಿಗೆನಿಗಮದಿಂದ ಆಳಂದ ಪಟ್ಟಣದಲ್ಲಿ ನೂತನವಾಗಿ ನಿರ್ಮಾಣವಾಗಲಿರುವ ಬಸ್ ನಿಲ್ದಾಣದ ನಿರ್ಮಾಣ ಕಾಮಗಾರಿಗೆ ಸೆಪ್ಟೆಂಬರ್ 6 ರಂದು ಶನಿವಾರ ಮಧ್ಯಾಹ್ನ 1 ಗಂಟೆಗೆ ಆಳಂದ ಕೇಂದ್ರ ಬಸ್ ನಿಲ್ದಾಣದಲ್ಲಿ ರಾಜ್ಯದ ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಶಂಕುಸ್ಥಾಪನೆ ನೆರವೇರಿಸಿ, ನಂತರ ಆಳಂದ ವೀರಶೈವ ಲಿಂಗಾಯತ ಭವನದಲ್ಲಿ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡುವರು.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ಹಾಗೂ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಗೌರವ ಉಪಸ್ಥಿತಿವಹಿಸುವರು. ರಾಜ್ಯದ ನಗರಾಭಿವೃದ್ಧಿ ಮತ್ತು ಪಟ್ಟಣ ಯೋಜನೆ ಸಚಿವರಾದ ಬೈರತಿ ಸುರೇಶ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ ಹಾಗೂ ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ತಿಮ್ಮಣ್ಣಪ್ಪ ಕಮಕನೂರ, ಡಾ. ತಳವಾರ ಸಾಬಣ್ಣ, ಜಗದೇವ ಗುತ್ತೇದಾರ್, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮುಹಮ್ಮದ್ ಅಲಿ ಅಲ್ ಹುಸೇನಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ, ಆಳಂದ ಪುರಸಭೆ ಅಧ್ಯಕ್ಷೆ ಫಿರ್ದೊಸ್ ಅನ್ಸಾರಿ ಅತಿಥಿಗಳಾಗಿ ಪಾಲ್ಗೊಳ್ಳುವರು.

ಸಾರಿಗೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ. ಎನ್.ವಿ.ಪ್ರಸಾದ, ಬೆಂಗಳೂರಿನ ನಗರ ಭೂ ಸಾರಿಗೆ ನಿರ್ದೇಶನಾಲಯದ ಆಯುಕ್ತ ದೀಪಾ ಚೋಳನ್, ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸುಲು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಬಿ. ಸುಶೀಲಾ, ಮುಖ್ಯ ಕಾಮಗಾರಿ ಅಭಿಯಂತರ ಚೆನ್ನಣ್ಣ ಬೋರಯ್ಯ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕಲಬುರಗಿ ವಿಭಾಗ–2ರ ವಿಭಾಗೀಯ ನಿಯಂತ್ರಣಾಧಿಕಾರಿ ಸುನಿಲ್ ಕುಮಾರ ಚಂದರಗಿ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

# ಮಾದಕ ಮುಕ್ತ ಕರ್ನಾಟಕ ಅಭಿಯಾನ ಜಾಗೃತಿ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಸೆ.4:ತಾಲೂಕಿನ ಡಿಗ್ಗಿ ಗ್ರಾಮ ಪಂಚಾಯಿತಿಯಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಯೋಜನೆಯಡಿ ಪರಿವರ್ತನೆ ಮಾದಕ ಮುಕ್ತ ಕರ್ನಾಟಕ ಅಭಿಯಾನ ಜಾಗೃತಿ ಕಾರ್ಯಕ್ರಮವನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಜರುಗಿತು.

ಈ ವೇಳೆ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಕವಿತಾ ಬಿರಾದಾರ ಅವರು ಮಾತನಾಡಿ, ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ ನೀವೆಲ್ಲ ವಿದ್ಯಾರ್ಥಿಗಳು ಮಾದಕ ವಸ್ತುಗಳಿಂದ ದೂರವಿರಬೇಕು. ಇಂತಹ ಕೆಟ್ಟ ಚಟಗಳಿಂದ ಎಷ್ಟೋ ಜನರ ಜೀವನವೇ ಹಾಳಾಗಿದೆ. ಆರೋಗ್ಯವೇ ಭಾಗ್ಯ ಎಂಬಂತೆ ನಿಮ್ಮ ಆರೋಗ್ಯದ ಬಗ್ಗೆ ನೀವು ಗಮನ ಹರಿಸಬೇಕು. ಆರೋಗ್ಯವಿದ್ದರೆ ಎಂತಹ ಪರಿಸ್ಥಿತಿಯನ್ನು ಎದುರಿಸಲು ಸಾಧ್ಯ ಒಂದು ವೇಳೆ ಆರೋಗ್ಯವೇ ಹಾಳಾದರೆ ಏನು ಸಾಧಿಸಲು ಆಗದು. ನಿಮ್ಮ ಕುಟುಂಬದಲ್ಲಿ ಸಿಗುವ ಪೌಷ್ಟಿಕಾಹಾರ ಸೇವನೆ ಮಾಡಬೇಕು ಎಂದು ತಿಳಿಸಿದರು. ನಂತರ ಎಲ್ಲ ಮಕ್ಕಳಿಗೆ ಮಾದಕ ಮುಕ್ತ ಕರ್ನಾಟಕ ಅಭಿಯಾನ ಜಾಗೃತಿ ಪ್ರತಿಜ್ಞೆ ಮಾಡಿಸಿದರು.

ಕಾರ್ಯಕ್ರಮದಲ್ಲಿ ಶಾಲೆ ಮುಖ್ಯಗುರುಗಳಾದ ಸಂತೋಷ ಬಿರಾದಾರ, ಮುಖಂಡರಾದ ಸಂಗಮನಾಥ ಬಿರಾದಾರ, ಪಾಲಕ ಪ್ರತಿನಿಧಿ ನಾಮದೇವ, ಅಂಗನವಾಡಿ ಕಾರ್ಯಕರ್ತೆ ಸವಿತಾ ರಾಂಪುರೆ, ಆಶಾ ಕಾರ್ಯಕರ್ತೆ ದೇವಿಕಾ ಪಂಚಾಳ, ಸ್ವ ಸಹಾಯ ಸಂಘದ ಮಹಿಳೆಯರಾದ ಪುಷ್ಪ, ಭಾಗ್ಯಶ್ರೀ, ಶಶಿಕಲಾ, ಪರ್ಯಾಗಬಾಯಿ ಶಾಲೆ ಸಿಬ್ಬಂದಿ ವರ್ಗದವರು ಹಾಗೂ ಶಾಲಾ ಮಕ್ಕಳು ಭಾಗವಹಿಸಿದರು.

# ಈದ್ ಮಿಲಾದ್: ಇಂದಿನಿಂದ ವಿವಿಧ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.4–ಸೀರತ್ ಕಮೀಟಿ ಹಾಗೂ ಅಂಜುಮನ್ ರಿಫಾಹೆ ಆಮ್‌ನಿಂದ ಈದ್ ಮಿಲಾದ್ ಹಬ್ಬದ ಅಂಗವಾಗಿ ಸೆ.5ರಿಂದ 10ರವರೆಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಂಜುಮನ್ ರಿಫಾಹೆ ಆಮ್ ಕಾರ್ಯದರ್ಶಿ ಸಿಕಂದರ ಅಥಣಿ ತಿಳಿಸಿದರು. ನಗರದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹಬ್ಬದ ಪ್ರಯುಕ್ತ ಸೆ.5ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು–ಹಂಪಲ ವಿತರಣೆ, 11 ಗಂಟೆಗೆ ರಕ್ತದಾನ ಹಾಗೂ ಉಚಿತ ಆರೋಗ್ಯ ಶಿಬಿರವನ್ನು ನವನಗರದ ಅಂಜುಮನ್ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದರು. ಸೆ.6ರಂದು ಸಂಜೆ 7 ಗಂಟೆಗೆ ಪ್ರವಚನ ನಡೆಯಲಿದ್ದು, ದಿವ್ಯ ಸಾನಿಧ್ಯವನ್ನು ಸಮೀಉಲ್ಲಾ ಖಾದರಿ, ಡಾ.ಬಸವಲಿಂಗ ಸ್ವಾಮೀಜಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪೂರ, ಜಿಲ್ಲೆಯ ಶಾಸಕರು ಸೇರಿದಂತೆ ಅನೇಕ ಗಣ್ಯರು ಆಗಮಿಸಲಿದ್ದಾರೆ.

ಸೆ.7ರಂದು ಮುಂಜಾನೆ 8 ಗಂಟೆಗೆ ಶಾಲಾ ಮಕ್ಕಳ ಕಾರ್ಯಕ್ರಮ ಜರುಗಲಿದೆ. ಮಧ್ಯಾಹ್ನ 3 ಗಂ–ಟೆಗೆ ಹೈಸ್ಕೂಲ್, ಕಾಲೇಜ್ ಮಕ್ಕಳ ಕಾರ್ಯಕ್ರಮ. ಸೆ.8ರಂದು ರಸಪ್ರಶ್ನೆ ಸ್ಪರ್ಧೆ ಬೆಳಿಗ್ಗೆ 8 ಗಂಟೆಗೆ ನಡೆಯಲಿದೆ. ಮಹಿಳೆಯರ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷೆ ಬಾಯಕ್ಕ ಮೇಟಿ ಉದ್ಘಾಟಿಸಲಿದ್ದಾರೆ.

ಸೆ.9ರಂದು ನಗರದ ಹಳೆ ಅಂಜುಮನ್ ಸಂಸ್ಥೆ ಆವರಣದಿಂದ ಮುಂಜಾನೆ 9ಗಂಟೆಗೆ ಭವ್ಯ ಮೆರವಣಿಗೆ ನಡೆಯಲಿದ್ದು, ಶಾಸಕ ಎಚ್.ವೈ. ಮೇಟಿ ಚಾಲನೆ ನೀಡಲಿದ್ದಾರೆ. ಸೆ.10ರಂದು ಮುಂಜಾನೆ 10ಗಂ–ಟೆಗೆ ನವನಗರದ ಅಂಜುಮನ್ ಸಂಸ್ಥೆಯ ಆವರಣದಿಂದ ಭವ್ಯ ಮೆರವಣಿಗೆ ನಡೆಯಲಿದೆ ಎಂದು ಸಿಖಂದರ ಅಥಣಿ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಸ್ಥೆಯ ಅಧ್ಯಕ್ಷ ಅಯುಬ್ ಪುಣೇಕರ್, ಅಕ್ಬರ್‌ಮುಲ್ಲಾ, ನಬಿಸಾಬ್ ರಕ್ಕಸಗಿ, ಮೆಹಬೂಬಸಾಬ್ ಮುದ್ದೇಬಿಹಾಳ, ಅಕ್ಬರಸಾಬ್ ಮೀರಜ್‌ಕರ, ಯಾಸೀನ್ ನದಾಫ ಇದ್ದರು.

# ವಡಗೇರಾ ತಾಲೂಕು ಪ್ರಜಾಸೌಧ ಅಡಿಗಲ್ಲು ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸೆ 04 : ಕಂದಾಯ ಇಲಾಖೆ ವತಿಯಿಂದ ವಡಗೇರಾ ತಾಲೂಕು ಪ್ರಜಾಸೌಧ ಅಡಿಗಲ್ಲು ಕಾರ್ಯಕ್ರಮವನ್ನು ವಡಗೇರಾದಲ್ಲಿ 2025ರ ಸೆಪ್ಟೆಂಬರ್ 5ರ ಶುಕ್ರವಾರ ರಂದು ಮಧ್ಯಾಹ್ನ 12.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಹಾಗೂ ಕಂದಾಯ ಸಚಿವರಾದ ಶ್ರೀ ಕೃಷ್ಣ ಬೈರೆಗೌಡ ಮತ್ತು ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಬೆಂಗಳೂರು ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ಅಧ್ಯಕ್ಷರು ಶ್ರೀ ಬಾಬುರಾವ ಚಿಂಚನಸೂರ ಅವರ ವಡಗೇರಾ ತಾಲೂಕು ಪ್ರಜಾಸೌಧ ಅಡಿಗಲ್ಲು ಕಾರ್ಯಕ್ರಮ ಘನ ಉಪಸ್ಥಿತಿಯಲ್ಲಿ ನೆರವೇರಲಿದೆ.

ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಕಾರ್ಯಕ್ರಮ

ಉದ್ಘಾಟಕರು ಹಾಗೂ ಅಧ್ಯಕ್ಷತೆ ವಹಿಸುವರು.

ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ, ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀಶಶೀಲ್ ಜಿ.ನಮೋಶಿ, ವಡಗೇರಾ ಗ್ರಾಮ ಪಂಚಾಯತ್ ಅಧ್ಯಕ್ಷರು ಶ್ರೀ ಸಿದ್ದಪ್ಪ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಸರ್ವರಿಗೂ ಆದರದ ಸುಸ್ವಾಗತವನ್ನು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಬೆಂಗಳೂರು

ಕರ್ನಾಟಕ ಗೃಹ ಮಂಡಳಿ ಗೃಹ ಆಯುಕ್ತರು ಶ್ರೀ

ದಯಾನಂದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್, ಬೆಂಗಳೂರು ಕರ್ನಾಟಕ ಗೃಹ ಮಂಡಳಿ ಮುಖ್ಯ ಅಭಿಯಂತರರು ಶ್ರೀ ರವಿಕುಮಾರ ಕೆ.ಟಿ, ವಡಗೇರಾ ತಹಸೀಲ್ದಾರರು ಶ್ರೀಮತಿ ಮಂಗಳಾ.ಎಂ, ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವವಿದ್ಯಾಲಯಗಳು ಗುಣಮಟ್ಟದ ಶಿಕ್ಷಣ ಒದಗಿಸುವುದರ ಜೊತೆಗೆ ಪರಿಸರ ಸಂರಕ್ಷಣೆ, ಸ್ವಚ್ಛತಾ ಅಭಿಯಾನ ಕೈಗೊಳ್ಳಿ



ಬಳ್ಳಾರಿ,ಸೆ.04:ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಒದಗಿಸುವುದರ ಜೊತೆಗೆ ಪರಿಸರ ಪ್ರಚಾರ ಮತ್ತು ಸಂರಕ್ಷಣೆಯ ಕಡೆಗೆ ಸಕ್ರಿಯ ಪ್ರಯತ್ನಗಳನ್ನು ಮಾಡಬೇಕು ಎಂದು ಕರ್ನಾಟಕದ ರಾಜ್ಯದ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಥಾವರಚಂದ್ ಗೆಹ್ಲೋಟ್ ಅವರು ಹೇಳಿದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ 13ನೇ ವಾರ್ಷಿಕ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಶ್ವವಿದ್ಯಾಲಯದ ಆವರಣವನ್ನು ಸ್ವಚ್ಛವಾಗಿಡಲು ಒಂದು ಅಥವಾ ಎರಡು ತಿಂಗಳಿಗೊಮ್ಮೆ ಸ್ವಚ್ಛತಾ ಅಭಿಯಾನ ನಡೆಸಬೇಕು ಎಂದರು.

ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರು ಹೇಳಿರುವಂತೆ "ರಾಷ್ಟ್ರಗಳು ಶಿಕ್ಷಣ ಸಂಸ್ಥೆಗಳಲ್ಲಿ ನಿರ್ಮಿಸಲ್ಪಟ್ಟಿವೆ" ಎಂಬ ಈ ಚಿಂತನೆಯನ್ನು ಮನಸ್ಸಿನಲ್ಲಿಟ್ಟುಕೊಂಡು, ವಿಶ್ವವಿದ್ಯಾಲಯಗಳನ್ನು ಶ್ರೇಷ್ಠತೆಯ ಸಂಸ್ಥೆಗಳನ್ನಾಗಿ ಮಾಡುವುದು ನಮ್ಮ ಗುರಿಯಾಗಿರಬೇಕು. ಇದಕ್ಕಾಗಿ ವಿಶ್ವವಿದ್ಯಾಲಯಗಳನ್ನು ನಾವೀನ್ಯತೆ, ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳ ಕೇಂದ್ರವನ್ನಾಗಿ ಮಾಡುವ ಮತ್ತು ಅಂತರ–ಶಿಸ್ತಿನ ಹಾಗೂ ಅಂತರ–ವಿಶ್ವವಿದ್ಯಾಲಯ ಸಹಯೋಗವನ್ನು ಉತ್ತೇಜಿಸುವ ಕಡೆಗೆ ಕೆಲಸ ಮಾಡುವ ಅವಶ್ಯಕತೆಯಿದೆ ಎಂದರು.

21ನೇ ಶತಮಾನದ ಅಗತ್ಯವೆಂದರೆ ಡಿಜಿಟಲ್ ಸಾಕ್ಷರತೆ, ನವೀನ ಚಿಂತನೆ, ಜಾಗತಿಕ ದೃಷ್ಟಿಕೋನ ಮತ್ತು ಸಾಮಾಜಿಕ ಜವಾಬ್ದಾರಿಯ ಬಗ್ಗೆ ಜ್ಞಾನ ಬೆಳೆಸಿಕೊಳ್ಳಬೇಕು. ಇದಕ್ಕಾಗಿ, ಜೀವನಪರ್ಯಂತ ವಿದ್ಯಾರ್ಥಿಯಾಗುವ ಮೂಲಕ ಕಲಿಯುತ್ತಲೇ ಇರಬೇಕಾಗುತ್ತದೆ. ಆತ್ಮನಿರ್ಭರ ಭಾರತದ ಮೂಲಕ 2047ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತವಾಗಲು ಯುವಕರು ತಮ್ಮ ಪ್ರತಿಭೆ, ನಾವೀನ್ಯತೆ ಮತ್ತು ಉದ್ಯಮಶೀಲತೆಯ ಮೂಲಕ ಸಮಾಜಕ್ಕೆ ಹೊಸ ದಿಕ್ಕನ್ನು ನೀಡಬೇಕು. ಯುವಪೀಳಿಗೆ ಉದ್ಯೋಗಾಕಾಂಕ್ಷಿಯಾಗಿ ಬದಲಾಗಿ ಉದ್ಯೋಗ ಒದಗಿಸುವವರ ಪಾತ್ರವನ್ನು ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ನಮ್ಮ ದೇಶ ಸಾವಿರಾರು ವರ್ಷಗಳಿಂದ ಜ್ಞಾನದ ದೀಪವನ್ನು ಬೆಳಗಿಸುತ್ತಿದೆ, ವೇದಗಳು, ಉಪನಿಷತ್ತುಗಳು, ಆಯುರ್ವೇದ, ಯೋಗ, ವಾಸ್ತು, ತತ್ವಶಾಸ್ತ್ರ, ನ್ಯಾಯಶಾಸ್ತ್ರ, ಇವು ನಮ್ಮ ಅಮೂಲ್ಯ ಪರಂಪರೆ. ಹೊಸ ಶಿಕ್ಷಣ ನೀತಿಯು ಶಿಕ್ಷಣ ವ್ಯವಸ್ಥೆಯಲ್ಲಿ ಅವುಗಳಿಗೆ ಮತ್ತೆ ಸ್ಥಾನ ನೀಡಿದೆ. ಯುವಕರು ಈ ಜ್ಞಾನದ ಹರಿವುಗಳನ್ನು ಆಧುನಿಕ ಸಂದರ್ಭದಲ್ಲಿ ಅರ್ಥಮಾಡಿಕೊಳ್ಳಬೇಕು, ಸಂಶೋಧನೆ ಮಾಡಬೇಕು ಮತ್ತು ಜಾಗತಿಕವೇದಿಕೆಯಲ್ಲಿ ಪ್ರಸ್ತುತಪಡಿಸಬೇಕು ಎಂದು ಕಿವಿಮಾತು ಹೇಳಿದರು.

ಭಾರತ 'ವಿಶ್ವ ಗುರು' ಆಗುವತ್ತ ಪಯಣದಲ್ಲಿದೆ. ಇಂದು, ದೇಶವು 100 ಕ್ಕೂ ಹೆಚ್ಚು ಯುನಿಕಾರ್ನ್ ಸ್ಟಾರ್ಟಪ್ ಗಳನ್ನು ಹೊಂದಿದೆ. ಭಾರತದ ಡಿಜಿಟಲ್ ಪಾವತಿ ವ್ಯವಸ್ಥೆಯು ವಿಶ್ವದ ಅತ್ಯಂತ ಶಕ್ತಿಶಾಲಿ ವ್ಯವಸ್ಥೆಯಾಗಿದೆ ಮತ್ತು ಚಂದ್ರಯಾನದಿಂದ ಎಐ ವರೆಗಿನ ಪ್ರತಿಯೊಂದು ಕ್ಷೇತ್ರದಲ್ಲೂ ನಾವು ಪ್ರಮುಖ ಪಾತ್ರ ವಹಿಸುತ್ತಿದ್ದೇವೆ. ಈ ಪ್ರಯಾಣದಲ್ಲಿ ಪ್ರಮುಖ ಶಕ್ತಿ ನಿಮ್ಮಂತಹ ಯುವಕರು ಎಂದು ಹೇಳಿದರು."ಎದ್ದೇಳಿ, ಎಚ್ಚರಗೊಳ್ಳಿ ಮತ್ತು ಗುರಿ ಸಾಧಿಸುವವರೆಗೆ ನಿಲ್ಲಬೇಡಿ" ಸ್ವಾಮಿ ವಿವೇಕಾನಂದರ ಈ ವಾಕ್ಯದಿಂದ ಸ್ಫೂರ್ತಿ ಪಡೆದು, ನಮ್ಮ ಜ್ಞಾನವನ್ನು ಕಾರ್ಯರೂಪಕ್ಕೆ ತರಬೇಕು ಮತ್ತು ರಾಷ್ಟ್ರವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ನಮ್ಮ ಕೌಶಲ್ಯಗಳನ್ನು ಬಳಸಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಬಳ್ಳಾರಿಯು ಪ್ರಾಚೀನ ಕಾಲದಿಂದಲೂ ಬಹಳ ಭವ್ಯವಾದ ಇತಿಹಾಸವನ್ನು ಹೊಂದಿದೆ. ಈ ವಿಶ್ವವಿದ್ಯಾಲಯವು ಕಲೆ, ಸಾಹಿತ್ಯ ಮತ್ತು ಶಿಕ್ಷಣದ ಭೂಮಿಯಾಗಿದೆ. ರಾಜ ಶ್ರೀ ಕೃಷ್ಣದೇವರಾಯನು ತನ್ನ ಪ್ರಜೆಗಳ ಕಡೆಗೆ ತೋರಿಸಿದ ಔದಾರ್ಯ ಮತ್ತು ದಯೆಗಾಗಿ ಪ್ರಸಿದ್ಧವಾಗಿದ್ದ ಐತಿಹಾಸಿಕ ಭೂಮಿಯಲ್ಲಿ ನೆಲೆಗೊಂಡಿದೆ. ಈ ಘಟಿಕೋತ್ಸವದಲ್ಲಿ ಡಾ.ವಸುಂಧರಾ ಭೂಪತಿ, ಬಿ.ನಾಗನಗೌಡ ಮತ್ತು ಇರ್ಫಾನ್ ರಜಾಕ್ ಅವರಿಗೆ ಶಿಕ್ಷಣ, ಸಾಹಿತ್ಯ, ಆರೋಗ್ಯ ಮತ್ತು ಸಾಮಾಜಿಕ ಕಾರ್ಯ ಕ್ಷೇತ್ರದಲ್ಲಿ ತಮ್ಮ ಅತ್ಯುತ್ತಮ ಕೆಲಸಕ್ಕಾಗಿ ಗೌರವ ಪದವಿಗಳನ್ನು ನೀಡಿ ಗೌರವಿಸಲಾಗಿದೆ. ಅವರು ಸಮಾಜ, ಜನರು ಮತ್ತು ರಾಷ್ಟ್ರದ ಹಿತದೃಷ್ಟಿಯಿಂದ ಕೆಲಸ ಮಾಡುವುದನ್ನು ಮುಂದುವರಿಸಲಿ ಎಂದು ಆಶಿಸಿದರು. ನವದೆಹಲಿಯ ಇಂಟರ್ ಯುನಿವರ್ಸಿಟಿ ಎಕ್ಸಲರೇಟರ್ ನ ನಿರ್ದೇಶಕರಾದ ಪ್ರೊ.ಅವಿನಾಶ್ ಚಂದ್ರ ಪಾಂಡೆ ಅವರು ಘಟಿಕೋತ್ಸವ ಭಾಷಣದಲ್ಲಿ ಮಾತನಾಡಿ, ಘಟಿಕೋತ್ಸವವು ಕೇವಲ ಒಂದು ಸಮಾರಂಭವಲ್ಲ; ಇದು ಪ್ರತಿ ವಿದ್ಯಾರ್ಥಿಯ ಪರಿಶ್ರಮ, ಶಿಸ್ತಿನ ಜೀವನ ಮತ್ತು ನಿಶ್ಚಯ ಹಾದಿಯ ಫಲಶ್ರುತಿಯಾಗಿದೆ. ವಿದ್ಯಾರ್ಥಿಗಳ ಸಾಧನೆಗಳು ಭವಿಷ್ಯದ ಪೀಳಿಗೆಗೆ ಪ್ರೇರಣೆಯಾಗಬೇಕು ಎಂದು ಆಶಿಸಿದರು.

ಪೋಷಕರ ತ್ಯಾಗ ಮತ್ತು ಅಚಲ ಬೆಂಬಲವು ಮಕ್ಕಳ ಯಶಸ್ಸಿನ ಆಧಾರವಾಗಿದೆ. ಶಿಕ್ಷಕರ ಬೋಧನೆ, ಮಾರ್ಗದರ್ಶನ ಮತ್ತು ಪ್ರೇರಣೆಯಿಂದ ಇಂದಿನ ಯುವಕರು ತಮ್ಮ ಕನಸುಗಳನ್ನು ಸಾಕಾರಗೊಳಿಸುತ್ತಿದ್ದಾರೆ ಎಂದು ಅಭಿಮತ ವ್ಯಕ್ತಪಡಿಸಿದರು.

ಪದವಿಯೊಂದೇ ಅಂತಿಮ ಗುರಿಯಲ್ಲ, ಅದು ಜೀವನಪರ್ಯಂತ ಕಲಿಕೆಯ ಪಯಣದ ಹಂತಮಾತ್ರ. ವಿನಯವಂತಿಕೆ, ಹೊಂದಿಕೊಳ್ಳುವಿಕೆ ಮತ್ತು ನಿರಂತರ ಜ್ಞಾನಾರ್ಜನೆಯು ಸಮಾಜದಲ್ಲಿ ವಿಶಿಷ್ಟರನ್ನಾಗಿ ಮಾಡುತ್ತದೆ. ನಿಜವಾದ ಯಶಸ್ಸು ಸಂಪತ್ತಿನಲ್ಲಿಯಾಗಲಿ ಅಥವಾ ಹುದ್ದೆಗಳಲ್ಲಿ ಆಗಲಿ ಅಳೆಯಲು ಬರುವುದಿಲ್ಲ. ಅದು ನೀವು ನೀಡುವ ಕೊಡುಗೆಯ ಸಮಾಜದ ಮೇಲೆ ಬೀರಿದ ಸಕಾರಾತ್ಮಕ ಪ್ರಭಾವದಲ್ಲಿ ಅಳೆಯಲ್ಪಡುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವ ನಾಗರಾಜ.ಸಿ., ಕುಲಸಚಿವ (ಮೌಲ್ಯಮಾಪನ) ಪ್ರೊ.ಎನ್. ಎಂ.ಸಾಲಿ, ವಿಶ್ವವಿದ್ಯಾಲಯದ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತಿನ ಸದಸ್ಯರುಗಳು, ಎಲ್ಲ ನಿಕಾಯದ ಡೀನರು, ಮುಖ್ಯಸ್ಥರುಗಳು, ಸಂಯೋಜಕರುಗಳು, ವಿವಿಧ ಮಹಾವಿದ್ಯಾಲಯಗಳ ಪ್ರಾಂಶುಪಾಲರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಮುಂತಾದ ಗಣ್ಯರು ಹಾಜರಿದ್ದರು.

*3 ಜನರಿಗೆ ಗೌರವ ಡಾಕ್ಟರೇಟ್ ಪ್ರದಾನ:*

ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಇರ್ಫಾನ್ ರಜಾಕ್, ಡಾ.ವಸುಂಧರಾ ಭೂಪತಿ, ಬಾವಿಹಳ್ಳಿ ನಾಗನಗೌಡ ಸೇರಿ ಮೂರು ಮಹನೀಯರಿಗೆ ಗೌರವ ಡಾಕ್ಟರೇಟ್ ನೀಡಿ ರಾಜ್ಯಪಾಲರು ಗೌರವಿಸಿದರು.

ಘಟಿಕೋತ್ಸವದಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ವಿವಿಧ ವಿಭಾಗಗಳ 42 ವಿದ್ಯಾರ್ಥಿಗಳು 51 ಚಿನ್ನದ ಪದಕಗಳನ್ನು ಮುಡಿಗೇರಿಸಿಕೊಂಡರು. ವಿವಿಧ ವಿಭಾಗಗಳ ಒಟ್ಟು 59 ಸಂಶೋಧನಾರ್ಥಿಗಳು ಡಾಕ್ಟರೇಟ್ ಪದವಿ ಪಡೆದುಕೊಂಡರು.

ಎಲ್ಲ ವಿಭಾಗಗಳ ಸ್ನಾತಕ ಪದವಿಯ 80 ವಿದ್ಯಾರ್ಥಿಗಳು ಮತ್ತು ಸ್ನಾತಕೋತ್ತರ ಪದವಿಯಿಂದ 75 ವಿದ್ಯಾರ್ಥಿಗಳು ಸೇರಿ ಒಟ್ಟು 155 ವಿದ್ಯಾರ್ಥಿಗಳು ರ್‍ಯಾಂಕ್ ಪ್ರಮಾಣ ಪತ್ರಗಳನ್ನು ಪಡೆದುಕೊಂಡರು.

*04 ಚಿನ್ನದ ಪದಕ ಪಡೆದ ವಿದ್ಯಾರ್ಥಿ:*

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ವಾಣಿಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿ ಹಂಸ.ಎನ್ ಅವರು 04 ಚಿನ್ನದ ಪದಕಗಳನ್ನು ಪಡೆದುಕೊಂಡರು.

*03 ಚಿನ್ನದ ಪದಕ ಪಡೆದ ವಿದ್ಯಾರ್ಥಿ:*ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಔದ್ಯೋಗಿಕ ರಸಾಯನಶಾಸ್ತ್ರ ವಿಭಾಗದ ವಿದ್ಯಾರ್ಥಿ ರಾಜೇಶ್ವರಿ ಅವರು 03 ಚಿನ್ನದ ಪದಕಗಳನ್ನು ಪಡೆದುಕೊಂಡರು.

*02 ಚಿನ್ನದ ಪದಕ ಪಡೆದ ವಿದ್ಯಾರ್ಥಿಗಳು:*ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಭೌತಶಾಸ್ತ್ರ ವಿಭಾಗದ ಮನೋಜ್, ರಸಾಯನಶಾಸ್ತ್ರ ವಿಭಾಗದ ಸುಹಾನ ತಸ್ಲೀಮ್, ನಂದಿಹಳ್ಳಿಯ ಸ್ನಾತಕೋತ್ತರ ಕೇಂದ್ರದ ಸಮಾಜಕಾರ್ಯ ವಿಭಾಗದ ಶಿಲ್ಪ, ಬಿಬಿಸಿ ಕಾಲೇಜ್ ನ ಬಿಕಾಂ ವಿದ್ಯಾರ್ಥಿನಿ ವಿಷ್ಣುಪ್ರಿಯಾ ಮತ್ತು ವೀರಶೈವ ಮಹಾವಿದ್ಯಾಲಯದ ಬಿಎಸ್ಸಿ ವಿದ್ಯಾರ್ಥಿ ಮಹಮ್ಮದ್ ನಕೀಬಲಿ ಇವರುಗಳು ಪಡೆದು–ಕೊಂಡರು

# ಯಾದಗಿರಿ : ಹವಾಮಾನ ಬದಲಾವಣೆ : ಮಕ್ಕಳಲ್ಲಿ ಹೆಚ್ಚಿದ ವೈರಲ್ ಫೀವರ್

ಯಾದಗಿರಿ:ಸೆ.4: ಜಿಲ್ಲೆಯಲ್ಲಿ ಹವಾಮಾನ ಬದಲಾವಣೆಯಿಂದಾಗಿ ಮಕ್ಕಳು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದು, ವೈರಲ್ ಫೀವರ್ ಹೆಚ್ಚಾಗುತ್ತಿದೆ.

ಮಕ್ಕಳಲ್ಲಿ ಕೆಮ್ಮು, ನೆಗಡಿ, ಜ್ವರ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದು, ಪೋಷಕರು ಆಸ್ಪತ್ರೆಗೆ ಮುಗಿಬೀಳುತ್ತಿದ್ದಾರೆ. ನಿತ್ಯ ವೈದ್ಯರು 150ಕ್ಕೂ ಅಧಿಕ ಮಕ್ಕಳಿಗೆ ಚಿಕಿತ್ಸೆ ನೀಡುತ್ತಿದ್ದು, ಮಳೆಯಿಂದ ಹವಾಮಾನ ಬದಲಾಗುತ್ತಿರುವ ಕಾರಣ ಈ ರೀತಿಯಾಗುತ್ತಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಆಸ್ಪತ್ರೆಗಳಲ್ಲಿ ಓಪಿಡಿ ಚೀಟಿ ವಿತರಿಸಿರುವ ಕೌಂಟರ್ ಸಂಖ್ಯೆಯನ್ನು ಹೆಚ್ಚಿಸಿದರೂ ಕೂಡ ಮಕ್ಕಳ ಸಂ–ಖ್ಯೆ ಹೆಚ್ಚಾಗುತ್ತಲೇ ಇದೆ. ಹೀಗಾಗಿ ಇರುವ ಬೆಡ್‌ಗಳಲ್ಲಿಯೇ ಅಡ್ಜಸ್ಟ್ ಮಾಡಿಕೊಂಡು ವೈದ್ಯರು ಚಿಕಿತ್ಸೆ ನೀಡುತ್ತಿದ್ದಾರೆ.

ಈ ಕುರಿತು ಮಕ್ಕಳ ತಜ್ಞ ವೈದ್ಯ ಡಾ.ಕುಮಾರ್ ಅಂಗಡಿ ಮಾಹಿತಿ ನೀಡಿದ್ದು, ಮಕ್ಕಳಿಗೆ ವೈರಲ್ ಜ್ವರ ಹೆಚ್ಚಿನ ಪ್ರಮಾಣದಲ್ಲಿ ಕಾಣಿಸಿಕೊಳ್ಳುತ್ತಿದೆ. ಹೀಗಾಗಿ ಪೋಷಕರು ಮಕ್ಕಳ ಬಗ್ಗೆ ಎಚ್ಚರಿಕೆ ವಹಿಸಬೇಕು. ಯಾವುದೇ ಭಯಪಡುವ ಅಗತ್ಯವಿಲ್ಲ, ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಅಗತ್ಯ ಬಿದ್ದರೆ ಮತ್ತೊಂದು ವಾರ್ಡ್ ಓಪನ್ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.

# ಅರ್ಥಪೂರ್ಣವಾಗಿ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಗೆ ನಿರ್ಧಾರ



ಯಾದಗಿರಿ:ಸೆ:4: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿವಿಧ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಇದೇ ಸೆಪ್ಟೆಂಬರ್ 17ರಂದು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಆಚರಿಸುವ ಕುರಿತು ಅಪರ್ ಜಿಲ್ಲಾಧಿಕಾರಿ ರಮೇಶ ಕೋಳಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಜಿಲ್ಲಾ ಉಸ್ತುವಾರಿ ಸಚಿವರು ರಾಷ್ಟ್ರಧ್ವಜಾರೋಹಣ ನೆರವೇರಿಸಲಿದ್ದಾರೆ. ಇದಕ್ಕಾಗಿ ವೇದಿಕೆ, ಶಾಮಿಯಾನ, ಆಸನದ ವ್ಯವಸ್ಥೆ, ಶಿಷ್ಟಾಚಾರದಂತೆ ಗಣ್ಯರನ್ನು ಆಹ್ವಾನಿಸಲು ನಿರ್ಧರಿಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ್ ಅವರು ಮಾತನಾಡಿ, ಅಂದು ಕ್ರೀಡಾಂಗಣದ ಸ್ವಚ್ಛತೆ, ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ಸೂಕ್ತ ಪೊಲೀಸ್ ಬಂದೋಬಸ್ತ್, ಕವಾಯತು ಪ್ರದರ್ಶನಕ್ಕೆ ಪೂರ್ವಭಾವಿ ಸಿದ್ಧತೆ, ಅಗ್ನಿಶಾಮಕ, ಆರೋಗ್ಯ ಇಲಾಖೆ ಅಂಬ್ಯುಲೆನ್ಸ್ ನುರಿತ ಸಿಬ್ಬಂದಿಗಳೊಂದಿಗೆ ಇರುವಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ವೇದಿಕೆ ಸಿದ್ಧತೆ ನೋಡಿಕೊಳ್ಳಲು ಸಹಾಯಕ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿ, ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಪ್ರಬಂಧ ಹಾಗೂ ಇತರೆ ಸ್ಪರ್ದೆ ಏರ್ಪಡಿಸಲು ಕ್ರಮ ಕೈಗೊಳ್ಳಬೇಕು. ಇದಕ್ಕಾಗಿ ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ, ಹೈದ್ರಾಬಾದ್ ಕರ್ನಾಟಕ ವಿಮೋಚನೆ ಚಳುವಳಿಯಲ್ಲಿ ಭಾಗವಹಿಸಿದವರನ್ನು ಸನ್ಮಾನಿಸಲು, ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಸನ್ಮಾನಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಾಮೂಹಿಕ ಕವಾಯತಿಗೆ 8 ವಿವಿಧ ತಂಡಗಳು ಭಾಗವಹಿಸಲು, ಪ್ರಾಯೋಗಿಕ ಕವಾಯತು ನಿರ್ವಹಣೆಗೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳ ಅಧ್ಯಕ್ಷತೆಯ ಸಮಿತಿ, ಆಮಂತ್ರಣ ಪತ್ರಿಕೆ ವಿತರಿಸುವ ವ್ಯವಸ್ಥೆಗೆ ಸಹಾಯಕ ಆಯುಕ್ತರ ಅಧ್ಯಕ್ಷತೆಯ ಸಮಿತಿ, ರಚಿಸಲಾಯಿತು.

ಕಾರ್ಯಕ್ರಮದ ಸಂದರ್ಭದಲ್ಲಿ ಸೂಕ್ತ ವಿದ್ಯುತ್ ವ್ಯವಸ್ಥೆ, ಅಲಂಕಾರ, ಶಾಲಾ ಕಾಲೇಜುಗಳಲ್ಲಿ ಕಾರ್ಯಕ್ರಮ ಆಚರಣೆ, ಮುಖ್ಯ ಕಾರ್ಯಕ್ರಮದ ವೇದಿಕೆ ಹತ್ತಿರ ರಂಗೋಲಿ ಹಾಕಲು, ಅಂದು ಬೆಳಿಗ್ಗೆ 8 ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಧಿಕಾರಿಗಳಿಂದ ರಾಷ್ಟ್ರಧ್ವಜಾರೋಹಣ ನೆರವೇರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಸಭೆಯಲ್ಲಿ ಭಾವೈಕ್ಯತಾ ಸಮಿತಿ ಸದಸ್ಯರಾದ ವಿಶ್ವನಾಥ್ ಸಿರವಾಳ, ಚನ್ನಪ್ಪಗೌಡ ಮೋಸಂಬಿ, ವಿವಿಧ ಸಂಘ ಸಂಸ್ಥೆಗಳ ಪರವಾಗಿ ಶೇಖ್ ಇಮ್ರಾನ್, ಹಣಮಂತರಾಯ ಮಾಲಿಪಾಟೀಲ, ಭೀಮು ಪೂಜಾರಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾಜಿ ಸೈನಿಕರ ಸಂಘದ ಕಾರ್ಯಾಲಯ ಉದ್ಘಾಟನೆ





ರಾಯಚೂರು ಸೆ04:ರಾಯಚೂರು ಮಹಾನಗರ ಪಾಲಿಕೆಯ ಹಳೆಯ ನಗರಸಭೆಯ ಕಟ್ಟಡದಲ್ಲಿ ಮಾಜಿ ಸೈನಿಕರ ಸಂಘದ ಕಾರ್ಯಾಲಯವನ್ನು ಪಾಲಿಕೆಯ ಮಹಾಪೌರರಾದ ನರಸಮ್ಮ ನರಸಿಂಹಲು ಮಾಡಿಗಿರಿ ಅವರು ಸೆಪ್ಟೆಂಬರ್ 4ರಂದು ಉದ್ಘಾಟಿಸಿದರು. ಈ ವೇಳೆ ಮಹಾನಗರ ಪಾಲಿಕೆಯ ಉಪ ಮಹಾಪೌರರಾದ ಸಾಜೀದ ಸಮೀರ ಅವರು ಮಾತನಾಡಿ, ಮಾಜಿ ಸೈನಿಕರ ಸಂಘಕ್ಕೆ ನಿಯಮದಡಿಯಲ್ಲಿ ಮಹಾನಗರ ಪಾಲಿಕೆಯ ಸೌಲಭ್ಯಗಳನ್ನು ಒದಗಿಸಲಾಗುವುದು. ನಿಯಮದಡಿ ಅವಕಾಶವಿಲ್ಲದಿದ್ದಲ್ಲಿ ಸರ್ವ ಸದಸ್ಯರ ಸಹಕಾರ ಪಡೆದು ಬೇಡಿಕೆ ಈಡೇರಿಸಲಾಗುವುದು ಎಂದು ತಿಳಿಸಿದರು. ಈ ವೇಳೆ ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ ಅವರು ಮಾತನಾಡಿ, ಪಾಲಿಕೆಯ ಆಯುಕ್ತರೊಂದಿಗೆ ಚರ್ಚಿಸಿ ಮಾಜಿ ಸೈನಿಕರ ಸಂಘಕ್ಕೆ ಬೇರೆ ಬೇರೆ ಸೌಕರ್ಯ ಒದಗಿಸಲಾಗುವುದು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಎನ್.ಸಿ.ಸಿ ಕಮಾಂಡೆಂಟ್ ಅಧಿಕಾರಿಗಳು, ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷರು ಸೇರಿದಂತೆ ವಿವಿಧ ಪದಾಧಿಕಾರಿಗಳು, ಮಾಜಿ ಸೈನಿಕರ ಕುಟುಂಬದ ಸದಸ್ಯರು ಇದ್ದರು.

# ಸೆ. 8ರಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

ಯಾದಗಿರಿ ಸೆ 04: ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಯಾದಗಿರಿ ಹಾಗೂ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಇವರ ಸಂಯುಕ್ತಾಶಯದಲ್ಲಿ 2025–26ನೇ ಸಾಲಿನ ಯಾದಗಿರಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆಪ್ಟೆಂಬರ್ 8ರ ಬೆಳಿಗ್ಗೆ 9ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಪುರುಷರು ಮತ್ತು ಮಹಿಳೆ ಕ್ರೀಡಾಪಟುಗಳು ಆನ್‌ಲೈನ್ ಲಿಂಕ್ ವಿಳಾಸ: https://dasaracmcup-2025.etrpindia.com/KA-sports ಅಥವಾ ಕ್ಯೂ ಆರ್ ಕೋಡ್:ಉಪಯೋಗಿಸಿಕೊಂಡು ಜಿಲ್ಲಾಮಟ್ಟದಲ್ಲಿ ಕ್ರೀಡಾಕೂಟದಲ್ಲಿ ಭಾಗವಹಿಸಬಹುದಾಗಿದೆ. ಷರತ್ತುಗಳು : ತಾಲ್ಲೂಕು ಮಟ್ಟದಲ್ಲಿ ವೈಯಕ್ತಿಕ ಮತ್ತು ಗುಂಪು ಆಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳು ಕಡ್ಡಾಯವಾಗಿ ನೋಂದಾಯಿಸಬೇಕು. ನೇರವಾಗಿ ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ವೈಯಕ್ತಿಕ ಮತ್ತು ಗುಂಪುಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಕಡ್ಡಾಯವಾಗಿ ಗುಂಪನ್ನು ರಚಿಸಿ ಗುಂಪಿನಲ್ಲಿ ನೋಂದಾಯಿಸತಕ್ಕದ್ದು, ಕ್ರೀಡಾಪಟುಗಳು ಕ್ರೀಡಾಕೂಟದ ಆನ್‌ಲೈನ್ ಅಥವಾ ಕ್ಯೂ–ಆರ್ ಕೋಡ್ ಮೂಲಕ ನೊಂದಾವಣೆ ಮಾಡಿಕೊಳ್ಳತಕ್ಕದ್ದು.






ಬೀದರ:ಬೀದರನಲ್ಲಿ ಅದ್ದೂರಿಯಾಗಿ ನಡೆದ ಬಸವ ಸಂಸ್ಕೃತಿ ಅಭಿಯಾನ ಕಾರ್ಯಕ್ರಮಕ್ಕೆ ಹೊಸಪೇಟೆಯ ಮತಾ ಅನುರಾದೇಶ್ವರಿ ಅಮ್ಮನವರು ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಹುಮನಾಬಾದದಿಂದ ಹೊಸಪೇಟೆಗೆ ತೆರಳುವ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ (ಒಬಿಸಿ) ವಿಭಾಗದ ರಾಜ್ಯ ಉಪಾಧ್ಯಕ್ಷ ಡಾ. ಸಿದ್ರಾಮ್ ವಾಘಮಾರರವರು ಮತಾ ಅನುರಾದೇಶ್ವರಿ ಅಮ್ಮನವರಿಗೆ ಭೇಟಿ ನೀಡಿ ಸನ್ಮಾನಿಸಿದರು ಇದೇ ಸಂದರ್ಭದಲ್ಲಿ ಮತಾ ಅನುರಾದೇಶ್ವರಿ ಅಮ್ಮನವರು, ಶ್ರೀ ಮಾಣಿಕ ಪ್ರಭು ಹಾಗೂ ಶ್ರೀ ವೀರಭದ್ರೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ದರ್ಶನ ಪಡೆದರು. ಮಾತನಾಡಿದರು. ಈ ಸಂದರ್ಭದಲ್ಲಿ ಬಾಬು ಮಹಾರಾಜ ಜಲಸಂಗಿ, ರಮೇಶ ಹಣಮಂತಪ್ಪಾ ಖಂಡಗೊಂಡ, ಮಸ್ತಾನ್ ಶಫರೋದ್ದಿನ್ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಸೆ. 8 ಹಾಗೂ 9 ರಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ: ಭಾಗವಹಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ ಬೀದರ

ಸೆಪ್ಟೆಂಬರ್.04–2025–26ನೇ ಸಾಲಿನ ಜಿಲ್ಲಾ ಮಟ್ಟದ ದಸರಾ ಸಿ.ಎಂ. ಕಪ್ ಕ್ರೀಡಾಕೂಟದ ಸ್ಪರ್ಧೆಗಳನ್ನು ಪುರುಷ ಮತ್ತು ಮಹಿಳೆಯರಿಗಾಗಿ ಸೆಪ್ಟೆಂಬರ್. 8 ಹಾಗೂ 9 ರಂದು ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದು, ತಾಲೂಕಾ ಮಟ್ಟದ ಕ್ರೀಡಾಕೂಟದಲ್ಲಿ ವೈಯಕ್ತಿಕ ಸ್ಪರ್ಧೆಯಲ್ಲಿ ಪ್ರಥಮ ಹಾಗೂ ದ್ವಿತೀಯ ಮತ್ತು ಗುಂಪು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನಗಳಿಸಿದ ಕ್ರೀಡಾಪಟುಗಳು ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಬೇಕೆಂದು ಬೀದರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಥ್ಲೇಟಿಕ್ಸ್‌ಸ್ಪರ್ಧೆಗಳು(ಪುರುಷರಿಗೆ): 100 ಮೀ, 200ಮೀ, 400ಮೀ, 800 ಮೀ, 1500 ಮೀ, 5000 ಮೀ, 10000ಮೀ ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ,ಟ್ರಿಪಲ್ ಜಂಪ್,ಜಾವಲಿನ್ ಥ್ರೋ, ಡಿಸ್ಕಸ್ ಥ್ರೋ, 110 ಮೀ ಹರ್ಡಲ್ಸ್ 4*100 ಮೀ ರಿಲೇ, 4*400 ಮೀ ರಿಲೇ.

ಅಥ್ಲೇಟಿಕ್ಸ್‌ಸ್ಪರ್ಧೆಗಳು(ಮಹಿಳೆಯರಿಗೆ): 100 ಮೀ, 200ಮೀ, 400ಮೀ, 800 ಮೀ, 1500 ಮೀ, 3000 ಮೀ ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಥ್ರೋ, ಡಿಸ್ಕಸ್ ಥ್ರೋ,100 ಮೀ ಹರ್ಡಲ್ಸ್ 4*100 ಮೀ ರಿಲೇ, 4*400 ಮೀ ರಿಲೇ

ಜಿಲ್ಲಾಮಟ್ಟದಲ್ಲಿಆಯೋಜಿಸಬೇಕಾದ ಕ್ರೀಡೆಗಳು: ವಾಲಿಬಾಲ್, ಫುಟ್‌ಬಾಲ್, ಖೋ–ಖೋ, ಕಬಡ್ಡಿ, ಬಾಸ್ಕೆಟ್‌ಬಾಲ್, ಕುಸ್ತಿ, ಬ್ಯಾಡ್ಮಿಂಟನ್,ಹಾಕಿ,ಹ್ಯಾಂಡ್‌ಬಾಲ್, ಟೇಬಲ್ ಟೆನ್ನೀಸ್, ಥ್ರೋಬಾಲ್, ಬಾಲ್‌ಬ್ಯಾಡ್ಮಿಂಟನ್, ಯೋಗ.

ಜಿಲ್ಲಾ ಮಟ್ಟದಲ್ಲಿ ಆಯ್ಕೆ ಮಾಡಬೇಕಾದ ಕ್ರೀಡೆಗಳು:ಟೆನ್ನೀಸ್, ನೆಟ್‌ಬಾಲ್, ಈಜು.

ಭಾಗವಹಿಸುವ ಕ್ರೀಡಾಪುಟುಗಳಿಗೆ ಊಟೋಪಾಹಾರ ಇದ್ದು, ಆಸಕ್ತ ಕ್ರೀಡಾಪಟುಗಳು ಭಾಗವಹಿಸಬೇಕು. ಭಾಗವಹಿಸುವ ಕ್ರೀಡಾಪಟುಗಳಿಗೆ ಪ್ರಯಾಣ ಭತ್ಯೆ ನೀಡಲಾಗುವುದು. (ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಪ್ರತಿ ನೀಡಬೇಕು). ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 6361488733 ಹಾಗೂ 9591609691 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಧರ್ಮಸ್ಥಳ ಪ್ರಕರಣ: ಎಸ್‌ಐಟಿ ಮಧ್ಯಂತರ ವರದಿ ಸಲ್ಲಿಸಲಿ; ಕೆ.ಎಸ್ ಈಶ್ವರಪ್ಪ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ ಮಂಗಳೂರು

ಧರ್ಮಸ್ಥಳದ ವಿರುದ್ಧದ ಅಪಪ್ರಚಾರ ಖಂಡಿಸಿ ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಆಯೋಜಿಸಿದ್ದ ಧರ್ಮ ರಕ್ಷಾ ಯಾತ್ರೆ ಮಂಗಳವಾರ ಶ್ರೀ ಕ್ಷೇತ್ರ ಧರ್ಮಸ್ಥಳ ತಲುಪಿದೆ.

200 ಕ್ಕೂ ಹೆಚ್ಚು ವಾಹನಗಳಲ್ಲಿ 1,500ಕ್ಕೂ ಹೆಚ್ಚು ಭಕ್ತರು ಜಾಥಾದಲ್ಲಿ ಆಗಮಿಸಿದ್ದರು. ದೇವಾಲಯ ಆಡಳಿತ ಮಂಡಳಿಯಿಂದ ಈಶ್ವರಪ್ಪ ಅವರನ್ನು ಸನ್ಮಾನಿಸಲಾಯಿತು.

ಈ ವೇಳೆ ಮಾತನಾಡಿದ ಈಶ್ವರಪ್ಪ ಅವರು, ಗಂಗಾ, ತುಂಗಾ ಮತ್ತು ನೇತ್ರಾವತಿ ನದಿಗಳ ಪವಿತ್ರ ನೀರನ್ನು ಧರ್ಮಸ್ಥಳಕ್ಕೆ ಸಿಂಪಡಿಸಿ ಶುದ್ಧೀಕರಿಸಲಾಗಿದೆ.



ಪವಿತ್ರ ನದಿಗಳ ನೀರನ್ನು ರಸ್ತೆಗಳಿಗೆ ಸಿಂಪಡಿಸಲಾಗಿದೆ. ಈ ಮೂಲಕ ಶುದ್ಧೀಕರಿಸಲಾಗಿದೆ. ಸಂಚುಕೋರರನ್ನು ಆರಂಭದಲ್ಲಿಯೇ ಬಂಧಿಸಿದ್ದರೆ, ಈ ಪರಿಸ್ಥಿತಿ ಬರುತ್ತಿರಲಿಲ್ಲ. ಇದೀಗ ಸಂಚುಕೋರರ ಬಾಯಿಯಿಂದಲೇ ಸತ್ಯ ಹೊರಬರುತ್ತಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ತ್ವರಿತ ಕ್ರಮ ಕೈಗೊಳ್ಳಬೇಕಿತ್ತು. ಧರ್ಮಸ್ಥಳದ ವಿರುದ್ಧ ಷಡ್ಯಂತ್ರಕ್ಕೆ ವಿದೇಶಿ ಹಣಕಾಸು ನೆರವು ಬಂದಿದೆ. ರಾಷ್ಟ್ರವಿರೋಧಿಗಳು ಕೈಜೋಡಿಸಿದ್ದಾರೆ. ಎಸ್‌ಐಟಿಯಿಂದಾಗಿ, ಸಾಕಷ್ಟು ಮಾಹಿತಿ ಹೊರಬರುತ್ತಿದೆ. ನಾನು ಅವರಿಗೆ ಧನ್ಯವಾದ ಹೇಳುತ್ತೇನೆ. 18 ಅಡಿ ಆಳದಲ್ಲಿ ಶವವನ್ನು ಹುಡುಕಲು ಸಾಧ್ಯವೇ? ಪ್ರಕರಣವನ್ನು ಎನ್‌ಐಎಗೆ ಹಸ್ತಾಂತರಿಸಬೇಕು. ಎಂಡಿ ಸಮೀರ್‌ಗೆ ಎಸ್‌ಡಿಪಿಐ ಜೊತೆ ಸಂಪರ್ಕವಿದೆ ಎಂದು ಆರೋಪಿಸಿದರು.

ಸಾಕ್ಷಿ–ದೂರುದಾರರ ವ್ಯಕ್ತಿ ಸುಳ್ಳು ಹೇಳುತ್ತಿದ್ದಾನೆ. ಕಳೆದ 14 ವರ್ಷಗಳಿಂದ ಧರ್ಮಸ್ಥಳವನ್ನು ಗುರಿಯಾಗಿಸಲಾಗುತ್ತಿದೆ. ರಾಜ್ಯ ಸರ್ಕಾರ ಎಸ್‌ಐಟಿ ರಚಿಸಿದ ನಂತರ, ಸಾಕ್ಷಿ–ದೂರುದಾರರಾದ ಸಮೀರ್ ಮತ್ತು ಮಟ್ಟಣ್ಣವರ್ ಆರೋಪಗಳಿಂದ ಹಿಂದೆ ಸರಿದಿದ್ದಾರೆಂದು ತಿಳಿದುಬಂದಿದೆ. ಅವರಿಗೆ ಮತ್ತು ಅವರ ವಕೀಲರಿಗೆ ಯಾರು ಹಣ ನೀಡುತ್ತಿದ್ದಾರೆ? ಅದನ್ನು ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿ ಮಧ್ಯಂತರ ವರದಿಯನ್ನು ಸಲ್ಲಿಸಬೇಕು. ದೂರುದಾರ ವ್ಯಕ್ತಿ ನೂರಾರು ಶವಗಳನ್ನು ಹೂಳಲಾಗಿದೆ ಎಂದು ಹೇಳಿದ್ದಾನೆ. ಹಾಗೆ ಮಾಡಲು ಸಾಧ್ಯವೇ? ಧರ್ಮಾಧಿಕಾರಿ ಡಿ ವೀರೇಂದ್ರ ಹೆಗ್ಗಡೆ ಅವರ ಪರವಾಗಿ ಪ್ರಕರಣವನ್ನು ಎನ್‌ಐಎಗೆ ಹಸ್ತಾಂತರಿಸುವಂತೆ ನಾನು ಸರ್ಕಾರಕ್ಕೆ ಮನವಿ ಮಾಡುತ್ತೇನೆ. ನ್ಯಾಯ ಸಿಗುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ತಿಳಿಸಿದ್ದಾರೆ.

## ಮಹಿಳೆಯನ್ನು ವಂಚಿಸಿದ್ದ ನೈಜೀರಿಯಾ ವ್ಯಕ್ತಿಯ ಬಂಧನ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ


ಸೆ.4– ಜಿಲ್ಲೆಯ ಇಳಕಲ್ ನಗರದ ಮಹಿಳೆಯೋರ್ವಳನ್ನು ಮದುವೆಯಾಗುವುದಾಗಿ ನಂಬಿಸಿ ಅವರಿಂದ 5 ಲಕ್ಷ ರೂಪಾಯಿ ಪಡೆದು ವಂಚಿಸಿದ್ದ ನೈಜಿರಿಯಾ ಮೂಲದ ವ್ಯಕ್ತಿಯನ್ನು ನಗರದ ಪೊಲೀಸರು ಬಂಧಿಸಿದ್ದಾರೆ. ಮ್ಯಾಟ್ರಿಮೋನಿ ಮೂಲಕ ಮಹಿಳೆಗೆ ಪರಿಚಿತನಾದ ನೈಜೀರಿಯಾದ ಆಲಿವರ್ ವುಗುವೋ ಒಗಿಚಿ–ಕೊ ಎಂಬಾತ ಸತ್ಯ ಅಮಿತ ಹೆಸರಿನಲ್ಲಿ ಪರಿಚಯಿಸಿಕೊಂಡು ಮಹಿಳೆಯನ್ನು ವಂಚಿಸಿದ್ದ. ತಾನು ಲಂಡನ್ ನಿವಾಸಿ ಎಂದು ಹೇಳಿಕೊಂಡಿದ್ದ ಈತ, ತಾನು ಲಂಡನ್ನನಿಂದ ಮದುವೆಗಾಗಿ ಒಂದು ಕೋಟಿ ಯು.ಎಸ್ ಡಾಲರ್ ಹಣ ತಂದಿದ್ದು, ದೆಹಲಿ ಕಸ್ಟಮ್ಸ್ ಕಚೇರಿಯಲ್ಲಿ ಹಣ ಸೀಜ್ ಮಾಡಿದ್ದಾರೆ. ಅದನ್ನು ಬಿಡಿಸಿಕೊಳ್ಳಲು ಇಂಡಿಯನ್ ಕರೆನ್ಸಿ ಬೇಕಾಗಿದ್ದು ಅದಕ್ಕಾಗಿ 5.50 ಲಕ್ಷ ಹಣ ಕಳಿಸುವಂತೆ ತಿಳಿಸಿ ಹಣ ಪಡೆದು ವಂಚಿಸಿದ್ದ. ಹಾಲಿ ಮುಂಬಯಿ ನಿವಾಸಿಯಾಗಿದ್ದ ಈತ 2024 ರಲ್ಲಿ ಇಳಕಲ್ ಮಹಿಳೆಯನ್ನು ವಂಚಿಸಿದ್ದ. ಈ ಕುರಿತು ಇಳಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ, ನಂತರ ಅದು ಬಾಗಲಕೋಟೆ ಸಿಇಎನ್ ಪೊಲೀಸ್ ಠಾಣೆಗೆ ವರ್ಗಾವಣೆಗೊಂಡಿತ್ತು. ಈ ಸಂಬಂಧ ಕಾರ್ಯಾಚರಣೆ ಕೈಗೊಂಡ ಸಿಇಎನ್ ಪೊಲೀಸರು ವಂಚಕನನ್ನು ಬಂಧಿಸಿದ್ದಾರೆ. ಬಂಧಿತ ವ್ಯಕ್ತಿಯಿಂದ 4 ಮೊಬೈಲ್, ಒಂದು ಲ್ಯಾಪ್‌ಟಾಪ್, ಪಾಸ್ಪೋರ್ಟ್, ಯುಎಸ್ ಡಾಲರ್ ಇರುವ ಹಾಳೆಯ ಬಂಡಲ್ ಜಪ್ತ ಮಾಡಿಕೊಂಡಿದ್ದಾರೆ.

## ಧರ್ಮಸ್ಥಳ ಪ್ರಕರಣ: ಬೆಂಗಳೂರಿನಲ್ಲಿ ಯೂಟ್ಯೂಬರ್ ಸಮೀರ್ ಮನೆ ಮೇಲೆ ಪೊಲೀಸ್ ದಾಳಿ

ಮಲ್ಲಮ್ಮ ನುಡಿ ವಾರ್ತೆ ಮಂಗಳೂರು

ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ಪೊಲೀಸರು ಗುರುವಾರ ಯೂಟ್ಯೂಬರ್ ಸಮೀರ್ ಎಂ ಡಿ ಅವರ ಬೆಂಗಳೂರಿನ ನಿವಾಸದ ಮೇಲೆ ದಾಳಿ ನಡೆಸಿ, ತೀವ್ರ ಶೋಧ ನಡೆಸಿದ್ದಾರೆ.

ಎಐ ವಿಡಿಯೋ ಬಳಸಿ ಧರ್ಮಸ್ಥಳ ವಿರುದ್ಧ ಸಾಲು ಸಾಲು ಆರೋಪ ಮಾಡಿದ ಆರೋಪದ ಮೇಲೆ ಸಮೀರ್ ವಿರುದ್ಧ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಸೆಪ್ಟೆಂಬರ್ 3 ರಂದು ಬೆಳ್ತಂಗಡಿ ನ್ಯಾಯಾಲಯ ಹೊರಡಿಸಿದ ಸರ್ಚ್ ವಾರಂಟ್ ಅಡಿಯಲ್ಲಿ ಇಂದು ಪೊಲೀಸರು ಶೋಧ ಕಾರ್ಯಾಚರಣೆ ನಡೆಸಿದ್ದಾರೆ.



ಸರ್ಕಲ್ ಇನ್ಸ್‌ಪೆಕ್ಟರ್ ನಾಗೇಶ್ ಕದ್ರಿ, ವಿಧಿವಿಜ್ಞಾನ ಸಿಬ್ಬಂದಿಯೊಂದಿಗೆ, ಬನ್ನೇರುಘಟ್ಟದ ಹುಲ್ಲಹಳ್ಳಿಯಲ್ಲಿರುವ ಸಮೀರ್ ಅವರ ಬಾಡಿಗೆ ಅಪಾರ್ಟ್‌ಮೆಂಟ್ ಮೇಲೆ ದಾಳಿ ನಡೆಸಲಾಗಿದೆ.

ಯೂಟ್ಯೂಬರ್ ಸಮೀರ್

ಶೋಧದ ಬಗ್ಗೆ ಸಮೀರ್‌ಗೆ ಮುಂಚಿತವಾಗಿ ಮಾಹಿತಿ ನೀಡಲಾಗಿತ್ತು ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ವಿಡಿಯೋ ರೆಕಾರ್ಡಿಂಗ್‌ಗಾಗಿ ಬಳಸಲಾಗಿದೆ ಎಂದು ನಂಬಲಾದ ಕಂಪ್ಯೂಟರ್ ಮತ್ತು ಮೊಬೈಲ್ ಫೋನ್ ಅನ್ನು ಹೆಚ್ಚಿನ ವಿಧಿವಿಜ್ಞಾನ ಪರೀಕ್ಷೆಗಾಗಿ ವಶಪಡಿಸಿಕೊಳ್ಳಲಾಗಿದೆ.

ಈ ಹಿಂದೆ ಪೊಲೀಸರು ಬಂಧಿಸಲು ತೆರಳಿದ್ದಾಗ ತಪ್ಪಿಸಿಕೊಂಡು ಮಂಗಳೂರು ಕೋರ್ಟ್ ನಿಂದ ಜಾಮೀನು ಪಡೆದುಕೊಂಡಿರುವ ಸಮೀರ್, ಬಂಧನದಿಂದ ಪಾರಾಗಿದ್ದರು. ಆದ್ರೆ, ಇದೀಗ ಪೊಲೀಸರು ಸರ್ಚ್ ವಾರೆಂಟ್ ಪಡೆದು ಸಮೀರ್ ಮನೆಯಲ್ಲಿ ಶೋಧ ನಡೆಸಿದ್ದಾರೆ.

# ಮೈಯಲ್ಲಿ ಬಟ್ಟೆ ಇದ್ದಂತೆ, ಕೈಯಲ್ಲಿ ಪುಸ್ತಕ ಇರಲಿ: ಸಿದ್ರಾಮ ಶಿಂಧೆ



ಮಲ್ಲಮ್ಮ ನುಡಿ ವಾರ್ತೆ ಬೀದರ.

ಬೀದರ. ಸೆ. 03 :– ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರು ಹೇಳಿದಂತೆ ಮೈಯಲ್ಲಿ ಬಟ್ಟೆ ಧರಿಸುವುದು ಎಷ್ಟು ಅನಿವಾರ್ಯವೊ ಕೈಯಲ್ಲಿ ಪುಸ್ತಕ ಅಷ್ಟೆ ಮಹತ್ವದ್ದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಶಿಂಧೆ ತಿಳಿಸಿದರು.

ಮಂಗಳವಾರ ಸಾಯಂಕಾಲ ನಗರದ ರೋಟ್ರಿ ವೃತ್ತದಲ್ಲಿರುವ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಯಲ್ಲಿ ಕರ್ನಾಟಕ ಬರಹಗಾರರ ಮತ್ತು ಕಲಾವಿದರ ಸಂಘ ಬೀದರ್ ಮತ್ತು ಕರ್ನಾಟಕ ಪುಸ್ತಕ ಪ್ರಾಧಿಕಾರ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಸಾಹಿತಿ ಪ್ರೊ.ಶಿವಕುಮಾರ ನಾಗವಾರ ಅವರ ಕಥಾ ಸಂಕಲನ ಹಣಾದಿ ಕುರಿತು ತಿಂಗಳ ಪುಸ್ತಕ ಪರಿಚಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪುಸ್ತಕ ಓದುವ ಹವ್ಯಾಸ ಬೆಳೆಯುವುದರಿಂದ ವ್ಯಕ್ತಿತ್ವ ವಿಕಸನವಾಗುತ್ತದೆ. ಪುಸ್ತಕ ಸಂಸ್ಕೃತಿಯು ಕನ್ನಡ ನಾಡು, ನುಡಿ, ಭಾಷೆ ಬೆಳವಣಿಗೆ ಜೊತೆಗೆ ಸಾಹಿತಿಗಳ ಬರಹ ಬಲಿಷ್ಠವಾಗುತ್ತದೆ. ಉದಯೋನ್ಮುಖ ಬರಹಗಾರರಿಗೆ ಪುಸ್ತಕಗಳು ಮಾರ್ಗದರ್ಶಕವಾಗಿ ಕಾರ್ಯ ನಿರ್ವಹಿಸುತ್ತವೆ ಎಂದವರು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿವೃತ್ತ ಸಹಾಯಕ ನಿರ್ದೇಶಕ ಶಾಂತಕುಮಾರ ಪಾಟೀಲ, ವ್ಯಕ್ತಿತ್ವ ವಿಕಸನಕ್ಕೆ ಪುಸ್ತಕಗಳು ಪೂರಕವಾಗಿದ್ದು, ಮನುಷ್ಯನ ಜ್ಞಾನಶಕ್ತಿ ವೃದ್ಧಿಗೆ ಇವು ಸಹಕಾರಿಯಾಗಲಿವೆ. ಮೊಬೈಲ್ ಸಂಸ್ಕೃತಿ ನಮ್ಮ ಬೆಳವಣಿಗೆ, ಜಾನಪದ ಸಂಸ್ಕೃತಿ ನಿರ್ಮಾಣ, ಏಕಾಗ್ರತೆ, ನೆಮ್ಮದಿ, ಪರಸ್ಪರ ಸಂಬಂಧಗಳು ಹತ್ತಿರವಾಗಲು ಸಾಧ್ಯವಾಗಲಿದೆ. ಇದೆಲ್ಲಕ್ಕೂ ಮಿಗಿಲಾಗಿ ವ್ಯಕ್ತಿಯ ಗೌರವ ಹಾಗೂ ಘನತೆ ಹೆಚ್ಚಳಕ್ಕೆ ಪುಸ್ತಕಗಳು ತುಂಬ ಉಪಯುಕ್ತವಾಗಲಿವೆ ಎಂದರು. ಕರ್ನಾಟಕ ಬರಹಗಾರರ ಮತ್ತು ಕಲಾವಿದರ ಸಂಘದ ಅಧ್ಯಕ್ಷ ಪ್ರೊ.ಜಗನ್ನಾಥ ಹೆಬ್ಬಾಳೆ ಅಧ್ಯಕ್ಷತೆ ವಹಿಸಿ ಮಾತನಾಡಿ, 33 ಸ್ಥಳಿಯ ಸಾಹಿತಿಗಳ ಪುಸ್ತಕಗಳನ್ನು ಬೀದರ್ ವಿಶ್ವವಿದ್ಯಾಲಯ ತನ್ನ ಪಠ್ಯಕ್ರಮಕ್ಕಾಗಿ ಬಳಸಿಕೊಂಡಿದೆ. ಇದರಿಂದ ಗ್ರಾಮೀಣ ಭಾಗದ ಜನಪದ ಬಳಕೆಯಾಗಿದೆ. ಗ್ರಾಮಾಂತರ ಕಲೆ, ಸಾಹಿತ್ಯ, ಸಂಸ್ಕೃತಿಯ ಏಳಿಗೆಗೆ ಇದು ಸಹಾಯಕವಾಗಿದೆ ಎಂದರು.

ಕಥಾ ಸಂಕಲನ ಹೊರ ತಂದಿರುವ ಸಾಹಿತಿ ಪ್ರೊ.ಶಿವಕುಮಾರ ನಾಗವಾರ ಮಾತನಾಡಿ, ಬೀದರ್ ಜಿಲ್ಲೆ ಶಾಹಿ ಸಂಸ್ಕೃತಿಯ ನೆಲೆಯಾಗಿದ್ದು, ಹಿಂದಿ, ಮರಾಠಿ, ತೆಲಗು, ಉರ್ದು ಭಾಷೆ ಸಮ್ಮಿಶ್ರಣದಲ್ಲಿ ಸಾಹಿತ್ಯ ರಚನೆಯಾಗುತ್ತಿದೆ. ಅದರಲ್ಲೂ ಮುಖ್ಯವಾಗಿ ಗ್ರಾಮೀಣ ಭಾಗದ ಪದಗಳನ್ನು ಬಳಿಕೆ ಮಾಡುವ ಮುಖೇನ ಈ ಕಥಾ ಸಂಕಲನ ಗಟ್ಟಿಗೊಳಿಸಲಾಗಿದೆ ಎಂದರು.

ಸಾಹಿತಿ ಗವಿಸಿದ್ದಪ್ಪ ಪಾಟೀಲ ಪುಸ್ತಕ ಪರಿಚಯ ಮಾಡಿ ಮಾತನಾಡಿ, ಇದರಲ್ಲಿ 7 ವಿವಿಧ ಕಥೆಗಳನ್ನು ಸಂಗ್ರಹಿಸಲಾಗಿದೆ. ನವ್ಯ ಸಾಹಿತ್ಯ, ಹಳೆಗನ್ನಡ ಪದಗಳ ಜೋಡಣೆ, ಬಂಡಾಯ ಸಾಹಿತ್ಯ, ದಲಿತ ಸಾಹಿತ್ಯ ಎಲ್ಲವನ್ನು ಹಿಡಿದಿಡಲಾಗಿದೆ. ಸ್ಥಳಿಯ ನೆಲೆಗಟ್ಟಾದ ಹಣಾದಿ ನಮ್ಮ ಗ್ರಾಮೀಣ ಜನರ ಭೌಗೋಳಿಕ ಬದುಕು ವಿಶ್ಲೇಶಿಸಲಾಗಿದೆ ಎಂದು ಹೇಳಿ ಇಡೀ ಪುಸ್ತಕದ ಸಾರಂಶವನ್ನು ಬಿಚ್ಚಿಟ್ಟರು.

ತಿಂಗಳ ಪುಸ್ತಕ ಪರಿಚಯ ಸಮಿತಿ ಅಧ್ಯಕ್ಷೆ ಡಾ.ಸುನಿತಾ ಕೂಡ್ಲಿಕರ್ ಪ್ರಾಸ್ತಾವಿಕ ಮಾತನಾಡಿದರು. ಪ್ರಧಾನ ಕಾರ್ಯದರ್ಶಿ ವೈಜಿನಾಥ ಪಾಟೀಲ ಸ್ವಾಗತಿಸಿದರು. ಸಹ ಕಾರ್ಯದರ್ಶಿ ಪ್ರವಿಣ ಜೇರ್ಗೆ ಕಾರ್ಯಕ್ರಮ ನಿರೂಪಿಸಿ, ಉಪನ್ಯಾಸಕಿ ಅಂಬಿಕಾ ಬಿರಾದಾರ ವಂದಿಸಿದರು.

ದೇಶಪಾಂಡೆ, ಡಾ.ರಾಜಕುಮಾರ ಹೆಬ್ಬಾಳೆ, ಶಂಭೂಲಿಂಗ ವಾಲ್ದೊಡ್ಡಿ, ವೀರಭದ್ರಪ್ಪ ಉಪ್ಪಿನ, ಪುಂಡಲಿಕರಾವ ಇಟಕಂಪಳ್ಳಿ, ಡಾ.ರಾಮಚಂದ್ರ ಗಣಾಪುರ, ಗುರುನಾಥ ಅಕ್ಕಣ್ಣ, ರುಕ್ಮೊದ್ದಿನ್ ಇಸ್ಲಾಂಪುರ, ಡಾ.ಅಶೋಕ ಕೋರೆ ಸೇರಿದಂತೆ ಸಾಹಿತ್ಯಾಸಕ್ತರು, ಬರಹಗಾರರು, ಕಲಾವಿದರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಸಹಪಠ್ಯ ಚಟುವಟಿಕೆ ಅವಶ್ಯಕ:ಎಂ.ಡಿ ಸಗಿರೋದ್ದಿನ್

ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ



ಸೆ:4– ಪೂರ್ವ ಮತ್ತು ಪಶ್ಚಿಮ ಹಾಗೂ ಸಸ್ತಾಪೂರ ಕ್ಲಸ್ಟರ ಗಳ ಪ್ರಾಥಮಿಕ ಶಾಲಾ ಮಕ್ಕಳ ವಲಯ ಮಟ್ಟದ ಕ್ರೀಡಾಕೂಟಗಳನ್ನು ದೊಡ್ಡಪ್ಪ ಅಪ್ಪ ಇಲ್ಲಿನ ತಾಲೂಕು ಕ್ರೀಡಾಂಗಣದಲ್ಲಿ ನಡೆಸಲಾಯಿತು.

ನಗರ ಸಭೆ ಅಧ್ಯಕ್ಷರಾದ ಎಂ.ಡಿ ಸಗಿರೋದ್ದಿನ್ ಉದ್ಘಾಟಿಸಿ ಮಾತನಾಡಿ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಪಠ್ಯದೊಂದಿಗೆ ಸಹಪಠ್ಯ ಚಟುವಟಿಕೆ ಬಹಳ ಅವಶ್ಯಕವಾಗಿದೆ ಆದ್ದರಿಂದ ಎಲ್ಲ ಮಕ್ಕಳು ಕ್ರೀಡಾಕೂಟದಲ್ಲಿ ಭಾಗವಹಿಸಬೇಕೆಂದು ಹೇಳಿದರು.

ಸಿಪಿಐ ಅಲಿಸಾಬ ಮಾತನಾಡಿ ಸದೃಢ ದೇಹದಲ್ಲಿ ಸದೃಢ ಮನಸ್ಸು ಇರುತ್ತದೆ.ಆದ್ದರಿಂದ ಮಕ್ಕಳು ಮೊಬೈಲ್ ಬಳಕೆ ಕಡಿಮೆ ಮಾಡಿ ಕ್ರೀಡೆಯಲ್ಲಿ ಭಾಗವಹಿಸಿ ಹೆಚ್ಚಿನ ಸಾಧನೆ ಮಾಡಬಹುದು ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸಿದ್ದವೀರಯ್ಯ ರುದ್ನೂರ ಅಧ್ಯಕ್ಷತೆ ವಹಿಸಿದ್ದರು. ದೈಹಿಕ ಪರಿವೀಕ್ಷಕರಾದ ನಾಗನಾಥ ದುಬಲಗುಂಡೆ, ಶಿಕ್ಷಣ ಸಂಯೋಜಕರಾದ

ರಾಜಕುಮಾರ್ ಸಾಲಿ, ಮನೋಹರ ಕಂಟೆಕುರೆ ಹಾಗೂ ವಿಜಯಕುಮಾರ್ ಮಾನೆ,ಮಹೇತಾಬ ಪಟೇಲ್, ಶಿವಶಂಕರ್ ಪತಂಗೆ,ಲಕ್ಷ್ಮಣ ಹೆಂಬಾಡೆ, ಅಂಬಣ್ಣಾ ಘಾಂಗ್ರೆ, ಅಲ್ಲಾವುದ್ದೀನ್ ಪಟೇಲ, ದೇವೇಂದ್ರ ಪಟ್ನೆ,ರಾಜಮತಿ ಕೊರಾಳೆ, ಶರಣಪ್ಪಾ ಬಿರಾದಾರ,ಹೀರಾಸಿಂಗ್, ಸಂತೋಷ ಮೋರೆ, ಪ್ರಕಾಶ್, ಎಂ.ಡಿ ಅಹ್ಮದ್, ಎಂ.ಡಿ ಸಲಾಮತ, ಶಹಾಜಿ,

ಬಸವಕಾಂತ, ನಾಗನಾಥ ರೆಡ್ಡಿ,ಮಸ್ತಾನ್, ಸಿದ್ರಾಮಪ್ಪ , ದಿಲೀಪ, ಚಂದ್ರಕಲಾ, ಶರಣಪ್ಪಾ, ಸಿದ್ದಣ್ಣ,ಫಜಿಲತ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ಮಕ್ಕಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.




ಬಸವಕಲ್ಯಾಣ :– ತಾಲೂಕಿನ ರಾಜೇಶ್ವರ್ ಗ್ರಾಮದಲ್ಲಿ ಶ್ರೀ ಮಾಣಿಕ ಪ್ರಭು ಬ್ರಾಹ್ಮಣ್ ಸಮಾಜದವರು 9ನೇ ದಿನ ಅಥರ್ವಶಿಶ್ ಪೂಜಾ ಮತ್ತು ಆರ್ತಿ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಶಿನಾಚಾರಿಕಟ್ಟಿ. ರಾಜು ಮಹಾರಾಜ್. ಹುಮನಾಬಾದ ತಾಲೂಕಿನ ಬ್ರಾಹ್ಮಣ ಸಮಾಜದ ಉಪಾಧ್ಯಕ್ಷರಾದ ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿ. ದಿಗಂಬರ್ ಜೋಶಿ. ಅದ್ವೇತ್ ಜೋಶಿ, ಲಕ್ಷ್ಮಿ ಮಹಿಳಾ ಮಂಡಲದಿಂದ ಬರುವ ಶನಿವಾರ ದಿನಾಂಕ 6 ರಂದು ಭಜನೆ ಕಾರ್ಯಕ್ರಮದ ಸಮಾರೋಪ ಸಮಾರಂಭ ಜರುಗಲಿದೆ ಬಂದಂತಹ ಭಕ್ತಾದಿಗಳಿಗೆ ಮಹಾಪ್ರಶಾದ ವೆವಸ್ಥೆ ಮಾಡಲಾಗಿದೆ ಎಂದು ಸಂಘದ ವತಿಯಿಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಣಾಮಕಾರಿ ಪಾಠ ಬೋಧನೆಗೆ ಡಿಜಿಟಲ್ ತಂತ್ರಜ್ಞಾನ ಸಹಕಾರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಸೆ.4:ಪಠ್ಯವಿಷಯಗಳನ್ನು ವಿದ್ಯಾರ್ಥಿಗಳಿಗೆ ಮನಮುಟ್ಟುವಂತೆ ಕಲಿಸಲು ಡಿಜಿಟಲ್ ತಂತ್ರಜ್ಞಾನ ತುಂಬಾ ಸಹಕಾರಿ ಹಾಗೂ ಪರಿಣಾಮಕಾರಿ ಎಂದು

ಡಿಡಿಪಿಯು ಚಂದ್ರಕಾಂತ ಶಹಬಾದಕರ್ ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ವಸತಿ ವಿಜ್ಞಾನ ಪಿಯು ಕಾಲೇಜಿನಲ್ಲಿ ಗುರುವಾರ ಖಾನ್ ಅಕಾಡೆಮಿ, ಪದವಿಪೂರ್ವ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಪಿಯು ಉಪನ್ಯಾಸಕರಿಗಾಗಿ

ಹಮ್ಮಿಕೊಂಡಿದ್ದ ಜ್ಞಾನಸೇತು ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ವಿಷಯವಾರು ಉಪನ್ಯಾಸಕರು ಜ್ಞಾನಸೇತು ಕಾರ್ಯಾಗಾರದ ಮೂಲ ಉದ್ದೇಶ ಅರಿತುಕೊಳ್ಳಬೇಕು. ಡಿಜಿಟಲ್ ತಂತ್ರಜ್ಞಾನವನ್ನು ಸಾಧ್ಯವಾದಷ್ಟು ಹೆಚ್ಚಿನ ಮಟ್ಟದಲ್ಲಿ ಮತ್ತು ಪರಿಣಾಮಕಾರಿ ಬಳಸಿ ವಿದ್ಯಾರ್ಥಿಗಳನ್ನು ಪಠ್ಯವಿಷಯಗಳಲ್ಲಿ ಪರಿಪೂರ್ಣರನ್ನಾಗಿಸಬೇಕು. ಆ ಮೂಲಕ ಜಿಲ್ಲೆಯ ಪಿಯು ಫಲಿತಾಂಶ ಹೆಚ್ಚಳ ಆಗುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ವಿದ್ಯಾರ್ಥಿಗಳು ಮೊಬೈಲ್ ಸೇರಿದಂತೆ ತಂತ್ರಜ್ಞಾನಗಳ ಸರಿಯಾದ ಉಪಯೋಗ ಮಾಡಿಕೊಳ್ಳಬೇಕು. ಆನ್ಲೈನ್ ವೇದಿಕೆಗಳಲ್ಲಿ ಲಭ್ಯವಿರುವ ವಿವಿಧ ಕಲಿಕಾ ವಿಡಿಯೋಗಳನ್ನು ನೋಡುವುದರ ಮೂಲಕ ಪಠ್ಯ ವಿಷಯಗಳ ಮೇಲೆ ಪ್ರಭುತ್ವ ಸಾಧಿಸಬೇಕು ಎಂದು ಹೇಳಿದರು.

ಹಿರೇಮಠ ಸಂಸ್ಥಾನ ವಿದ್ಯಾಪೀಠದ ಕಾರ್ಯದರ್ಶಿ ಮಹಾಲಿಂಗಸ್ವಾಮೀಜಿ ಸಾನಿಧ್ಯ ವಹಿಸಿ ಮಾತನಾಡಿದರು.

ಆಡಳಿತಾಧಿಕಾರಿ ಮೋಹನರೆಡ್ಡಿ ಅಧ್ಯಕ್ಷತೆ ವಹಿಸಿದ್ದರು.

ನೋಡಲ್ ಅಧಿಕಾರಿಗಳಾದ ಚಂದ್ರಕಾಂತ ಗಂಗಶೆಟ್ಟಿ, ಗೀತಾ, ಪ್ರಾಚಾರ್ಯರ ಸಂಘದ ಗೌರವ ಅಧ್ಯಕ್ಷ ಮನ್ಮಥ ಢೋಲೆ, ಅನುದಾನಿತ ಪದವಿ ಪೂರ್ವ ಕಾಲೇಜು ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಡಾ. ವಿಜಯಕುಮಾರ ಕೆ. ಪಾಟೀಲ, ಪ್ರಾಚಾರ್ಯರ ಸಂಘದ ರಾಜ್ಯ ಪ್ರತಿನಿಧಿ ಬಾಲಾಜಿ ವಾಡೇಕರ್, ರಾಜಶೇಖರ ಮಂಗಲಗಿ ಸಂಪನ್ಮೂಲ ವ್ಯಕ್ತಿಗಳಾದ ಶಿವಕುಮಾರ ಕೋಸಂ, ಶ್ರೀನಿವಾಸ, ಶ್ರೀಕಾಂತ, ಸುನಿಲ್ ವೈಜಾಪೂರೆ ಸೇರಿದಂತೆ ಇತರರು ಇದ್ದರು. ಪ್ರಾಚಾರ್ಯ ಬಸವರಾಜ ಮೊಳಕೀರೆ ಸ್ವಾಗತಿಸಿದರು.

# ಸುದ್ದಿಮುಟ್ಟಿಸುವಲ್ಲಿ ವಿತರಕರ ಸೇವೆ ಮಾದರಿ : ಜಯರಾಜ ದಾಬಶೆಟ್ಟಿ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.4: ಪತ್ರಿಕೆಯಲ್ಲಿಯ ಸುದ್ದಿ ಮುಟ್ಟಿಸುವಲ್ಲಿ ಪತ್ತಿಕಾ ವಿತರಕರ ಸೇವೆ ಮಾದರಿಯಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟಿ ಹೇಳಿದರು. ಪಟ್ಟಣದ ಬಸ್ ನಿಲ್ದಾಣದಲ್ಲಿ ಗುರುವಾರ ನಡೆದ ಪತ್ರಿಕಾ ವಿತರಕರ ದಿನಾಚರಣೆಯಲ್ಲಿ, ವಿತರಕರನ್ನು ಸನ್ಮಾನಿಸಿ ಅವರು ಮಾತನಾಡಿದರು. ಪ್ರತಿನಿತ್ಯ ಮಳೆ, ಚಳಿ, ಗಾಳಿ ಲೆಕ್ಕಿಸದೇ ಮನೆ, ಮನೆಗೆ ಪತ್ರಿಕೆಗಳನ್ನು ಮುಟ್ಟಿಸುವಲ್ಲಿ ಶ್ರಮ ಪಡುತ್ತಿರುವ ಪತ್ರಿಕಾ ವಿತರಕರ ಪಾತ್ರ ಬಹುದೊಡ್ಡದಾಗಿದೆ. ನಾವು ಬರೆದಿರುವ ಸುದ್ದಿಗಳನ್ನು ವಿತಕರಕರು ಓದುಗರಿಗೆ ಮುಟ್ಟಿಸದೇ ಇದ್ದರೆ, ನಾವು ಬರೆದ ಸುದ್ದಿ ವ್ಯರ್ಥವಾಗುತ್ತದೆ. ಆದರೆ ಯಾವುದೇ ಕಷ್ಟಗಳಿಗೂ ಲೆಕ್ಕಿಸದೇ ಸೂರ್ಯೋದಯಕ್ಕೂ ಮುನ್ನ ಮನೆಮನೆಗೆ ಸುದ್ದಿ ಮುಟ್ಟಿಸುವ ವಿತರಕರ ಸೇವೆ ಮಾದರಿಯಾಗಿದೆ ಎಂದು ಹೇಳಿದರು.

ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಕಾರ್ಯದರ್ಶಿ ಗಣಪತಿ ಬೋಚರೆ, ಖಜಾಂಚಿ ಸಂತೋಷ ಬಿಜಿಪಾಟೀಲ ಪತ್ರಿಕಾ ವಿತರಕರ ಕಾರ್ಯದ ಬಗ್ಗೆ ಮಾತನಾಡಿದರು. ಇದೇವೇಳೆ ಪತ್ರಿಕಾ ವಿತರಕರಾದ ರಾಜಗುರು ಮಾಗಾವೆ, ಫಯಾಜ್ ಪಟೇಲ, ಮಂಜುನಾಥ ಹೊನ್ನಾಳೆ, ರಿಯಾಜಮಿಯ್ಯಾ ಪಟೇಲ, ಖಾನಸಾಬ್ ನೂರಸಾಬ್, ಮಹಾರಾಷ್ಟ್ರ ಉದಯಗಿರಿಯ ಕನ್ನಡ ಪತ್ರಿಕೆ ವಿತರಕ ಮನಿಯಾರ್ ಎಜಾಜ್ ರವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಸತ್ಕರಿಸಲಾಯಿತು.

ಕಾರ್ಯಕ್ರಮದಲ್ಲಿ ಪತ್ರಕರ್ತರಾದ ಸ್ವಾಮಿ ಭದ್ರೇಶ ಗುರಯ್ಯಾ, ದೀಪಕ ಥಮಕೆ, ಪರಶುರಾಮ ಕರ್ಣ, ನರೇಂದ್ರ ಸೋಮಶೆಟ್ಟಿ, ಸಂತೋಷ ಹಡಪದ, ಸಂತೋಷ ನಾಟೆಕರ ಉಪಸ್ಥಿತರಿದ್ದರು.

# ಅಷ್ಟೂರ: ರಾಷ್ಟ್ರೀಯ ಪೌಷ್ಟಿಕ ಸಪ್ತಾಹ ದಿನಾಚರಣೆ ಕುರಿತು ಕಾನೂನು ಅರಿವು ನೆರವು



ಬೀದರ, ಸೆ.04: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ, ತಾಲೂಕ ಪಂಚಾಯತ ಬೀದರ, ಗ್ರಾಮ ಪಂಚಾಯತ ಅಷ್ಟೂರ, .ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೀದರ ಇವರುಗಳ ಸಂಯುಕ್ತಾಶ್ರಯದಲ್ಲಿಂದು ರಾಷ್ಟ್ರೀಯ ಪೌಷ್ಟಿಕ ಸಪ್ತಾಹ ದಿನಚರಣೆ ಅಂಗವಾಗಿ ಅಷ್ಟೂರ ಗ್ರಾಮ ಪಂಚಾಯತನಲ್ಲಿ ಹಮ್ಮಿಕೊಂಡಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಳಾದ ಪ್ರಕಾಶ ಅರ್ಜುನ ಬನಸೋಡೆ ದೀಪ ಬೇಳಗುವುದರ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ನಂತರ ಮಾತನಾಡಿ ಪೋಷ್ಟಿಕ ಆಹಾರದ ಕುರಿತು, 90 ದಿನಗಳ ಮಧ್ಯಸ್ಥಿಕೆ ಅಭಿಯಾನದ ಹಾಗೂ ಲೋಕ ಅದಾಲತನ ಮಹತ್ವ ಮತ್ತು ಅದರ ಕಾರ್ಯವೈಖರಿ ಬಗ್ಗೆ ತಿಳಿಸಿದರು.

ಬೀದರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಶ್ರೀಧರ ಎಮ್. ಅವರು ಅಧ್ಯಕ್ಷಿಯ ಭಾಷಣವನ್ನು ಮಾಡಿದರು, ಬೀದರ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಷಣ್ಮುಖಯ್ಯಾ ಬಿ. ಸ್ವಾಮಿ ಪೋಷ್ಟಿಕ ಆಹಾರ ಕುರಿತು ಮಾತನಾಡಿದರು.

ಉಪನ್ಯಾಸಕರಾಗಿ ಬೀದರ ವಕೀಲರಾದ ಶಿವಶರಣಪ್ಪಾ ಪಾಟೀಲ್ ಅವರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸವಲತ್ತುಗಳ ಬಗ್ಗೆ ಮಾತನಾಡಿದರು. ಬೀದರ ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ ಜನರಿಗೆ ಮಕ್ಕಳಿಗೆ ಪೋಷ್ಟಿಕ ಆಹಾರ ಕುರಿತು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ತಾಲೂಕ ಆರೋಗ್ಯ ಅಧಿಕಾರಿ

ಸಂಗಾರೆಡ್ಡಿ, ಮಹಿಳಾ ಮತ್ತು ಮಕ್ಕಳ ಅಭಿವೃಧಿ ಇಲಾಖೆಯ ಶಿಶು ಅಭಿವೃಧಿ ಯೋಜನಾಧಿಕಾರಿ ಶಾರದಾ ಎನ್ ಕಲ್ಮಲಕರ, ಅಷ್ಟೂರ ಗ್ರಾಮ ಪಂಚಾಯತ ಪಿಡಿಓ ಗಾಯತ್ರಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂದಿಗಳು, ಅಷ್ಟೂರ ಗ್ರಾಮ ಪಂಚಾಯತ ಸಿಬ್ಬಂಧಿ ವರ್ಗದವರು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಶಿಕ್ಷಕರು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕೈಮಗ್ಗ ನೇಕಾರ ಸಮ್ಮಾನ್ ಯೋಜನೆಯಡಿಯಲ್ಲಿ ಅರ್ಜಿ ಆಹ್ವಾನ

ಬೀದರ, ಸೆ.04:2025–26ನೇ ಸಾಲಿಗೆ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರಿಗೆ "ನೇಕಾರ ಸಮ್ಮಾನ್" ಯೋಜನೆಯಡಿಲ್ಲಿ ನೋಂದಾಯಿಸಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೈಮಗ್ಗ ಮತ್ತು ಜವಳಿ ಇಲಾಖೆಯ ನೇಕಾರ ಸಮ್ಮಾನ್ ಯೋಜನೆಯಡಿ ಕೈಮಗ್ಗ ನೇಕಾರಿಕೆ ಹಾಗೂ ಇತರೆ(ಆಲೈಡ್) ಕೈಮಗ್ಗ ನೇಕಾರಿಕೆ ವೃತ್ತಿಯನ್ನು ಹೊಂದಿದ ನೇಕಾರರಿಗೆ ವಾರ್ಷಿಕವಾಗಿ ರೂ.5000 ಗಳ ಆರ್ಥಿಕ ನೇರವನ್ನು ಡಿಬಿಟಿ ಮೂಲಕ ನೀಡಲು ಹೊಸ ಅರ್ಜಿ ನೋಂದಣಿ ಮಾಡಲು ಅರ್ಜಿ ನಮೂನೆಯಲ್ಲಿ ಮಾಹಿತಿಯನ್ನು ಪಡೆದು ಸೇವಾ ಸಿಂಧು ತಂತ್ರಾಂಶದಲ್ಲಿ ಅರ್ಜಿಯನ್ನು ಸಲ್ಲಿಸಬೇಕಾಗಿರುತ್ತದೆ. ಅರ್ಹರು ದಿನಾಂಕ:15–09–2025 ರೊಳಗಾಗಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, 2ನೇ ಮಹಡಿ, ರೇಷ್ಮೆ ಇಲಾಖೆ ಕಛೇರಿ ಕಟ್ಟಡ, ಕೊಳಾರ (ಕೆ), ಜಿಲ್ಲಾ ಪಂಚಾಯತ್, ಬೀದರ ದೂರವಾಣಿ ಸಂಖ್ಯೆ:08482–233129 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಮಾದಕ ವಸ್ತುಗಳಿಂದ ವಿದ್ಯಾರ್ಥಿಗಳು ದೂರವಿರಬೇಕು: ನೇಳಗೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಸೆ.4:ವಿದ್ಯಾರ್ಥಿಗಳು ಮಾದಕ ವಸ್ತುಗಳಿಂದ ದೂರವಿರಬೇಕು ಮತ್ತು ಅವುಗಳು ಬಳಸುವುದರಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಹೊಂದಿರಬೇಕು ಎಂದು ತಾಲೂಕಿನ ಮುಸ್ತರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕೌಶಲ್ಯಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾ ಪಂಚಾಯತ್ ಬೀದರ್, ತಾಲೂಕ ಪಂಚಾಯತ್ ಚಿಟಗುಪ್ಪ ಹಾಗೂ ಗ್ರಾಮ ಪಂಚಾಯತ್ ಮುಸ್ತರಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಮಾದಕ ಮುಕ್ತ ಕರ್ನಾಟಕ ಅಭಿಯಾನಕ್ಕೆ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಬಸವರಾಜ ನೇಳಗೆ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ಆರೋಗ್ಯ ಇಲಾಖೆ ಅಧಿಕಾರಿ ಶೇಕ್ ಇಮ್ರಾನ್ ಮಾತನಾಡಿ, ಸಾರ್ವಜನಿಕರ ಮತ್ತು ಯುವಕರ ಹಿತದೃಷ್ಟಿಯಿಂದ ಸರ್ಕಾರ ಹಮ್ಮಿಕೊಂಡಿರುವ ಅಭಿಯಾನಗಳಿಗೆ ನಾವೆಲ್ಲರೂ ಕೈಜೋಡಿಸಿದ್ದಾಗ ಮಾತ್ರ ಯಶಸ್ವಿಯಾಗಲು ಸಾಧ್ಯವಾಗುತ್ತದೆ, ರಾಜ್ಯಾದ್ಯಂತ ಆಗಸ್ಟ್ 1ರಿಂದ ಸೆಪ್ಟೆಂಬರ್ 30ರ ವರೆಗೆ ಹಮ್ಮಿಕೊಂಡ ಮಾದಕ ಮುಕ್ತ ಕರ್ನಾಟಕ ಅಭಿಯಾನ ಯಶಸ್ವಿಗೊಳಿಸಲು ಸರ್ಕಾರದ ಜವಾಬ್ದಾರಿ ಎಷ್ಟು ಮುಖ್ಯವೂ ಅಷ್ಟೇ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು. ಮನುಷ್ಯ ಮಾದಕ ವ್ಯಸನಕ್ಕೆ ಅಂಟಿಕೊಳ್ಳದೆ ಇದ್ದಲ್ಲಿ ಸಾಕಷ್ಟು ದುಡ್ಡು ಉಳಿಸಬಹುದು ಅದೇ ದುಡ್ಡು ಕುಟುಂಬ ನಿರ್ವಹಣೆ, ಮಕ್ಕಳ ಶಿಕ್ಷಣಕ್ಕೆ ಸೇರಿದಂತೆ ಒಳ್ಳೆಯ ಕೆಲಸಗಳಿಗೆ ಸಾಯವಾಗುತ್ತದೆ

ಇದರ ಬಗ್ಗೆ ಸ್ವಸಹಾಯ ಸಂಘದ ಮಹಿಳೆಯರು ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಅಂದಾಗ ಮಾತ್ರ ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದರು. ಶಾಲೆಯ ಮುಖ್ಯ ಶಿಕ್ಷಕ ರಮೇಶ್ ಸಲಗರ್ ಮಾತನಾಡಿ, ಮಾದಕ ವ್ಯಸನ ಮಾಡುವುದರಿಂದ ಸಮಾಜದಲ್ಲಿ ಗೌರವದಿಂದ ಕಾಣುವುದಿಲ್ಲ ಜೊತೆಗೆ ಕುಟುಂಬ ಮತ್ತು

ಮಕ್ಕಳ ಮೇಲೆ ತುಂಬಾ ಕೆಟ್ಟ ಪರಿಣಾಮ ಬೀರುತ್ತವೆ

ಆದ್ದರಿಂದ ಸ್ವಸಹಾಯ ಸಂಘದ ಮಹಿಳೆಯರು ಮತ್ತು ಎನ್.ಆರ್.ಎಲ್.ಎಂ ಸಿಬ್ಬಂದಿಗಳು ಸೇರಿದಂತೆ ವಿವಿಧ ಇಲಾಖೆಯ ಸಹಯೋಗದೊಂದಿಗೆ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು. ಎನ್.ಆರ್.ಎಲ್.ಎಂ. ವಲಯ ಮೇಲ್ವಿಚಾರಕ ಗಣಪತಿ ಭಾಗ್ಯನಗರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಎಸ್ಡಿಎಂಸಿ ಅಧ್ಯಕ್ಷ ವಿಜಯಕುಮಾರ


ಮಜ್ಜಿಗೆ, ಸಂತೋಷಕುಮಾರ ಹತ್ತರಗಿ, ಆಶಾ ಕಾರ್ಯಕರ್ತೆಯರು, ಹಾಗೂ ಸ್ಥಳೀಯ ಸಂಪನ್ಮೂಲ ವ್ಯಕ್ತಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.


# ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಕಲಬುರಗಿ, ಸೆ.04–ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ್ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಸೆಪ್ಟೆಂಬರ್ 5 ರಂದು ಶುಕ್ರವಾರ ಬೆಳಿಗ್ಗೆ 11.45 ಗಂಟೆಗೆ ಕಲಬುರಗಿಗೆ ಆಗಮಿಸುವರು.

ನಂತರ ಅಂದು ಸಂಜೆ 5.30 ಗಂಟೆಗೆ ಕಲಬುರಗಿ ನಗರದ ಬಸವೇಶ್ವರ ಆಸ್ಪತ್ರೆಯಲ್ಲಿ ತುರ್ತು ನಿಗಾ ಘಟಕ ಹಾಗೂ ಐಸಿಯು ಘಟಕ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು. ಸೆಪ್ಟೆಂಬರ್ 6 ರಂದು ಶನಿವಾರ ಮಧ್ಯಾಹ್ನ 12.10 ಗಂಟೆಗೆ ಕಲಬುರಗಿಯಿಂದ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ಜಿಎಸ್ಟಿ ಕಡಿತ: ನಿರ್ಮಲ ಸೀತಾರಾಮನ್ ಕಾರ್ಯ ಶ್ಲಾಘನೀಯ






ಬೀದರ.ಸೆ. 04 : ಕೇಂದ್ರ ಸರಕಾರದ ಕೇಂದ್ರ ಹಣಕಾಸು ಸಚಿವೆಯವರಾದ ಶ್ರೀಮತಿ ನಿರ್ಮಲಾ ಸೀತಾರಾಮನ ನೇತೃತ್ವದಲ್ಲಿಯ ಸರಕು ಹಾಗೂ ಸೇವಾ ತೆರಿಗೆ ಮಂಡಳಿ ಸಭೆ ಶೇ 5% ಮತ್ತು 18% ತೆರಿಗೆ ದರಗಳಿರುವ ಎರಡು ಹಂತದ ತೆರಿಗೆ ಪದ್ಧತಿಗೆ ಅನುಮೋದನೆ ನೀಡಿ ಘೋಷಣೆ ಮಾಡಿದುದಕ್ಕಾಗಿ ಸಾಮಾನ್ಯ ಜನರಿಗೆ ವಿಶೇಷವಾಗಿ ಸಮಾಜದ ಮಧ್ಯಮ ವರ್ಗದವರಿಗೆ ಭಾರಿ ಅನುಕೂಲವಾಗಿದೆ. ಇದ–ರಿಂದ ಆರೋಗ್ಯ ಮತ್ತು ಜೀವ ವಿಮೆ ಪಾಲಿಸಿಗಳ ಮೇಲಿನ ತೆ–ರಿಗೆ ದರಗಳಿಂದ ಸಂಪೂರ್ಣ ವಿನಾಯಿತಿ, ದೈನಂದಿನ ಜೀವನವಾಸ್ಯಕ ವಸ್ತುಗಳು, ಔಷದಿಗಳು, ದಿನ ಬಳಕೆ ವಸ್ತುಗಳು, ವಾಹನಗಳ ಹಾಗೂ ವಿದ್ಯುನ್ಮಾನ ವಸ್ತುಗಳ ಬೆಲೆಗಳು ಕಡಿಮೆ ಆಗಿರುವದರಿಂದ ಜನ ನಿಟ್ಟುಸಿರು ಬಿಡುವಂತಾಗಿದೆ ಅಲ್ಲದೇ ತೆರಿಗೆ ಕಡಿತದ ಜೊತೆಗೆ ಮಧ್ಯಮ ಸಣ್ಣ ಮತ್ತು ಕೀರು ಉದ್ಯಮಗಳು ಹಾಗೂ ಸ್ಟಾರ್ಟಪ್‌ಗಳ

ನೊಂದಣಿಗೆ ಹಾಲಿಯಿರುವ 30 ದಿನಗಳ ಗಡುವನ್ನು ಕೇವಲ 3 ದಿನಕ್ಕೆ ಇಳಿಸುವ ನೀತಿ ಜಾರಿ ಅನುಮೋದನೆ ನೀಡುವದರಿಂದ ಕೈಗಾರಿಕೋದ್ಯಮಗಳಿಗೆ ಭಾರಿ ಅನುಕೂಲವಾಗಿದೆ.

ಆದ್ದರಿಂದ ಕೇಂದ್ರ ಸರ್ಕಾರ ಹಾಗೂ ವಿಶೇಷವಾಗಿ ಕೇಂದ್ರ ಹಣಕಾಸು ಸಚಿವೆ ಶ್ರೀಮತಿ ನಿರ್ಮಲಾ ಸೀತಾರಾಮನ ರವರಿಗೆ ಬೀದರ ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆ ಹರ್ಷ ವ್ಯಕ್ತಮಾಡಿ ಅಭಿನಂದನೆಗಳು ಸಲ್ಲಿಸಿದ್ದಾರೆ.

# ನವೀನ್ ಪಬ್ಲಿಕ್ ಶಾಲೆ: 7 ರಿಂದ ಆನಂದ ಅನುಭೂತಿ ಶಿಬಿರ





ಬೀದರ. ಸೆ. 04 : ಆರ್ಟ್ ಆಫ್ ಲಿವಿಂಗ್ ವತಿಯಿಂದ ಇಲ್ಲಿಯ ಕುಂಬಾರವಾಡ ರಸ್ತೆಯಲ್ಲಿ ಇರುವ ನವೀನ್ ಪಬ್ಲಿಕ್ ಶಾಲೆಯಲ್ಲಿ ಸೆ. 7 ರಿಂದ 12 ರ ವರೆಗೆ ಆನಂದ ಅನುಭೂತಿ ಶಿಬಿರ ಹಮ್ಮಿಕೊಳ್ಳಲಾಗಿದೆ.

ಶಿಬಿರವು ಪ್ರತಿ ದಿನ ಸಂಜೆ 6 ರಿಂದ 8 ರ ವರೆಗೆ ಜರುಗಲಿದೆ ಎಂದು ಆರ್ಟ್ ಆಫ್ ಲಿವಿಂಗ್ ಜಿಲ್ಲಾ ಅಭಿವೃದ್ಧಿ ಸಮಿತಿ ಸದಸ್ಯ ಕಾಮಶೆಟ್ಟಿ ಚಿಕ್ಕಬಸೆ ತಿಳಿಸಿದ್ದಾರೆ.

ಶಿಬಿರದಲ್ಲಿ ದೈಹಿಕ ಆರೋಗ್ಯ ಹಾಗೂ ಮನಃಶಾಂತಿಗೆ ನೆರವಾಗುವ ಸುದರ್ಶನ ಕ್ರಿಯೆಯನ್ನು ಕಲಿಸಿಕೊಡಲಾಗುವುದು ಎಂದು ಹೇಳಿದ್ದಾರೆ.

ಶಿಬಿರದ ಕುರಿತು ಹೆಚ್ಚಿನ ಮಾಹಿತಿ ಹಾಗೂ ಹೆಸರು ನೋಂದಣಿಗೆ ಮೊಬೈಲ್ ಸಂಖ್ಯೆ 7022513111 ಅಥವಾ 9740377911 ಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

# ಎಕರೆಗೆ ರೂ. 50 ಸಾವಿರ ಪರಿಹಾರ ಸರ್ಕಾರ ಒದಗಿಸಲಿ: ಎಂಟು ದಿನಗಳೊಳಗಾಗಿ ಪರಿಹಾರ ನೀಡದಿದ್ದರೆ ಡಿಸಿ ಕಚೇರಿಗೆ ಮುತ್ತಿಗೆ: ಈಶ್ವರಸಿಂಗ್ ಠಾಕೂರ್




ಬೀದರ. ಸೆ. 04 : ಎಂಟು ದಿನಗಳ ಒಳಗಾಗಿ ಬೀದರ ಉತ್ತರ ಕ್ಷೇತ್ರದ ವ್ಯಾಪ್ತಿಯ ಬೆಳೆಹಾನಿ ಕುರಿತು ಅಧಿಕಾರಿಗಳು ಇಂಚಿಂಚು ಬಿಡದೆ ಸರ್ವೆ ಮಾಡಿ ಎಕರೆಗೆ 50 ಸಾವಿರ ರೂಪಾಯಿ ಸರ್ಕಾರದಿಂದ ಪರಿಹಾರ ಕೊಡಿಸಬೇಕು. ಇಲ್ಲದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿಗೆ ರೈತರೊಂದಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ಮಾಡಲಾಗುವುದು ಎಂದು ಭಾರತೀಯ ಜನತಾ ಪಕ್ಷದ ವಿಭಾಗೀಯ ಸಹಪ್ರಭಾರಿ ಈಶ್ವರಸಿಂಗ್ ಠಾಕೂರ್ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಬೀದರ ತಾಲೂಕಿನ ಇಸ್ಲಾಂಪೂರ ಗ್ರಾಮ ಸಂಪೂರ್ಣ ಮುಳುಗಡೆಯಾಗಿದೆ. ಹೊಲಗಳು ರೈತರಿಗೆ ಗುರುತು ಹಚ್ಚದಷ್ಟು ಮುಳುಗಿವೆ. ಸಾಲಮಾಡಿ ಬಿತ್ತನೆ ಮಾಡಿದ್ದಾರೆ. ಈಗ ಮತ್ತೆ ಸಾಲ ಮಾಡಿ ಹಾಳಾದ ಬೆಳೆಯನ್ನು ಕೀಳುವ ಸ್ಥಿತಿ ರೈತರಿಗೆ ಬಂದಿದೆ. ಸಾಂಗ್ವಿ, ಬಂಪಳ್ಳಿ, ಜಾಂಪಾಡ್, ಚಿಮಕೋಡ, ನೆಮತಾಬಾದ ಹೀಗೆ ಹಲವು ಗ್ರಾಮಗಳಲ್ಲಿ ಬಹುತೇಕ ಬೆಳೆಗಳು ಹಾಳಾಗಿದ್ದು, ಪೌರಾಡಳಿತ ಸಚಿವರು ರಸ್ತೆ ಮೂಲಕವೇ ಕಣ್ಣಾಡಿಸಿ ಹೋಗಿದ್ದಾರೆ ಎಂದು ರೈತರು ನಮ್ಮ ಮುಂದೆ ನೋವು ತೋಡಿಕೊಂಡಿದ್ದಾರೆ ಎಂದು ತಿಳಿಸಿದರು. ಚಿಮಕೋಡ, ಅಲ್ಲಾಪುರ ಗ್ರಾಮದಲ್ಲಿ ನದಿಯ ಒತ್ತಡ ಹಾಗೂ ಹಳ್ಳ ಕೊಳ್ಳಗಳ ಅತಿಯಾದ ಹರಿಯುವಿಕೆಯಿಂದ ಜಮೀನು ಮುಳುಗಡೆಯಾಗಿವೆ. ಚಾಂಬಾಳ, ಹಿಪ್ಪಳಗಾಂವ ಮತ್ತು ಕನ್ನಳ್ಳಿ ಗ್ರಾಮಗಳಲ್ಲಿನ ಜಮೀನಿನಲ್ಲಿ ನೀರು ನಿಂತು ಬೆಳೆಗಳು ಕೊಳೆತು ಹೋಗಿವೆ. ಪೌರಾಡಳಿತ ಸಚಿವರು ದಿನಾಂಕ ನಿಗದಿಪಡಿಸಿದರೂ ಕೆಲವೊಂದು ಗ್ರಾಮಗಳಿಗೆ ಭೇಟಿಗೂ ಹೋಗಿಲ್ಲ. ಜಿಲ್ಲಾಡಳಿತದಿಂದಲೂ ರೈತರಿಗೆ ಯಾವುದೇ ಸಹಕಾರ ಸಿಕ್ಕಿಲ್ಲ ಎಂದು ಠಾಕೂರ್ ಆರೋಪಿಸಿದರು. ಕೆಲವೊಂದು ಗ್ರಾಮಗಳಲ್ಲಿ ಅಂಗನವಾಡಿ ಕೂಡಾ ಬಿದ್ದಿವೆ. ಅಧಿಕಾರಿಗಳಿಗೆ ಕೇಳಿದರೆ ರಿಪೇರಿಗಾಗಿ ಅನುದಾನ ಮೀಸಲಿಟ್ಟಿದ್ದೇವೆ ಎಂದು ಹೇಳುತ್ತಾರೆ. ಇಂದಿಗೂ ರಿಪೇರಿ ಆಗಿಲ್ಲ. ಇಂತಹ ಸಂದರ್ಭದಲ್ಲಿ ರೈತರಿಗೆ ನಾನು ಧೈರ್ಯ ಹೇಳಿ ಬಂದಿದ್ದೇನೆ. ಬೆಳೆಹಾನಿಯ ಸಮಗ್ರ ವರದಿಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಚಲುವನಾರಾಯಣಸ್ವಾಮಿ ಅವರಿಗೂ ಕಳುಹಿಸುತ್ತಿದ್ದೇವೆ. ಎಕರೆಗೆ ಬಿತ್ತನೆಗಾಗಿ ರೂ.25 ಸಾವಿರ ಅವರಿಗೆ ಖರ್ಚಾಗಿದೆ. ಇದೀಗ ಸರ್ಕಾರ ಎಕರೆಗೆ 50 ಸಾವಿರ ರೂಪಾಯಿ ಪರಿಹಾರ ಧನ ನೀಡಬೇಕು. ಜಿಲ್ಲಾ ಉಸ್ತುವಾರಿ ಸಚಿವರು ಈ ಕುರಿತು ವಿಚಾರಿಸಬೇಕು. ಎಂಟು ದಿನಗಳ ಒಳಗಾಗಿ ಪರಿಹಾರ ನೀಡದಿದ್ದರೆ ಡಿಸಿ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಠಾಕೂರ್ ತಿಳಿಸಿದರು. ಮಾಜಿ ಬುಡಾ ಅಧ್ಯಕ್ಷ ಬಾಬು ವಾಲಿ ಮಾತನಾಡಿ

ವಿವಿಧ ವಸ್ತುಗಳ ಮೇಲಿನ ಜಿಎಸ್‌ಟಿ ತೆರಿಗೆ ಕಡಿಮೆ ಮಾಡಿದ ಕೇಂದ್ರ ಸರ್ಕಾರದ

ನಡೆಯನ್ನು ನಾವು ಸ್ವಾಗತ ಮಾಡುತ್ತೇವೆ. ಇದು ಬಡವರಿಗೆ ಹಾಗೂ ಮಧ್ಯಮ ವರ್ಗದವರಿಗೆ ದಸರಾ ಕೊಡುಗೆ ಎಂದು ಹೇಳಬಹುದು. ಅವರಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದು ತಿಳಿಸಿದರು. ಪ್ರಮುಖರಾದ ದೀಪಕ ಗಾದಗೆ ಮಾತನಾಡಿದರು. ಪತ್ರಿಕಾಗೋಷ್ಠಿಯಲ್ಲಿ ಪಕ್ಷದ

ನಗರಾಧ್ಯಕ್ಷ ಶಶಿ ಹೊಸಳ್ಳಿ, ಪ್ರಮುಖರಾದ ರಾಜೇಂದ್ರ ಪೂಜಾರಿ, ನಿಜಲಿಂಗಪ್ಪ, ನಾಗೇಂದ್ರ ಪಾಟೀಲ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಜಿ.ಎಸ್.ಟಿ ಇಳಿಕೆ ಐತಿಹಾಸಿಕ ನಿರ್ಣಯ : ಭಗವಂತ ಖೂಬಾ



ಬೀದರ:ಸೆ.4:ಕೇಂದ್ರ ಸರ್ಕಾರವು ದೇಶದ ಎಲ್ಲಾ ವರ್ಗದ ಜನರ, ಉದ್ಯಮಿದಾರರಿಗೆ, ವ್ಯಾಪಾರಿಗಳ ಅನುಕೂಲಕ್ಕಾಗಿ, ವಿಶೇಷವಾಗಿ ಮಧ್ಯಮ ಮತ್ತು ಬಡವರ ಆದಾಯ ಮಿತಿಗೆ ಹೊಂದಿಸುವಂತೆ ಮುಂದಿನ ಪೀಳಿಗೆಯ ಜಿ.ಎಸ್.ಟಿ. ಸುಧಾರಣೆಯ ಮಹತ್ತರ ನಿರ್ಣಯ ಕೈಗೊಂಡಿರುವುದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಸ್ವಾಗತಿಸಿದ್ದಾರೆ.

ದಿನನಿತ್ಯ ಉಪಯೋಗಿ ವಸ್ತುಗಳು, ಹಾಲಿನ ಉತ್ಪನ್ನಗಳು, ಅರೋಗ್ಯ, ಲೈಫ್ ಇನ್ಸುರೇನ್ಸ್ ನಂತಹ ಬಹು ಅವಶ್ಯಕತೆಗಳ ಮೇಲಿನ ಜಿ.ಎಸ್.ಟಿ ಸಂಪೂರ್ಣ ತೆಗೆದಿರವುದು ಜೊತೆಗೆ ಉಳಿದ ಎಲ್ಲಾ ವಸ್ತುಗಳ ಮೇಲೆಯೂ ಹೆಚ್ಚು ಕಡಿಮೆ 50 ರಿಂದ 60% ಜಿ.ಎಸ್.ಟಿ ಇಳಿಕೆ ಮಾಡಿರುವುದರಿಂದ ವಸ್ತುಗಳ ಬೆಲೆ ಕಡಿಮೆ ಆಗಲಿದೆ, ಜನರು ಇನ್ನಷ್ಟು ಸಂತೋಷದಿಂದ ಜೀವನ ನಡೆಸಲು ಅನುಕೂಲವಾಗಲಿದೆ, ಮೋದಿಜೀಯವರ ನೇತೃತ್ವದ ಮೇಲೆ ವಿಶ್ವಾಸವಿಟ್ಟು 3ನೇ ಬಾರಿಗೆ ಪ್ರಧಾನಮಂತ್ರಿಯಾಗಿ ಮಾಡಿದ ದೇಶದ ಎಲ್ಲಾ ಜನತೆಗೆ ಇದೊಂದು ಅತ್ಯಂತ ಸಂತಸದ ಸುದ್ದಿಯಾಗಿದೆ ಎಂದು ಖೂಬಾ ಬಣ್ಣಿಸಿದ್ದಾರೆ.

ಈ ನಿರ್ಧಾರದಿಂದ ಕಾಂಗ್ರೇಸ್ ಜೊತೆ ನಿಂತವರಿಗೆ ಅತಿಯಾದ ಹೊಟ್ಟೆನೋವು ಬಂದಿದೆ, ಹಾಗಾಗಿ ಎಲ್ಲರೂ ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಪ್ರಾರಂಭಿಸಿದ್ದಾರೆ, ನೂರಾರು ಕೋಟಿ ವೆಚ್ಚ ಮಾಡಿ ಹೇಲಿಕಾಪ್ಟರ್‌ಗಳಲ್ಲಿ ಓಡಾಡಲು ನಿರ್ಧರಿಸುವ ರಾಜ್ಯ ಸರ್ಕಾರಕ್ಕೆ, ರಾಜ್ಯದಲ್ಲಿ ಅತಿವೃಷ್ಟಿಯಿಂದ ಸಂಕಷ್ಟದಲ್ಲಿರುವ ಕೊಟ್ಯಾಂತರ ಜನರಿಗೆ ಪರಿಹಾರ ಕೊಡುವ ಚಿಂತೆಯಿಲ್ಲಾ ಎಂದು ಕೀಡಿ–ಕಾರಿದ್ದಾರೆ, ರೈತರಿಗೆ ಪರಿಹಾರ ಕೊಡಿಸುವಲ್ಲಿ ದಿವಾಳಿಯಾಗಿರುವ ಸಿದ್ದರಾಮಯ್ಯನವರ ಸರ್ಕಾರದ ಮೇಲೆ ಕಾಂಗ್ರೇಸ್ ಶಾಸಕರುಗಳು, ಸಂಸದರುಗಳು ಯಾಕೆ ಒತ್ತಡ ಹಾಕ್ತಾಯಿಲ್ಲಾ, ಸಿದ್ದರಾಮಯ್ಯನವರಿಗೆ ಕೇಳಲು ನಾಚಿಕೆಯಾಗುತ್ತಿರುಬಹುದು ಎಂದು ಖೂಬಾ ಹರಿಹಾಯ್ದಿದ್ದಾರೆ.

ಅಮೇರಿಕಾದಂತಹ ದೇಶಗಳು ಆರ್ಥಿಕವಾಗಿ ನಲುಗಿಹೊಗಿವೆ, ಬೇರೆ ದೇಶಗಳ ವಸ್ತುಗಳ ಮೇಲೆ ಟ್ಯಾರೀಫ್ ಹೆಚ್ಚಿಸಿವೆ ಆದರೆ ಭಾರತದ ಅರ್ಥವ್ಯವಸ್ಥೆ ಸಧೃಡವಾಗಿದೆ ಎಂಬುದಕ್ಕೆ ಈ ನಿರ್ಣಯ ಉದಾಹರಣೆಯಾಗಿದೆ, ದೇಶದ ಅರ್ಥವ್ಯವಸ್ಥೆ ಬಗ್ಗೆ ಸುಳ್ಳು ಹೇಳಿಕೆಗಳು ನೀಡುತ್ತಿದ್ದ ಕಾಂಗ್ರೇಸ್‌ನ ನಾಯಕರುಗಳಿಗೆ ಮುಖಭಂಗವಾಗಿದೆ ಎಂದಿದ್ದಾರೆ. ಮಹತ್ವದ ನಿರ್ಣಯ ಕೈಗೊಂಡಿರುವ ದೇಶದ ಪ್ರಧಾನಮಂತ್ರಿಗಳಾದ ಸನ್ಮಾನ್ಯ ಶ್ರೀ ನರೇಂದ್ರ ಮೋದಿಜೀಯವರಿಗೆ, ಕೇಂದ್ರ ಹಣಕಾಸು ಸಚಿವೆ ಸನ್ಮಾನ್ಯ ಶ್ರೀಮತಿ. ನಿರ್ಮಲಾ ಸೀತಾರಾಮನ್ ಅವರಿಗೆ ಮತ್ತು ಎಲ್ಲಾ ಜಿ.ಎಸ್.ಟಿ. ಮಂಡಳಿಯ ಸದಸ್ಯರಿಗೆ ಭಗವಂತ ಖೂಬಾ ಜನತೆಯ ಪರವಾಗಿ ಧನ್ಯವಾದಗಳು ತಿಳಿಸಿದ್ದಾರೆ.

# ಸದಾ ಬೆಳಗುವ ನಂದಾದೀಪ ಜ್ಞಾನಜ್ಯೋತಿಯೇ ಮಾದರಿ ಶಿಕ್ಷಕರು

ಭೂಮಿ ಮೇಲೆ ವಿಶೇಷ ಆದರ್ಶ ಮಾದರಿ ಶಿಕ್ಷಕರನ್ನು ಸಾವಿಲ್ಲದ ಶಿಕ್ಷಕರೆಂದು ತಾನು ಕಲಿತ ವಿದ್ಯೆ ಮಕ್ಕಳಿಗೆ ಧಾರೆ ಎರೆದು ಮಕ್ಕಳನ್ನು ಸರಿ ದಾರಿಗೆ ತಂದು ಸನ್ಮಾರ್ಗ ದೆಡೆಗೆ ಹೊಯ್ಯುವ ಆದರ್ಶ ಶಿಕ್ಷಕನೇ ಶಾಶ್ವತವಾಗಿ ಮಕ್ಕಳ ಮನಸ್ಸಿನಲ್ಲಿ ಬೇರೂರಿ ಶಿಕ್ಷಕರ ವೃತ್ತಿಗೆ ಗೌರವ ತರುವವರನ್ನು ನಿಜವಾದ ಮಾದರಿ ಶಿಕ್ಷಕನೆಂದು ನಂಬಲಾಗುತ್ತದೆ.

ತಮ್ಮಲ್ಲಿರುವ ವಿದ್ಯೆಜ್ಞಾನ ವಿದ್ಯಾರ್ಥಿಗೆ ಕಲಿಸಿ ತನ್ನ ಆತ್ಮದಲ್ಲಿರುವ ದೀಪದ ಜ್ಯೋತಿಯನ್ನು ವಿದ್ಯಾರ್ಥಿಗಳ ತಲೆಯಲ್ಲಿ ಬೆಳಗುವಂತೆ ಮಾಡುವ ವಿಶೇಷ ಆದರ್ಶ ಶಿಕ್ಷಕರು ಸತ್ತರು ಸಾವಿಲ್ಲದಂತೆ ಬದುಕುವ ನಿರಂತರ ಜ್ಯೋತಿಯು ವಿದ್ಯಾರ್ಥಿಗಳ ಮೂಲಕ ಸಮಾಜದಲ್ಲಿ ಬೆಳಗುವದರಿಂದ ಆದರ್ಶ ಶಿಕ್ಷಕರನ್ನು ಸಾವಿಲ್ಲದೆ ಬದುಕುವ ಅಮರಜ್ಯೋತಿ ಎಂದು ನಂಬಲಾಗುತ್ತದೆ.

ಮನುಷ್ಯನ ಮನಸ್ಸು ಮಂಗ ಹುಚ್ಚುಕೋಡಿ ಅದರಲ್ಲೂ ಇಳಿ ವಯಸ್ಸಿನಲ್ಲಿ ಇರುವ ಚಿಕ್ಕ ಮಕ್ಕಳ ಮಂಗನಬುದ್ಧಿಯಿಂದ ಮಾನವರನ್ನಾಗಿ ಪರಿವರ್ತಿಸುವ ದೈವವೇ ಮಾದರಿ ಶಿಕ್ಷಕರು.

ಭವಿಷ್ಯದಲ್ಲಿ

ಒಬ್ಬ ಒಳ್ಳೆಯ ಡಾಕ್ಟರ್ ಸಿಗಬಹುದು ಒಬ್ಬ ಉತ್ತಮ ಇಂಜಿನಿಯರ್ ಸಿಗಬಹುದು ಆದರೆ ಒಬ್ಬ ಒಳ್ಳೆಯ ಉತ್ತಮ ಶಿಕ್ಷಕ ಸಿಗುವುದು ಕಷ್ಟ ಎನ್ನುವ ಕಾಲದಲ್ಲಿ ನಾವಿದ್ದೇವೆ. ಶಿಕ್ಷಕರಾದವರು ಸರಿಯಾಗಿ ಕರ್ತವ್ಯ ನಿರ್ವಹಿಸದೆ ಇದ್ದರೆ ಇಡೀ ಸಮಾಜವೇ ಅಗೌರವದ ದಾರಿ ಹಿಡಿಯುತ್ತದೆ ಹಾಗಾಗಿ ಶಿಕ್ಷಕರನ್ನು ನಾವೆಲ್ಲರೂ ದೇವತಾ ಮನುಷ್ಯ ಎಂದು ಭಾವಿಸುವ ದಿನವನ್ನೇ ನಾವು ಶಿಕ್ಷಕರ ದಿನಚರಣೆಯನ್ನಾಗಿ ಆಚರಣೆ ಮಾಡುತ್ತೇವೆ. ಮಹಾನ್ ವ್ಯಕ್ತಿತ್ವ ಹೊಂದಿದ್ದ ಡಾ// ಸರ್ವೇಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನಾಚರಣೆಯ ಪ್ರಯುಕ್ತ ಆಚರಣೆ ಮಾಡುವ ಶಿಕ್ಷಕ ದಿನಾಚರಣೆ ಶಿಕ್ಷಕರ ಸ್ಮರಣೆಗಾಗಿ ಆಚರಿಸುವ ಈ ಹಬ್ಬ ವಿದ್ಯಾರ್ಥಿಗಳ ಪಾಲಿನ ದೀಪಾವಳಿ,ಯುಗಾದಿ ಯಷ್ಟೇ ಮಹತ್ವ ಪಡೆಯುತ್ತದೆ.

""ಕಲಿಸು ಗುರುವೇ ಕಲಿಸು,
ಕಲಿಸು ಸದ್ಗುರುವೇ ನೀ ಕಲಿಸು,
ಸುಳ್ಳಿನ ನಡುವೆ ಸತ್ಯ ನಾಡುವದು ಕಲಿಸು,
ಸ್ವಾರ್ಥದನಡುವೆನಿಸ್ವಾರ್ಥಿಯಾಗುವುದು ಕಲಿಸು,
ಅಂಜಿ ನಡೆಯುವರ ಮುಂದೆ ಧೀರನಾಗಲು ಕಲಿಸು,
ಧರೆಯ ಕೃಷ್ಣನ ನಡುವೆ ಜಾಣನಾಗಲು ಕಲಿಸು""

ಎಂಬ ಗೀತೆಗೆ ತಕ್ಕಂತೆ ಇವತ್ತಿನ ಶಿಕ್ಷಕರು ಮಕ್ಕಳಿಗೆ ಸರಿಯಾಗಿ ವಿದ್ಯೆ ಧಾರೆ ಎರಿದರೆ ಈ ಗೀತೆಯಲ್ಲಿ ಸಿಗುವ ಮಹತ್ವ ಮಾದರಿ ಆದರ್ಶ ಶಿಕ್ಷಕನಿಗೂ ಸಿಗುತ್ತದೆ

ಈ ಗೀತೆಯ ಅರ್ಥದಲ್ಲಿ ಇರುವಂತೆ ನಿಜವಾದ ಶಿಕ್ಷಕ ಶಿಕ್ಷಣವನ್ನು ಮಕ್ಕಳಿಗೆ ಧಾರೆ ಎರೆದರೆ ಶಿಕ್ಷಕನ ಜೀವನ ಸಾರ್ಥಕವಾಗುತ್ತದೆ ಮಕ್ಕಳ ಭವಿಷ್ಯದ ಬದುಕು ಬಂಗಾರವಾಗುತ್ತದೆ.

ಮಕ್ಕಳಿಗೆ ತಾಯಿ ಮಾತನಾಡುವುದನ್ನು ಕಲಿಸಿದರೆ ಶಿಕ್ಷಕ ಸಮಾಜದಲ್ಲಿ ಬಾಳಿ ಬದುಕುವುದನ್ನು ಕಲಿಸುವ ಅದ್ಭುತ ಗುರು ಎಂದು ನಂಬಲಾಗಿದೆ ಇವತ್ತಿನ ಆಧುನಿಕ ಜಗತ್ತಿನಲ್ಲಿ ಶಿಕ್ಷಕ ವೃತ್ತಿ ನಿರ್ವಹಿಸುವರು ಪುಣ್ಯವಂತರು ಎಂದು ನಂಬಿರುವ ಸಮಾಜದಲ್ಲಿ ಕೆಲವು ಶಿಕ್ಷಕರು ಮಕ್ಕಳ ಭವಿಷ್ಯ ಲೆಕ್ಕಿಸದೆ ಕೆಲವು ಶಿಕ್ಷಕರು ಮಕ್ಕಳಿಗೆ

ಆದರ್ಶ ಮಾದರಿಯಾಗಿ ಇರದೆ ವಿದ್ಯಾರ್ಥಿಗಳಿಗೆ ದುರ್ನಡತೆ ದಾರಿ ತಪ್ಪಿಸಿ ಬಾಳ ಬಂಡಿಯ ಪಯಣವನ್ನು ಕೆಟ್ಟ ದಾರಿಗೆ ಸಾಗಿಸುವ ಕೆಲವು ಶಿಕ್ಷಕರು ಉದಾಹರಣೆಗಳವುಂಟು ಇಂಥ ದುರ್ನಡತೆಯ ಶಿಕ್ಷಕರಿಗೆ ವಿದ್ಯಾರ್ಥಿಗಳಾಗಲಿ ಪೋಷಕರಾಗಲಿ ಗೌರವ ಕೊಡುವುದಿಲ್ಲ ತಮಗೆ ಒದಗಿ ಬಂದ ದೇವರ ಪಟ್ಟವನ್ನು ಧಿಕ್ಕರಿಸಿ ವೃತ್ತಿಯನ್ನು ಸರಿಯಾಗಿ ನಿಭಾಯಿಸದೆ ತಮ್ಮ ಗೌರವವನ್ನು ಕಳೆದುಕೊಳ್ಳು ಕಳೆದುಕೊಂಡವರು ಸಾಕಷ್ಟು ಶಿಕ್ಷಕರಿದ್ದಾರೆ.

ವಿದ್ಯಾರ್ಥಿಗಳ ಪಾಲಿಗೆ ಸಾಕಷ್ಟು ಆದರ್ಶ ಉತ್ತಮ ಮಾದರಿ ಶಿಕ್ಷಕರು ಇರುವುದರಿಂದ ಮಕ್ಕಳ ನೆಚ್ಚಿನ ಆದರ್ಶ ಶಿಕ್ಷಕರಾಗಿ ಹೆಚ್ಚು ಆಕರ್ಷಿತರಾಗಿ ಉತ್ತಮ ಬದುಕಿನ ಮಾರ್ಗದಡೆಗೆ ಹೊಯ್ಯುವ ಸನ್ಮಾರ್ಗದ ಕಡೆಗೆ ಕೊಂಡಯುವ ಶಿಕ್ಷಕರ ಸಂಖ್ಯೆ ಹೆಚ್ಚಿರುವುದರಿಂದ ಇವತ್ತು ನಮ್ಮ ಭಾರತ ದೇಶ ಉತ್ತುಂಗಕ್ಕೆ ಏರುತ್ತಿದೆ.

ಶಿಕ್ಷಕರಾದವರು ಒಬ್ಬ ತಾಯಿ ತಾನು ಜನ್ಮ ನೀಡಿದ ನಂತರ ಅರಿವಿಲ್ಲದ ಮಗುವಿಗೆ ಒಂದು ಮೊಲೆಯ ಹಾಲು ಉಣಿಸುವಾಗ ಅದೇ ಮಗು ಇನ್ನೊಂದು ಮೊಲೆಗೆ



ಪೆಕ ಪೆಕ್ಕನೆ ಹೊದ್ದರೂ ನೋವನ್ನು ಸಹಿಸಿಕೊಂಡು ಅರವಿಲ್ಲದ ಮಗುವಿಗೆ ಹೇಗೆ ಸನ್ಮಾರ್ಗದಡೆಗೆ ತರುತ್ತಾಳೆ ಅದೇ ರೀತಿ ಶಿಕ್ಷಣವೆಂಬ ಕಲಿಯುವ ಹಂತಕ್ಕೆ ಬಂದ ಮಗುವನ್ನು ಉತ್ತಮ ದಾರಿ ಹಿಡಿಸಿ ಸಮಾಜದಲ್ಲಿ ಗೌರವಯುತವಾಗಿ ಬಾಳುವಂತೆ ಜೀವನದ ಪಾಠ ಹೇಳಿಕೊಡುವವರೇ ನಿಜವಾದ ಮಾದರಿ ಶಿಕ್ಷಕರು.

ಶಿಕ್ಷಕನಾದವನು ವಿದ್ಯಾರ್ಥಿಗಳನ್ನು ತನ್ನತ್ತ ಗುರುತ್ವಾಕ್ಷಣೆ ಮಾಡುವ ಶಕ್ತಿ ಯಾರು ಹೊಂದಿರುತ್ತಾರೆಯೋ ಅಂತವರನ್ನು ಆದರ್ಶ ಶಿಕ್ಷಕರೆಂದು ನಾವು ಪರಿಗಣಿಸುತ್ತೇವೆ.

ರೈತ ಹೊಲ ಉಳುಮೆ ಮಾಡುವಾಗ ತಾನು ಸಾಕಿದ ಎತ್ತು ರಂಟೆ ಕುಂಟೆ ಹೊಡೆಯುವಾಗ ಸಾಲು ತಪ್ಪಿ ಎತ್ತು ನಡೆದರೆ ಹೇಗೆ ಮೂಗುದಾರ ಹಾಕಿ ವ್ಯಕ್ತಿಗೆ ಸಾಲನ್ನು ಹಿಡಿಸಿ ಸರಿಯಾಗಿ ಸಾಗುವಂತೆ ಮಾಡುತ್ತಾನೆಯೋ ಮತ್ತು ಅರಿವಿಲ್ಲದ ಪುಟ್ಟ ಮಗು ಸುಮಾರು ಮೂರು ನಾಲ್ಕು ತಾಸು ತಾಯಿ ಯಿಂದ ದೂರಾದಾಗ ತಾಯಿ ಕಂಡ ತಕ್ಷಣ ಅಂಬೆಗಾಲಿನಿಂದ ಹೇಗೆ ಓಡೋಡಿ ಬಂದು ತಾಯಿಯನ್ನು ಅಪ್ಪಿಕೊಳ್ಳುತ್ತದೆಯೋ ಅದೇ ರೀತಿ ಉತ್ತಮ ಶಿಕ್ಷಕನಾದವ ವಿದ್ಯೆ ಜ್ಞಾನ ನೀಡುವ ಗುರು ಬಂದನೆಂದು ವಿದ್ಯಾರ್ಥಿಗಳನ್ನು ತನ್ನತ್ತ ಓಡೋಡಿ ಬರುವಂತಹ ಗುರುತ್ವಾಕ್ಷಣೆ ಶಕ್ತಿ ಹೊಂದಿರುವವನೇ ಮಾದರಿ ಆದರ್ಶ ಶಿಕ್ಷಕನೆಂದು ಸಮಾಜ ಭಾವಿಸುತ್ತದೆ.

ಈ ಜಗತ್ತಿನಲ್ಲಿ ಭೂಮಿ ಮೇಲೆ ಜನಿಸಿದ ಪ್ರತಿಯೊಬ್ಬರಿಗೂ ಗುರು ಇಲ್ಲದೆ ಬದುಕಲು ಯಾರಿಗೂ ಸಾಧ್ಯವಿಲ್ಲ ಆದರೆ ಗುರು ಆದವನು ಒಳ್ಳೆಯ ಸನ್ಮಾರ್ಗ ತೋರಿಸಿದರೆ ಶಿಷ್ಯನ ಬದುಕು ಬಂಗಾರವಾಗುತ್ತದೆ ಶಿಕ್ಷಕ ಕೆಟ್ಟ ಮಾರ್ಗ ತೋರಿಸಿದರೆ ವಿದ್ಯಾರ್ಥಿಯ ಬದುಕು ಪಾಳು ಬಿದ್ದ ಭಾವಿ ಎಂತಾಗುತ್ತದೆ.

ಹಾಗಾಗಿ ನಮ್ಮ ದೇಶದಲ್ಲಿ ಶಿಕ್ಷಕರಿಗೆ ಸಿಗುವ ಗೌರವ ಮಹತ್ವ ಬೇರೆ ಯಾರಿಗೂ ಸಿಗುವುದಿಲ್ಲ ಎನ್ನುವುದು ಸಾಬೀತಾಗಿದೆ.

ಡಾ//ಸರ್ವೆಪಲ್ಲಿ ರಾಧಾಕೃಷ್ಣನ್ ಅವರು ಜನ್ಮದಿನಾಚರಣೆ ಅಂಗವಾಗಿ ಆಚರಿಸುವ ಶಿಕ್ಷಕರ ದಿನಾಚರಣೆ ವಿದ್ಯಾರ್ಥಿಗೆ ಗುರುವನ್ನು ನಮಿಸುವ ಉತ್ತಮ ಅವಕಾಶ ಎಂದು ಭಾವಿಸಿರುವ ಅದೆಷ್ಟೋ ವಿದ್ಯಾರ್ಥಿಗಳು ನಿಜವಾದ ಶಿಷ್ಯನಾದವನು ಗುರುವನ್ನು ವಿನಮ್ರತೆಯಿಂದ ನಮಿಸುವ ಒಂದು ಸುದಿನ ಅಂತ ಭಾವಿಸಿದ್ದಾರೆ.

ನಮ್ಮ ದೇಶದಲ್ಲಿ ಗುರುವಿಗೆ ಸಿಗುವ ಗೌರವ ದೊಡ್ಡದು ನಾವು ಬರಿ ದೇವರಿಗಾಗಿ ದೇವಸ್ಥಾನಗಳನ್ನು ಕಟ್ಟಿದ್ದು ನೋಡಿದ್ದೇವೆ ಉತ್ತಮ ಆದರ್ಶ ಮಾದರಿ ಶಿಕ್ಷಕರಾಗಿರುವ ಅನೇಕ ವಿದ್ಯಾರ್ಥಿಗಳನ್ನು ಬದುಕಿನ ದಾರಿ ತೋರಿಸಿಕೊಟ್ಟು ಸಮಾಜದಲ್ಲಿ ಗೌರವಹಿತವಾಗಿ ಬಾಳುವ ಅರಿವು ಮೂಡಿಸಿದ ಗುರುವಿಗಾಗಿ ನಿಷ್ಠೆ ಪ್ರಾಮಾಣಿಕತೆ ಮಾದರಿ ಆದರ್ಶ ಶಿಕ್ಷಕನ ಸೇವೆಗಾಗಿ ಶಿಕ್ಷಕರು ಕಾಲವಾದ ನಂತರ ಗುಡಿಗಳನ್ನ ಕಟ್ಟಿದ ಉದಾಹರಣೆಗಳು ಉಂಟು. ದೇವರಿಗಾಗಿ ಬಿಟ್ಟರೆ ದೇವಸ್ಥಾನವನ್ನು ಕಟ್ಟಿರುವುದು ಶಿಕ್ಷಕರಿಗೆ ಮಾತ್ರ ಏಕೆ-ಂದರೆ ತಂದೆ ತಾಯಿಗೂ ಸಿಗದ ಗೌರವ ಶಿಕ್ಷಕನಿಗೆ ಸಿಗುತ್ತದೆ ಎಂದು ಈ ಉದಾಹರಣೆಯ ಮೂಲಕ ನಮ್ಮೆಲ್ಲರಿಗೂ ಗೋಚರವಾಗುವುದು ಬರಿ ದೇವಸ್ಥಾನ ಕಟ್ಟುವುದು ಅಷ್ಟೇ ಅಲ್ಲ ವರ್ಷಕ್ಕೊಮ್ಮೆ ಅವರ ಜನ್ಮದಿನದಂದು ಜಾತ್ರೆ ಮಾಡುವುದು ದೇವರು ಎಳೆಯುವುದು ಈ ರೀತಿಯ ದೈವಿ ಸ್ವರೂಪರಾಗಿ ಶಿಕ್ಷಕರನ್ನು ಕಾಣುವ ವಿದ್ಯಾರ್ಥಿಗಳು ಸಾಕಷ್ಟು ಜನ ಇದ್ದಾರೆ.

ತಂದೆ ತಾಯಿಗಳು ಮಗುವನ್ನು ಊಟ ಹಾಕಿ ಸಾಕಿದರೆ ಆದರ್ಶ ಶಿಕ್ಷಕರಾದವರು ಮಕ್ಕಳ ಬದುಕನ್ನೇ ಸಾಗಿಸುವ ಸಾಧಕರು ಒಬ್ಬ ಉತ್ತಮ ಶಿಕ್ಷಕ ತನ್ನ ವಿದ್ಯಾರ್ಥಿಯನ್ನು ಯಾವ ರೀತಿ ಒಳ್ಳೆಯ ವಿಚಾರ ಆಚಾರ್ಯಗಳನ್ನು ಮನಸ್ಸಿನಲ್ಲಿ ತುಂಬಿ ಆತನಿಗೆ ಉತ್ತಮ ಮಾರ್ಗದರ್ಶನ ಮಾಡಿ ವಿದ್ಯಾರ್ಥಿಯ ಬದುಕಲ್ಲಿ ದೈವ ಶಕ್ತಿ ತುಂಬಿ ಸರಸ್ವತಿ ಒಲಿಯುವಂತೆ ಪ್ರೇರೇಪಿಸಿ ಉತ್ತಮ ಸಾಧಕನನ್ನಾಗಿ ಮಾಡುವುದೇ ನಿಜವಾದ ಆದರ್ಶ ಮಾದರಿ ಶಿಕ್ಷಕನ ಧರ್ಮ ಯಾವ ಶಿಕ್ಷಕರು ಧರ್ಮದ ಪ್ರಕಾರ ವಿದ್ಯಾರ್ಥಿಗಳನ್ನು ಉತ್ತಮ ಮಾರ್ಗದರ್ಶನ ಮಾಡಿ ವಿದ್ಯಾರ್ಥಿಗಳ ಬಾಳಿನ ಬದುಕಿಗೆ ದೀಪ ಹಚ್ಚಿ ಸದಾ ಬೆಳಗಿಸುವ ಶಕ್ತಿ ಇರುವುದು ಆದರ್ಶ ಶಿಕ್ಷಕರಿಗೆ ಮಾತ್ರ.

""ಕುದುರೆ ಎಷ್ಟೇ ಚೆನ್ನಾಗಿ ಗಾಡಿ ಎಳೆದರು ಚಾಟಿ ಏಟು ತಪ್ಪಿದ್ದಲ್ಲ,
ಮರ ಎಷ್ಟೇ ರುಚಿಕರ ಹಣ್ಣು ಕೊಟ್ಟರು ಕಲ್ಲು ಏಟು ತಪ್ಪಿದ್ದಲ್ಲ,
ಒಬ್ಬ ಆದರ್ಶ ಶಿಕ್ಷಕ ವಿದ್ಯಾರ್ಥಿಗಳಿಗೆ ಎಷ್ಟೇ ಚೆನ್ನಾಗಿ ಕಲಿಸಿದರು ಕೆಲವರ ನಿಂದನೆ ತಪ್ಪಿದ್ದಲ್ಲ""

ಇವೆಲ್ಲವುಗಳನ್ನು ಮೆಟ್ಟಿನಿಂತು ತನ್ನ ವಿದ್ಯಾರ್ಥಿಯ ಭವಿಷ್ಯದ ಬದುಕಿಗಾಗಿ ತನ್ನ ಜೀವನ ಸವಿಸಿಕೊಳ್ಳುವ ಏಕೈಕ ಜೀವಿ ಎಂದರೆ ಒಬ್ಬ ಉತ್ತಮ ಆದರ್ಶ ಮಾದರಿ ಶಿಕ್ಷಕ ಮಾತ್ರ.

ಒಬ್ಬ ಆದರ್ಶ ಶಿಕ್ಷಕನಾದವನು ತನ್ನ ವಿದ್ಯಾರ್ಥಿಗಳನ್ನು ಸಮಾಜದಲ್ಲಿ ಆದರ್ಶವಾಗಿ ಬಾಳುವಂತೆ ಪ್ರೇ-ರೇಪಿಸಿ ಸಲಹೆ ಸೂಚನೆಗಳನ್ನು ನೀಡಿ ಮಾರ್ಗದರ್ಶನ ಕೊಟ್ಟು ಉತ್ತಮ ಸಮಾಜ ನಿರ್ಮಿಸಲು



ಉತ್ತಮ ವಿದ್ಯಾರ್ಥಿ ಕಾರ್ಖಾನೆ ಸ್ಥಾಪಿಸಿ ಸಮಾಜಕ್ಕೆ ಅರ್ಪಿಸುವವನೇ ನಿಜವಾದ ಆದರ್ಶ ಮಾದರಿ ಉತ್ತಮ ಗುರುವನ್ನು ಶಿಕ್ಷಕನೆಂದು ಬಾವಿಸುವವರು.

ಶಿಕ್ಷಕರ ವೃತ್ತಿ ಎಂಬುದು ಹೂವಿನ ಬಳ್ಳಿ ಇದ್ದಂತೆ ಬಳ್ಳಿ ಇದ್ದಲ್ಲೇ ಇರುತ್ತದೆ ಶಿಕ್ಷಕರಿಂದ ವಿದ್ಯೆ ಎಂಬ ಜ್ಞಾನ ಪಡೆದ ವಿದ್ಯಾರ್ಥಿಗಳು ಹೂವಿನ ತರ ನಾಡಿನ ತುಂಬೆಲ್ಲ ಸಾಧನೆಯ ಶಿಖರವನ್ನೇರಿ ಉತ್ತಮ ಪ್ರತಿಭೆಗಳಾಗಿ ಹೊರಹೊಮ್ಮುತ್ತಾರೆ. ಆದರೆ ಬಳ್ಳಿ ಎಂಬ ಶಿಕ್ಷಕ ಇದ್ದಲ್ಲೇ ಇದ್ದರೂ ನನ್ನಿಂದ ಜ್ಞಾನಾರ್ಜನೆ ಪಡೆದ ವಿದ್ಯಾರ್ಥಿಗಳು ವಿವಿಧ ಕ್ಷೇತ್ರದಲ್ಲಿನ ಸಾಧನೆ ಕಂಡು ಖುಷಿ ಪಡುವವರೇ ಆದರ್ಶ ಶಿಕ್ಷಕರಾಗುತ್ತಾರೆ.

ಶಾಲೆಗೆ ಸುಣ್ಣ-ಬಣ್ಣ ಬಳೆದು ಶಾಲೆಯನ್ನು ಅಂದವಾಗಿಸಿ ಆದರ್ಶ ಶಿಕ್ಷಕನಾಗುವುದೇ ಬೇರೆ ವಿದ್ಯಾರ್ಥಿಗಳ ಜೀವನ ಎಂಬ ಬದುಕಿಗೆ ಅರ್ಥ ಕಲ್ಪಿಸಿ ತನ್ನ ವಿದ್ಯಾರ್ಥಿಯನ್ನು ದೊಡ್ಡ ಸಾಧಕನನ್ನಾಗಿ ಮಾಡುವುದೇ ನಿಜವಾದ ಆದರ್ಶ ಶಿಕ್ಷಕನ ಕರ್ತವ್ಯವಾಗಿರುತ್ತದೆ ಶಾಲೆಗೆ ಎಷ್ಟೇ ಬಣ್ಣ-ಸುಣ್ಣ ಬಳಿದರು ಅದು ಕೆಲವು ದಿನಗಳ ನಂತರ ಅಳಿಸಿ ಹೋಗುತ್ತದೆ ಆದರೆ ವಿದ್ಯಾರ್ಥಿಯೆಂಬ ಜೀವನದ ಬದುಕಿಗೆ ಹಚ್ಚುವ ಸುಣ್ಣ-ಬಣ್ಣ ಆತನ ಬಾಳ ಬದುಕಿನ ಸಾಧನೆಗೆ ಕೀರ್ತಿ ಉನ್ನತ ಮಟ್ಟಕ್ಕೆ ಒಯ್ಯುವಂತೆ ಮಾಡುವುದೇ ಒಬ್ಬ ಉತ್ತಮ ಶಿಷ್ಯನನ್ನು ಸಮಾಜಕ್ಕೆ ನೀಡುವವನೇ ನಿಜವಾದ ಆದರ್ಶ ಶಿಕ್ಷಕನ ಎಂದೆನಿಸಿಕೊಳ್ಳುತ್ತಾನೆ.

ಶಿಕ್ಷಣ ಎನ್ನುವುದು ಬರೀ ವಿದ್ಯ ಜ್ಞಾನಾರ್ಜನೆ ಮಾಡುವದಷ್ಟೇ ಅಲ್ಲ ಸಮಾಜದಲ್ಲಿ ಗೌರವ ಯುತವಾಗಿ ಸಂಸ್ಕಾರದಿಂದ ಬಾಳೆಂಬ ಜೀವನ ಸುಸಂಸ್ಕೃತವಾಗಿ ಬದುಕಿಸುವ ಪಾಠ ಕಲಿಸುವ ಶಿಕ್ಷಕನೇ ಆದರ್ಶ ಮಾದರಿ ಗುರುವಾಗುವನು.

ಎರಡು ಮೂರು ದಶಕಗಳ ಹಿಂದೆ ಶಾಲೆಯಲ್ಲಿ ಮಕ್ಕಳಿಗೆ ಜ್ಞಾನದ ಜೊತೆಗೆ ಶಾಲಾ ಮೈದಾನದಲ್ಲಿ ಗಿಡಗಳನ್ನು ಬೆಳೆಸುವುದು ಮಾದರಿಯಾಗಿಟ್ಟುಕೊಂಡು ಸರ್ಕಾರದಿಂದ ವೃಕ್ಷೋತ್ಸವ ಯೋಜನೆ ಹೊರಹೊಮ್ಮಿದರೆ, ಶಾಲೆಯ ಕೊಠಡಿ ಮತ್ತು ಆವರಣಗಳನ್ನು ಸ್ವಚ್ಛಗೊಳಿಸುವ ವಿಧಾನವೇ ಇವತ್ತಿನ ಸ್ವಚ್ಛ ಭಾರತ ವಾಗಿದೆ.

ಹೀಗಾಗಿ ಮಕ್ಕಳಿಗೆ ಬಿತ್ತುವ ಜ್ಞಾನ ದೇಶದ ಅಭಿವೃದ್ಧಿಗೊಳಿಸಲು ಸಮಾಜ ಸುಧಾರಿಸಲು ಸಂಸ್ಕೃತವಾಗಿ ಬಾಳಿ ಬದುಕುವ ದಾರಿ ತೋರಿಸುತ್ತಿದೆ ಇಂತಹ ಕೆಲಸ ಸಾಧ್ಯವಾಗುವುದು ತಮ್ಮಲ್ಲಿರುವ ವಿದ್ಯೆ ಜ್ಞಾನ ಧಾರೆ ಎರೆಯುವ ಶಕ್ತಿ ದೇವರು ಆದರ್ಶ ಶಿಕ್ಷಕರಿಗೆ ಮಾತ್ರ ಕಲ್ಪಿಸಿರುತ್ತಾನೆ ಎಂದು ಸಮಾಜ ನಂಬುತ್ತದೆ.

ಇತ್ತೀಚೆಗೆ ತಾನು ಕಲಿತು ಬಂದ ವಿದ್ಯಾಸಂಸ್ಥೆಯಲ್ಲಿ ಹಳೆಯ ವಿದ್ಯಾರ್ಥಿ ಸಂಘವನ್ನು ಸ್ಥಾಪಿಸಿಕೊಂಡು ನಾನು ಕಲಿಸಿದ ಗುರುವಿಗೆ ಗುರು ನಮನ ಸಲ್ಲಿಸುವ ಕಾಯಕ ನಾಡಿನದ್ಯಂತ ಜರುಗುತ್ತಿದ್ದು. ಕಲಿಸಿದ ಗುರುವಿಗೆ ನಮ್ಮದೊಂದು ನಮನ ಇರಲಿ ಎನ್ನುವ ಅಭಿಮಾನದಿಂದ ವಿದ್ಯಾರ್ಥಿಗಳ ಬದುಕಿಗೆ ಬೆಳಕು ಕೊಟ್ಟ ಶಿಕ್ಷಕರಿಗೆ ಗುರುವಂದನೆ ಕಾರ್ಯಕ್ರಮ ಮಾಡುತ್ತಿರುವುದು ಗುರುಗಳ ಬೆಲೆ ಹೆಚ್ಚಿಸಿದಂತಾಗುತ್ತಿದೆ.

ಆದರೆ ಇವತ್ತಿನ ಶಿಕ್ಷಣ ಪದ್ಧತಿ ಬದಲಾವಣೆಯಾಗಿದ್ದು ಚಿಡಿ ಚಂ ಚಂ ವಿದ್ಯೆ ಘಂ ಘಂ ಎನ್ನುವ ಕಾಲ ದೂರಾಗಿ ಮಕ್ಕಳನ್ನು ವಿನಯದಿಂದ ಶಾಲಿಗೆ ಕರೆದುಕೊಂಡು ಬಂದು ಶಿಕ್ಷಣ ಕೊಡಿಸುವ ಮತ್ತು ಶಿಕ್ಷಣವನ್ನು ಪಡೆಯಲು ವಿದ್ಯಾರ್ಥಿಗಳಿಗೆ ಪರಿಪರಿಯಾಗಿ ಬೇಡಿಕೊಳ್ಳುವ ಪರಿಸ್ಥಿತಿ ಬಂದೊದಗಿದೆ.

""ಅರಿವು ಅನಲೊಳಗಿಕ್ಕಿ ಅಗೆ-ಯುತ್ತಿದೆ ಮರ್ತ್ಯ ಲೋಕವೆಲ್ಲವೂ, ಅರಿವು ಉಳಿಯಲರಿಯದೆ ಕೆ-ಟ್ಟಿತ್ತು ಲೋಕವೆಲ್ಲವೂ, ನಾನೆಂತು ಬದುಕುವೇನು ಅಣ್ಣ, ಕತ್ತಲೆಯ ಬೆಳಗ ಕಾಂಬ ಸಂದೇಹ ನಾನೊಬ್ಬಳು, ಎನ್ನ ಕಣ್ಣ ಕಟ್ಟಿ ಕನ್ನಡಿ ತೋರಿತ್ತೂ ಅಜಗಣ್ಣ ನನ್ನ ಯೋಗ"" ಎಂಬ ಮುಕ್ತಾಯಕ್ಕನ ನುಡಿಯಂತೆ ಇವತ್ತು ಕಲಿಸಬೇಕೆಂಬ ಹಂಬಲ ಮಾದರಿ ಶಿಕ್ಷಕರಿಗಿದ್ದರೂ ಕಲಿಯಬೇಕೆಂಬ ಹಂಬಲ ವಿದ್ಯಾರ್ಥಿಗಳಿಗೆ ಕಡಿಮೆಯಾಗುತ್ತಿದೆ ಎನ್ನುವ ಸಮೀಕ್ಷೆಗಳು ತಂದೆ ತಾಯಿಗಳಿಗೆ ಮಕ್ಕಳ ಭವಿಷ್ಯದ ಬಗ್ಗೆ ಚಿಂತೆ ಮಾಡುವಂತಹ ಆಗಿದೆ ವಿದ್ಯಾರ್ಥಿಗಳು ಶಿಕ್ಷಣದಲ್ಲಿ ಕಳಪೆ ಸಾಧನೆ ಮಾಡುತ್ತಿದ್ದು ವಿದ್ಯಾರ್ಥಿನಿಯರ ಮೇಲುಗ್ಯೆ ಸಾಧಿಸುತ್ತಿದ್ದಾರೆ ಆದರೆ ನಾಲ್ಕು ಗೋಡೆಗಳ ಮಧ್ಯೆ ಇದ್ದ ಮಹಿಳೆ ಕಲಿಯಬೇಕೆಂಬ ಹಂಬಲದಿಂದ ಇವತ್ತು ಜಗತ್ತನ್ನೇ ಆಳಬೇಕೆನ್ನುವ ಅಚಲತೆ ಹೊಂದಿ ವಿದ್ಯಾರ್ಥಿಗಳು ಶಿಕ್ಷಣದಿಂದ ನಿರುತ್ಸಾಹ ತೋರಿಸುವುದು ಬೇಸರವೆನಿಸುತ್ತಿದ್ದು. ಇವತ್ತಿನ ಮಕ್ಕಳ ಮತ್ತು ವಿದ್ಯಾರ್ಥಿಗಳನ್ನು ಸರಿದಾರಿಗೆ ತರುವಂತ ಕೆಲಸ ತಂದೆ-ತಾಯಂದಿರು ಮತ್ತು ಸಮಾಜ ಮಾಡಬೇಕಾಗಿದೆ ಅಂದಾಗ ಮಾತ್ರ ಕಷ್ಟಪಟ್ಟು ಕಲಿಸುವ ಆದರ್ಶ ಮಾದರಿ ಶಿಕ್ಷಕನಿಗೆ ಗೌರವ ಕೊಟ್ಟಂತಾಗುತ್ತದೆ...



ಜಗದೀಶ.ಎಸ್.ಗಿರಡ್ಡಿ.
-ಲೇಖಕರು.
ಗೊರಬಾಳ.
ಮೊ.9902470856.

# ವರ್ತಮಾನ ವ್ಯವಸ್ಥೆಯಲ್ಲಿ ವೈಚಾರಿಕ ಚಿಂತನೆ ಅವಶ್ಯಕ : ಡಾ. ಹುಲಿಕಲ್ ನಟರಾಜ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಇಂದು ನಾವೂ ದೇಶದಲ್ಲಿ ಹಲವಾರು ಕ್ಷೇತ್ರಗಳಲ್ಲಿ ಸಾಕಷ್ಟು ಅಭಿವೃದ್ಧಿ ಸಾಧಿಸಿದರು ಇನ್ನೂ ಸಮಾಜದಲ್ಲಿ ಮೂಢನಂಬಿಕೆ, ಅಂದ ಶ್ರದ್ಧೆ ಇತ್ಯಾದಿಗಳನ್ನು ಕಾಣುತ್ತಿದ್ದೇವೆ, ಇದು ನಿಜಕ್ಕೂ ಆತಂಕಕಾರಿ ಬೆಳವಣಿಗೆಯಾಗಿದೆ, ದೇಶದ ಶಕ್ತಿಯಾಗಿರುವ ವಿಧ್ಯಾರ್ಥಿಗಳು ವರ್ತಮಾನ ವ್ಯವಸ್ಥೆಯಲ್ಲಿ ವೈಚಾರಿಕ ಚಿಂತನೆಗಳನ್ನು ಮೈಗೂಡಿಸಿಕೊಂಡು ಬದಲಾವಣೆಗೆ ತಮ್ಮದೇ ಆದ ಕೊಡುಗೆ ನೀಡಬೇಕೆಂದು ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ಅಧ್ಯಕ್ಷರಾದ ಡಾ, ಹುಲಿಕಲ್ ನಟರಾಜ ಕರೆ ನೀಡಿದರು. ಜಿಲ್ಲಾ ಸಹಮತ ವೇದಿಕೆ ಹಾಗೂ ಬಸವ ಸಂಸ್ಕೃತಿ ಅಭಿಯಾನ ಸಮಿತಿಯಿಂದ ನಗರದ ಪಾಟೀಲ್ ಕನ್ವೇಷನ್ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ ವಿಧ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ವಚನಗಳಲ್ಲಿ ವೈಜ್ಞಾನಿಕತೆ ಕುರಿತು ಉಪನ್ಯಾಸ ನೀಡಿದ ಅವರು, ವಿಧ್ಯಾರ್ಥಿಗಳು ಬದುಕಿನಲ್ಲಿ ಬಸವಣ್ಣನವರ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಕರಾತ್ಮಕ ಚಿಂತನೆಗಳೊಂದಿಗೆ ಉನ್ನತ ಗುರಿ, ಸಂಕಲ್ಪದೊಂದಿಗೆ ಪರಿಶ್ರಮದೊಂದಿಗೆ ಅಭ್ಯಾಸ ಮಾಡಿ, ಗುರಿ ತಲುಪಿ ಸಮಾಜ ಬದಲಾವಣೆಗೆ ಪ್ರೇರಣೆಯಾಗಿರಿ ಎಂದು ಸಲಹೆ ನೀಡಿದರು. ಇಂದು ಧರ್ಮ ಎಂಬುದು ಕೆಲವರ ಸ್ವತ್ತಾಗಿ ಮಾರುಕಟ್ಟೆಯಲ್ಲಿ ಸರಕಾಗಿದೆ, ಒಂದು ಜಾತಿಗೆ ಸೀಮಿತವಾಗಬಾರದು, ವೈಚಾರಿಕತೆ ಎಂಬುದು ಸದಾ ಹರಿಯುವ ನೀರು, ಸರ್ವ ಜನಾಂಗಕ್ಕೆ ವಿಜ್ಞಾನ ಮತ್ತು ವೈಚಾರಿಕತೆ ಅಗತ್ಯವಾಗಿದೆ, ಮನೆಯ ವಾಸ್ತುಗಿಂತ ಹೆಚ್ಚಾಗಿ ನಾವೂ ಮನಸ್ಸಿನ ವಾಸ್ತು ಚನ್ನಾಗಿದಿಯಾ ಎಂದು ನೋಡಿಕೊಳ್ಳಬೇಕು ಇದರಿಂದ ಮಾತ್ರ ಆರೋಗ್ಯಕರ ಸಮಾಜ ನಿರ್ಮಾಣವಾಗಲು ಸಾಧ್ಯ ಎಂದರು.

ಆದರೆ ಇಂದು ಸಮಾಜದ ಆಸ್ತಿಯಾಗಿರುವ ವಿಧ್ಯಾರ್ಥಿಗಳು ಹೆಚ್ಚಾಗಿ ತಮ್ಮ ಮೊಬೈಲ್‌ಗಳಲ್ಲಿ ಹೆಚ್ಚುಕ್ರೀಯಾಶಿಲರಾಗಿ ಸಮಯ ಕಳೆಯುತ್ತಿದ್ದಾರೆ, ಅದಕ್ಕೆ ಕಡಿವಾಣ ಹಾಕಿಕೊಳ್ಳಬೇಕು, ಹೊಸ ವಿಷಯಗಳ ಅಧ್ಯಯನದ ಬಗ್ಗೆ ಆಸಕ್ತಿ ಬೆಳೆಸಿಕೊಂಡು ಪ್ರಶ್ನೆ ಮಾಡುವ ಮನೋಭಾವನೆ ಬೆಳೆಸಿಕೊಳ್ಳಬೇಕು, ಇದರಿಂದ ನಿಮ್ಮೆಲ್ಲರ ಜ್ಞಾನ ವಿಕಾಸವಾಗುತ್ತದೆ, ಈ ದಿಶೆಯಲ್ಲಿ ನಾನು ನಾಡಿನ ಮಠಾಧೀಶರ ಸಹಕಾರದಿಂದ ಸಮಾಜದಲ್ಲಿ ಜಾಗೃತಿ ಮೂಡಿಸುವ ಪ್ರಯತ್ನ ಮಾಡುತ್ತಿದ್ದೇನೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ಲಿಂಗಾಯತ ಮಠಾಧಿಪತಿಗಳ ಒಕ್ಕೂಟ ಭಾಲಿಯ ನಾಡೋಜ ಡಾ. ಬಸವಲಿಂಗ ಪಟ್ಟದೇವರು ಮಾತನಾಡಿ, ಸಮಾಜದಲ್ಲಿ ಜಾತಿ ಎಂಬುದು ಕತ್ತರಿಯಂತೆ, ಧರ್ಮವೆಂಬುದು ಸೂಜಿಯಂತೆ ಅದು ಎಲ್ಲಾ ವರ್ಗದ ಜನರನ್ನು ಒಗ್ಗೂಡಿಸಿ, ದೇಶದ ಐಕ್ಯತೆಗೆ ಶಕ್ತಿ ತುಂಬುತ್ತದೆ ಎಂದು ನುಡಿದರು. ಬೈಲೂರಿನ ನಿಜಗುಣಾನಂದ ಮಹಾಸ್ವಾಮಿಜಿ ಮಾತನಾಡಿ, ಬಸವಣ್ಣನವರು ಮನುಕುಲದ ಉದ್ಧಾರಕ, ಸಮಾಜದಲ್ಲಿ ಸಮಾನತೆ, ಶಾಂತಿ, ಸಾಮರಸ್ಯ, ಐಕ್ಯತೆ ಮೂಡಿಸಿ ಮಾನವೀಯ ಮೌಲ್ಯಗಳನ್ನು ನೀಡಿದ್ದಾರೆ, ವಿಧ್ಯಾರ್ಥಿಗಳು ಅರಿತು ಸನ್ಮಾರ್ಗದಲ್ಲಿ ಬದುಕು ಸಾಗಿಸಿ ಎಂದು ಕಿವಿ ಮಾತು ಹೇಳಿದರು. ಈ ಪವಿತ್ರ ನಿಸರ್ಗದಲ್ಲಿ ಅಪಾರ ಶಕ್ತಿಯಿದೆ, ಕಾಲಕಾಲಕ್ಕೆ ನಮ್ಮೆಲ್ಲರಲ್ಲಿ ಬದಲಾವಣೆ ಮಾಡುವ ಶಕ್ತಿಯಿದೆ, ಎಲ್ಲರೂ ಅದರೊಂದಿಗೆ ಹೊಂದಾಣಿಕೆಯೊಂದಿಗೆ ಬದುಕು ಸಾಗಿಸಬೇಕು, ಇಲ್ಲದಿದ್ದರೇ ಮನುಕುಲಕ್ಕೆ ತಪ್ಪಿದ್ದಲ್ಲ ಎಂದು ಅಭಿಪ್ರಾಯಪಟ್ಟರು.

ವಿಧ್ಯಾರ್ಥಿಗಳು ಕೇಳದ ಹಲವಾರು ಪ್ರಶ್ನೆಗಳಿಗೆ ಡಾ. ಹುಲಿಕಲ್ ನಟ-ರಾಜ್, ವಿಶ್ವರಾಧ್ಯ ಸತ್ಯಂಪೇಠ್ ಹಾಗೂ ಸ್ವಾಮಿಜಿಗಳು ಉತ್ತರಿಸಿದರು,

ಕಾರ್ಯಕ್ರಮವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಉದ್ಘಾಟಿಸಿ ಮಾತನಾಡಿ, ನಾಡಿನಲ್ಲಿ ಬಸವಾದಿ ಶರಣರ ಮಠ-ಮಾನ್ಯಗಳು ನೀಡಿರುವ ಕೊಡುಗೆ ಅಪಾರವಾಗಿದೆ, ಬಸವಣ್ಣನವರು ತಮ್ಮ ಪ್ರಗತಿಪರ ವಿಚಾರಗಳ ಮೂಲಕ ಎಲ್ಲಾ ಅನಿಷ್ಟಗಳನ್ನು ದೂರ ಮಾಡಿ, ತೊಲಗಿಸಲು ಪ್ರಯತ್ನಿಸಿ ಸಮಭಾವ ಸಮಾಜ ನಿರ್ಮಾಣಕ್ಕೆ ಪ್ರಯತ್ನಿಸಿದರು ಎಂದು ಹೇಳಿದರು.

ನಾಡಿನಲ್ಲಿ ಸಾಗುತ್ತಿರುವ ಬಸವ ಸಂಸ್ಕೃತಿ ಅಭಿಯಾನ ವಿಧ್ಯಾರ್ಥಿಗಳು ಹಾಗೂ ಜನರಲ್ಲಿ ಹೊಸ ಚಿಂತನಾ ಶಕ್ತಿ ಮೂಡಿಸಲಿ ಎಂದು ತಿಳಿಸಿದರು. ವೇದಿಕೆ ಮೇಲೆ ಸಾಣೇಹಳ್ಳಿಯ ಡಾ. ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಜಿ, ಗುರುಮಿಠಕಲ್ ಖಾಸಾ ಮಠದ ಶಾಂತವೀರ ಮಹಾಸ್ವಾಮಿಜಿ, ಶಿವಾನಂದ ಮಹಾಸ್ವಾಮಿಜಿ ಹುಣಸಗಿ, ನಾಗನೂರಿನ ಅಲ್ಲಮಪ್ರಭು ಮಹಾಸ್ವಾಮಿಜಿ, ಅಥಣಿಯ ಪ್ರಭುಚನ್ನಬಸವ ಮಹಾಸ್ವಾಮಿಜಿ, ಉರಿಲಿಂಗ ಪೆದ್ದೀಶ್ವರ ಮಠದ ಜ್ಞಾನಪ್ರಕಾಶ ಸ್ವಾಮಿಜಿ, ಕೊಡೇಕಲ್‌ನ ಶಿವುಕುಮಾರ ಸ್ವಾಮಿಜಿ, ಚಿಗರಳ್ಳಿಯ ಕಭೀರಾನಂದ ಸ್ವಾಮಿಜಿ, ಸಹಮತ ವೇದಿಕೆ ಜಿಲ್ಲಾಧ್ಯಕ್ಷ ಡಾ. ಭೀಮಣ್ಣ ಮೇಟಿ, ಗುಂಡಪ್ಪ ಕಲಬುರಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಿವರಾಜ ಕಲಕೇರಿ ಸುರಪುರ ಸ್ವಾಗತಿಸಿದರೇ, ಡಾ. ಎಸ್.ಎಸ್ ನಾಯಕ ನಿರೂಪಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ಸಹಸ್ರಾರು ಬಸವಾಭಿಮಾನಿಗಳು ಹಾಗೂ ವಿಧ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಧೃಡ ಸಮಾಜದ ನಿರ್ಮಾಣ, ಅಭಿಯಾನದ ಆಶಯವಾಗಿದೆ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ನಾಡಿನ ಜನರಲ್ಲಿ ಬಸವಾದಿ ಶರಣರ ಚಿಂತನೆಗಳನ್ನು ಬಿತ್ತುವ ಜೊತೆಗೆ ಸಧೃಡ ಸಮಾಜದ ನಿರ್ಮಾಣ ಮಹತ್ವದ ಆಶಯದೊಂದಿಗೆ ಬಸವ ಸಂಸ್ಕೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಲಿಂಗಾಯತ ಮಠಾಧೀಪತಿಗಳ ಒಕ್ಕೂಟದ ಅಧ್ಯಕ್ಷರು ಹಾಗೂ ಭಾಲ್ಕಿಯ ನಾಡೋಜ ಡಾ. ಬಸವಲಿಂಗ ಪಟ್ಟದೇವರು ನುಡಿದರು.

ನಗರದ ನೇತಾಜಿ ವೃತ್ತದಲ್ಲಿ ಬಸವಣ್ಣನವರ ಅನುಭವ ಮಂಟಪ ಮೆರವಣಿಗೆ ಹಾಗೂ ಸಾಮರಸ್ಯ ನಡಿಗೆ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಬಸವಣ್ಣನವರ ಆಶಯದಮತೆ ಸಮ ಸಮಾಜ ನಿರ್ಮಾಣದ ಗುರಿ, ವ್ಯಸನಮುಕ್ತ ಸಮಾಜದ ನಿರ್ಮಾಣ, ಅಂಧಶ್ರದ್ಧೆ ಅಳಿಸಿ, ಸುಜ್ಞಾನ ಬೆಳೆಸುವುದು, ಮಕ್ಕಳಲ್ಲಿ ಆಧ್ಯಾತ್ಮದ ಅರಿವು ಮೂಡಿಸುವುದು, ಮಹಿಳೆಯರ ಘನತೆ ಕಾಪಾಡುವುದು, ವ್ಯಕ್ತಿತ್ವ ವಿಕಸನ ಸೇರಿದಂತೆ ಹಲವಾರು ವಿಷಯಗಳ ಬಗ್ಗೆ ಜಾಗೃತಿ ಮೂಡಿಸುವುದಾಗಿದೆ ಎಂದು ತಿಳಿಸಿದರು.

ಮೆರವಣಿಗೆಯಲ್ಲಿ ಬೈಲೂರಿನ ನಿಜಗುಣಾನಂದ ಮಹಾಸ್ವಾಮಿಜಿ, ಸಾಣೇಹಳ್ಳಿಯ ಡಾ. ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಜಿ, ಗುರುಮಿಠಕಲ್ ಖಾಸಾ ಮಠದ ಶಾಂತವೀರ ಮಹಾಸ್ವಾಮಿಜಿ, ಶಿವಾನಂದ ಮಹಾಸ್ವಾಮಿಜಿ ಹುಣಸಗಿ, ಕೋಡಾಲದ ಪಂಚಮ ಸಿದ್ದಲಿಂಗ ಸ್ವಾಮಿಜಿ, ನಾಗನೂರಿನ ಅಲ್ಲಮಪ್ರಭು ಮಹಾಸ್ವಾಮಿಜಿ, ಅಥಣಿಯ ಪ್ರಭುಚನ್ನಬಸವ ಮಹಾಸ್ವಾಮಿಜಿ, ಉರಿಲಿಂಗ ಪೆದ್ದೀಶ್ವರ ಮಠದ ಜ್ಞಾನಪ್ರಕಾಶ ಸ್ವಾಮಿಜಿ, ಕೊಡೆಕಲ್‌ನ ಶಿವುಕುಮಾರ ಸ್ವಾಮಿಜಿ, ಚಿಗರಳ್ಳಿಯ ಕಭೀರಾನಂದ ಸ್ವಾಮಿಜಿ, ಸಹಮತ ವೇದಿಕೆ ಜಿಲ್ಲಾಧ್ಯಕ್ಷ ಡಾ. ಭೀಮಣ್ಣ ಮೇಟಿ, ಗುಂಡಪ್ಪ ಕಲಬುರಗಿ, ಜಿಲ್ಲಾ ವೀರಶೈವ ಸಮಾಜದ ಜಿಲ್ಲಾಧ್ಯಕ್ಷ ಚನ್ನಪ್ಪಗೌಡ ಮೋಸಂಬಿ, ಶ್ರೀನಿವಾಸರಡ್ಡಿ ಪಾಟೀಲ್ ಚನ್ನೂರ, ಬಸ್ಸುಗೌಡ ಬಿಳ್ಹಾರ, ನಾಗರತ್ನ ಕುಪ್ಪಿ, ಮಂಜುಳಾ ಗೂಳಿ, ಭಾಗ್ಯವಂತಿ ಕೆಂಭವಿ, ಶರಣು ದಂಡೀನ್, ಹಣಮೇಗೌಡ ಮರಕಲ್, ಸುದರ್ಶನ್ ನಾಯಕ್, ಅಡಿವೆಪ್ಪ ಜಾಕಾ, ನರಸರಡ್ಡಿ ಪಾಟೀಲ್ ಗಡ್ಡೆ ಸುಗೂರ, ರಂಗನಾಥರಡ್ಡಿ ಪಾಟೀಲ್ ನಜರಾಪೂರ, ಸುಗುರೇಶ ವಾರದ ಸುರಪುರ, ಶಿವರಾಜ ಕಲ್ಕೇರಿ, ಪ್ರಕಾಶ ಅಂಗಡಿ, ಬಾಶುಮಿಯಾ ನಾಯ್ಕೋಡಿ ವಡಗೇರಾ, ಮರೆಪ್ಪ ಚಟ್ರೇಕರ್, ಸಮದಾನಿ ಮೂಸಾ, ವಾಹೀದ್ ಮಿಯಾ, ಸೇರಿದಂತೆ ಸರ್ವ ಧರ್ಮಗಳ ಮುಖಂಡರು ಭಾಗವಹಿಸಿದ್ದರು.

# ವೆಂಕಣ್ಣ ತಾತನವರ ಆಶೀರ್ವಾದ ಪಡೆದು ಪಾವನ ರಾಗೋಣ ವಿಶ್ವನಾಥ್ ಗಟ್ಟಿನ್.

ಮಲ್ಲಮ್ಮ ನುಡಿ ವಾರ್ತೆ ಶಹಪುರ

ಬೆನಕನಹಳ್ಳಿ ಆರಾಧ್ಯ ದೈವ ಮಹಾಮಂಗಳ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು.

ಶಹಪುರ ತಾಲೂಕಿನ ಬೆನಕನಹಳ್ಳಿ ಗ್ರಾಮದಲ್ಲಿ ಆರಾಧ್ಯ ದೈವ ವೆಂಕಣ್ಣ ತಾತನವರ 42 ನೆಯ ಮೌನವ್ರತ ಮುಕ್ತಾಯಗೊಳಿಸಿದರು.

ಬೆನಕನಹಳ್ಳಿ ಗ್ರಾಮದ ಸುತ್ತಮುತ್ತಲಿನ ಹಳ್ಳಿಗಳಿಂದ ಬಂದ ಭಕ್ತರು ಯಂಕಣ್ಣ ತಾತನವರ ಆಶೀರ್ವಾದ ಪಡೆದು ಪಾವನರಾದರು.

18 ವರ್ಷಗಳ ಕಾಲ ಪ್ರತಿವರ್ಷ ಶ್ರಾವಣ ಮಾಸದಲ್ಲಿ ತಮ್ಮ ಮೌನರಥವನ್ನು ಆಚರಿಸುತ್ತ 18 ವರ್ಷಗಳ ಕಾಲ ಆಚರಿಸುತ್ತಾ ಬಂದಿದ್ದರು.

ಜಿಲ್ಲಾಧ್ಯಂತ ತಮ್ಮ ಭಕ್ತರಿಗೆ ತಮ್ಮ ಸಮಸ್ಯೆಗಳನ್ನು ಆಲಿಸುತ್ತಾ ಆ ಸಮಸ್ಯೆಗಳಿಗೆ ಪರಿಹಾರ



ಮಾಡಿಕೊಡುವಲ್ಲಿ ಬಹುದೊಡ್ಡ ಕೊಡುಗೆ ಇವರದಾಗಿದ್ದು ಎಂದು

ವಿಶ್ವನಾಥ್ ಗಟ್ಟಿನ್ ಸಾಹುಕಾರ್ ಬೆನಕನಹಳ್ಳಿ ಯಂಕಣ್ಣ ತಾತನವರ ಬಗ್ಗೆ ಪತ್ರಿಕೆಗೆ ತಿಳಿಸಿದ್ದಾರೆ

# ಮಾಜಿ ಸೈನಿಕರ ಸಂಘದ ಕಾರ್ಯಾಲಯ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ರಾಯಚೂರು ಸೆಪ್ಟೆಂಬರ್ 04- ರಾಯಚೂರು ಮಹಾನಗರ ಪಾಲಿಕೆಯ ಹಳೆಯ ನಗರಸಭೆಯ ಕಟ್ಟಡದಲ್ಲಿ ಮಾಜಿ ಸೈನಿಕರ ಸಂಘದ ಕಾರ್ಯಾಲಯವನ್ನು ಪಾಲಿಕೆಯ ಮಹಾಪೌರರಾದ ನರಸಮ್ಮ ನರಸಿಂಹಲು ಮಾಡಿಗಿರಿ ಅವರು ಸೆಪ್ಟೆಂಬರ್ 4ರಂದು ಉದ್ಘಾಟಿಸಿದರು.

ಈ ವೇಳೆ ಮಹಾನಗರ ಪಾಲಿಕೆಯ ಉಪ ಮಹಾಪೌರರಾದ ಸಾಜೀದ ಸಮೀರ ಅವರು ಮಾತನಾಡಿ, ಮಾಜಿ ಸೈನಿಕರ ಸಂಘ-ಕ್ಕೆ ನಿಯಮದಡಿಯಲ್ಲಿ ಮಹಾನಗರ ಪಾಲಿಕೆಯ ಸೌಲಭ್ಯಗಳನ್ನು ಒದಗಿಸಲಾಗುವುದು. ನಿಯಮದಡಿ ಅವಕಾಶವಿಲ್ಲದಿದ್ದಲ್ಲಿ ಸರ್ವ ಸದಸ್ಯರ ಸಹಕಾರ ಪಡೆದು ಬೇಡಿಕೆ ಈಡೇರಿಸಲಾಗುವುದು ಎಂದು ತಿಳಿಸಿದರು.

ಈ ವೇಳೆ ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ ಅವರು ಮಾತನಾಡಿ, ಪಾಲಿಕೆಯ ಆಯುಕ್ತರೊಂದಿಗೆ ಚರ್ಚಿಸಿ ಮಾಜಿ ಸೈನಿಕರ ಸಂಘಕ್ಕೆ ಬೇರೆ ಬೇರೆ ಸೌಕರ್ಯ ಒದಗಿಸಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಎನ್.ಸಿ.ಸಿ ಕಮಾಂಡೆಂಟ್ ಅಧಿಕಾರಿಗಳು, ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷರು ಸೇರಿದಂತೆ ವಿವಿಧ ಪದಾಧಿಕಾರಿಗಳು, ಮಾಜಿ ಸೈನಿಕರ ಕುಟುಂಬದ ಸದಸ್ಯರು

# ಜಿಲ್ಲಾಮಟ್ಟದ ಉತ್ತಮ ಶಿಕ್ಷಕ ಆಯ್ಕೆ ಪಟ್ಟಿ ಪ್ರಕಟ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,**
ಸೆ.04–ಪ್ರಸ್ತಕ ಸಾಲಿನ ಜಿಲ್ಲಾಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾದ ಶಿಕ್ಷಕರ ಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಉಮಾದೇವಿ ಅವರು ತಿಳಿಸಿದ್ದಾರೆ.

ಶಿಕ್ಷಕರ ಪಟ್ಟಿ:

ಕಿರಿಯ ಪ್ರಾಥಮಿಕ ಶಾಲೆ ವಿಭಾಗ:
ಬಳ್ಳಾರಿ ಪೂರ್ವ ವಲಯ ಹನುಮಾನ್‌ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮಹಾಂತೇಶ, ಸಂಡೂರು ತಾಲ್ಲೂಕಿನ 6ನೇ ವಾರ್ಡ್ನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಜಿ.ಆರ್. ರೇಣುಕಮ್ಮ, ಸಿರುಗುಪ್ಪ ತಾಲ್ಲೂಕಿನ ಬಿ.ಬಿ.ಕ್ಯಾಂಪ್ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮಹೇಶ್ ವೈ.

ಹಿರಿಯ ಪ್ರಾಥಮಿಕ ಶಾಲೆ ವಿಭಾಗ:
ಬಳ್ಳಾರಿ ಪೂರ್ವ ವಲಯ ಟಿ.ಜೆ ಆಯಿಲ್ ಮಿಲ್ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ನಸೀಮ ಆರ್.ಕೆ., ಹವಂಭಾವಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿಜಯಲಕ್ಷ್ಮೀ ಗಂಗಣ್ಣನವರು, ಕುರುಗೋಡು ತಾಲ್ಲೂಕಿನ ಯರಂಗಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಛಾಯದೇವಿ ಬಿ.ಎಂ., ಸಂಡೂರು ತಾಲ್ಲೂಕಿನ ಆಶ್ರಯ ಕಾಲೋನಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ರಾಜಣ್ಣ, ಸಿರುಗುಪ್ಪ ತಾಲ್ಲೂಕಿನ ತೆಕ್ಕಲಕೋಟೆಯ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಶಾಂತಮ್ಮ ಎಸ್., ಕಂಪ್ಲಿ ತಾಲ್ಲೂಕಿನ ಕೋಟೆ ಪ್ರದೇಶದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹೊಸಗೆರೆಪ್ಪ, ಶಿವಪುರ ಮೆಟ್ರಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಗಾದಿಲಿಂಗಪ್ಪ.

**ಪ್ರೌಢ ಶಾಲೆ ವಿಭಾಗ:**
ಬಳ್ಳಾರಿ ಪೂರ್ವ ವಲಯದ ಬಳ್ಳಾರಿ ಬಾಲಕೀಯರ ಸರ್ಕಾರಿ ಪ್ರೌಢ ಶಾಲೆಯ ಶಿವಕುಮಾರ ಎ., ಮೋಕದ ಸರ್ಕಾರಿ ಪ್ರೌಢ ಶಾಲೆಯ ವಿಶೇಷ ವೃತ್ತಿ ಶಿಕ್ಷಕ, ಕುರುಗೋಡು ತಾಲ್ಲೂಕಿನ ಯರಂಗಳಿಯ ಸರ್ಕಾರಿ ಪ್ರೌಢ ಶಾಲೆಯ ಹುಲೆಪ್ಪ ಹೆಚ್., ಸಂಡೂರು ತಾಲ್ಲೂಕಿನ ಸಂಡೂರು ಛತ್ರಪತಿ ಶಿವಾಜಿ ವಿದ್ಯಾಮಂದಿರ ಸರ್ಕಾರಿ ಪ್ರೌಢ ಶಾಲೆಯ ಮಹಮ್ಮದ್ ಜಾವೀದ್, ಯು.ರಾಜಾಪುರದ ಸರ್ಕಾರಿ ಪ್ರೌಢ ಶಾಲೆಯ ಹಯಾದ್ ಭಾಷ ಕೆ., ಸಿರುಗುಪ್ಪ ತಾಲ್ಲೂಕಿನ ಸಿರುಗುಪ್ಪ ಸರ್ಕಾರಿ ಪ್ರೌಢ ಶಾಲೆಯ ಜೀವೇಶ್ ಕುಲಕರ್ಣಿ, ಕಂಪ್ಲಿ ತಾಲ್ಲೂಕಿನ ಚಿಕ್ಕಜಾಯಿಗನೂರಿನ ಸರ್ಕಾರಿ ಪ್ರೌಢ ಶಾಲೆಯ ಮುದುಕಪ್ಪ ಆಯ್ಕೆಯಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಉಮಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೀನುಗಾರಿಕೆ ಇಲಾಖೆ: ನಾಲ್ಕು ಚಕ್ರ ವಾಹನ ಖರೀದಿಗೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,**
ಸೆ.04–ಮೀನುಗಾರಿಕೆ ಇಲಾಖೆಯಿಂದ 2025–26ನೇ ಸಾಲಿನಲ್ಲಿ ನಾಲ್ಕು ಚಕ್ರ ವಾಹನ ಖರೀದಿಸಲು ಸಹಾಯಧನ ಪಡೆಯಲು ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ 02 ಮತ್ತು ಪರಿಶಿಷ್ಟ ಪಂಗಡದ 01 ಮೀನುಗಾರರಿಗೆ ನಾಲ್ಕು ಚಕ್ರ ವಾಹನ ಖರೀದಿಸಲು ಗುರಿ ನಿಗದಿಪಡಿಸಲಾಗಿದ್ದು, ಖರೀದಿಸಿದ ವಾಹನಕ್ಕೆ ಶೇ.50ರಷ್ಟು ಅಥವಾ ಗರಿಷ್ಟ 3 ಲಕ್ಷ ರೂಪಾಯಿ ಆರ್ಥಿಕ ನೆರವು ನೀಡಲಾಗುವುದು. ಅರ್ಜಿಯನ್ನು ಸೆಪ್ಟಂಬರ್ 20 ರೊಳಗಾಗಿ ಜಿಲ್ಲೆಯ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ, ಸಿರುಗುಪ್ಪ, ಕಂಪ್ಲಿ, ಕುರುಗೋಡು ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಮೊ.7406508971 ಹಾಗೂ ಸಂಡೂರಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಮೊ.7204911897 ಗೆ ಸಂಪರ್ಕಿಸಬಹುದು ಎಂದು ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.17ರಂದು ಕಲ್ಯಾಣ ಕರ್ನಾಟಕ ಉತ್ಸವ; ಹಬ್ಬದ ಆಚರಣೆಗೆ ಸಕಲ ಸಿದ್ಧತೆ ಕೈಗೊಳ್ಳಿ: ತಹಶೀಲ್ದಾರ್

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**
ಸೆ.04–ಕಲ್ಯಾಣ ಕರ್ನಾಟಕ ಭಾಗದ ಪ್ರದೇಶಗಳು ಸೆ.17ರಂದು ವಿಮೋಚನೆಗೊಂಡ ದಿನವಾಗಿದ್ದು, ಹಾಗಾಗಿ ಜಿಲ್ಲಾ ಕೇಂದ್ರದಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ದಿನವಾಗಿ ಆಚರಿಸಲಾಗುತ್ತಿದ್ದು, ಆಚರಣೆಯು ಹಬ್ಬದಂತಿರಬೇಕು, ಇದಕ್ಕೆ ಬೇಕಾದ ಎಲ್ಲ ರೀತಿಯ ಸಿದ್ಧತೆಗಳನ್ನು ಸಮರ್ಪಕವಾಗಿ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ತಹಶೀಲ್ದಾರರಾದ ಹಲೀಮಾ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.




ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ಅಂಗವಾಗಿ ಗುರುವಾರ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸೆ.17 ಹೈದ್ರಾಬಾದ್‌ನ ನಿಜಾಮರಿಂದ ಹೈದ್ರಾಬಾದ್ ಕರ್ನಾಟಕ ಪ್ರದೇಶಗಳು ವಿಮುಕ್ತಿ ಪಡೆದ ದಿನವಾಗಿದ್ದು, ಇದನ್ನು ಸರ್ಕಾರದ ಸೂಚನೆಯಂತೆ ಕಲ್ಯಾಣ ಕರ್ನಾಟಕ ಉತ್ಸವ ದಿನವಾಗಿ ಆಚರಿಸಲಾಗುತ್ತಿದೆ. ಸೆ.17 ರಂದು ಬೆಳಿಗ್ಗೆ 09 ಗಂಟೆಗೆ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಸರ್ಕಾರಿ (ಮಾಜಿ ಪುರಸಭೆ) ಪದವಿ ಪೂರ್ವ ಕಾಲೇಜಿನ ಮೈದಾನದ ಆವರಣದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಅಂಗವಾಗಿ ಧ್ವಜಾರೋಹಣ ಕಾರ್ಯಕ್ರಮ ನೆರವೇರಲಿದೆ ಎಂದರು.

ಕಲ್ಯಾಣ ಕರ್ನಾಟಕ ಉತ್ಸವವನ್ನು ಜಿಲ್ಲಾಡಳಿತದ ವತಿಯಿಂದ ಅತ್ಯಂತ ಅರ್ಥಪೂರ್ಣ ಹಾಗೂ ವಿಜೃಂಭಣೆಯಿಂದ ಆಚರಿಸುವ ನಿಟ್ಟಿನಲ್ಲಿ ಸ್ವಾಗತ ಸಮಿತಿ, ವೇದಿಕೆ ಸಮಿತಿ, ಸನ್ಮಾನ ಸಮಿತಿ, ಸ್ವಚ್ಛತೆ ಮತ್ತು ಕುಡಿಯುವ ನೀರಿನ ಸಮಿತಿ, ವಿದ್ಯುತ್ ಸಮಿತಿ, ದೀಪಾಲಂಕಾರ ಸಮಿತಿ, ಲಘು ಉಪಹಾರ ಸಮಿತಿ ಸೇರಿದಂತೆ ವಿವಿಧ ಸಮಿತಿಗಳನ್ನು ರಚಿಸಿ, ಜವಾಬ್ದಾರಿಗಳನ್ನು ವಹಿಸಿ, ಅಗತ್ಯ ಸಲಹೆ–ಸೂಚನೆಗಳನ್ನು ಇದೇ ಸಂದರ್ಭದಲ್ಲಿ ನೀಡಿದರು.

ಕಲ್ಯಾಣ ಕರ್ನಾಟಕ ಉತ್ಸವ ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳಿಗೆ ವಹಿಸಲಾದ ಜವಾಬ್ದಾರಿಯನ್ನು ಅತ್ಯಂತ ಸಮರ್ಪಕವಾಗಿ ನಿರ್ವಹಿಸುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಾಲಾ ಕಾಲೇಜುಗಳಲ್ಲಿ 371 ಜೆ ಕುರಿತು ಪ್ರಬಂಧ, ಆಶುಭಾಷಣ ಸ್ಪರ್ಧೆ ಆಯೋಜಿಸಬೇಕು. ಎಲ್ಲಾ ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳಿಂದ ವಿದ್ಯಾರ್ಥಿಗಳು ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಭಾಗವಹಿಸುವಂತೆ ನೋಡಿಕೊಳ್ಳಿ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರಿಗೆ ತಹಶೀಲ್ದಾರರು ಈ ಸಂದರ್ಭದಲ್ಲಿ ಸೂಚಿಸಿದರು.

ಕುಡಿಯುವ ನೀರಿನ ವ್ಯವಸ್ಥೆ, ಶ್ಯಾಮಿಯಾನ, ಕುರ್ಚಿ ಮತ್ತು ಲಘು ಉಪಹಾರದ ವ್ಯವಸ್ಥೆ ಹಾಗೂ ಮೈದಾನದ ಸ್ವಚತೆಯ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮ ನಡೆಯುವ ಮೈದಾನದಲ್ಲಿ ಆಂಬ್ಯುಲೆನ್ಸ್ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸೂಚಿಸಿದ ಅವರು, ಕಲ್ಯಾಣ ಕರ್ನಾಟಕ ಉತ್ಸವ ದಿನದಂದು ಜರುಗಲಿರುವ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರುವುದರಿಂದ ವಾಹನ ಸಂಚಾರ ಕ್ರಮಬದ್ಧಗೊಳಿಸಲು ಹಾಗೂ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಲು ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯ ಕುರಿತು ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಆಯೋಜಿಸಬೇಕು. ಶಿಷ್ಟಾಚಾರದನ್ವಯ ಆಹ್ವಾನ ಪತ್ರಿಕೆ ಮುದ್ರಿಸಿ, ಗಣ್ಯರನ್ನು ಮತ್ತು ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳನ್ನು ಆಹ್ವಾನಿಸಬೇಕು ಎಂದು ಸೂಚಿಸಿದರು.

ಜಿಲ್ಲೆಯ ಎಲ್ಲಾ ತಾಲ್ಲೂಕು ಮಟ್ಟದಲ್ಲಿ, ಶಾಲಾ–ಕಾಲೇಜುಗಳಲ್ಲಿ, ಹೋಬಳಿ ಮತ್ತು ಗ್ರಾಮಪಂಚಾಯತಿಗಳಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ಆಚರಿಸಲು ಆಯಾ ತಾಲ್ಲೂಕು ಮಟ್ಟದ ತಹಸೀಲ್ದಾರರು ಹಾಗೂ ಇಲಾಖಾ ಅಧಿಕಾರಿಗಳು ಕ್ರಮ ವಹಿಸಬೇಕು. ಜಿಲ್ಲಾ ಮಟ್ಟದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಯುವಕರು ದುಶ್ಚಟಗಳಿಗೆ ಬಲಿಯಾಗದಂತೆ ಕರೆ

# ಜಿಲ್ಲಾ ಪ್ರಧಾನ ಹಾಗು ಸತ್ರ ನ್ಯಾಯಾಧೀಶ ಚಂದ್ರಶೇಖರ ಸಿ. ಅಭಿಮತ



**ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**
ಇಂದಿನ ದಿನಮಾನದಲ್ಲಿ ಯುವಕರು ದುಶ್ಚಟಗಳಿಗೆ ಬಲಿಯಾಗದೇ ಕಿನ್ನಾಳ ಗ್ರಾಮದ ಯುವಕರಂತೆ ಮಾದರಿಯಾಗಬೇಕೆಂದು ಜಿಲ್ಲಾ ಪ್ರಧಾನ ಹಾಗು ಸತ್ರ ನ್ಯಾಯಾಧೀಶರಾಧ ಚಂದ್ರಶೇಖರ ಸಿ ಕರೆ ನೀಡಿದರು.

ಕಿನ್ನಾಳ ಗ್ರಾಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗು ಕಿನ್ನಾಳ ಗ್ರಾಮ ಪಂಚಾಯತಿ ಮತ್ತು ಅಲ್ಟ್ರಾಟ್ರೆಕ್ ಸಿಮೆಂಟ್ ಕಂಪನಿ, ಕಲ್ಯಾಣಿ ಸ್ಟೀಲ್ ಕಂಪನಿ ವತಿಯಿಂದ ಆಯೋಜಿಸಿದ್ದ ಕಿನ್ನಾಳ ಗ್ರಾಮದ ಅಂಗನವಾಡಿಗಳಿಗೆ ಪೀಠೋಪಕರಣಗಳ ವಿತರಣೆ ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿದರು. ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಉತ್ತಮ ಶಿಕ್ಷಣ ಒದಗಿಸುವಲ್ಲಿ ಪಾಲಕರ ಜವಾಬ್ದಾರಿಯಾಗಿದ್ದು ಅವರ ನಡೆ ನುಡಿ ಮತ್ತು ಕಾರ್ಯಚಟುವಟಿಕೆಗಳ ಬಗ್ಗೆ ಗಮನಹರಿಸಬೇಕೆಂದರು. ಕಿನ್ನಾಳ ಗ್ರಾಮದ ಯುವಕರ ಒಂದು ನಿರ್ಧಾರದಿಂದ ಗ್ರಾಮದ ಚಿತ್ರಣ ಬದಲಿಸಬಹುದೆಂಬ ಒಂದು ಉತ್ತಮ ನಿರ್ದಶನವಾಗಿದೆ ಎಂದರು. ಅನೇಕ ಇಲಾಖೆಗಳ ಸಹಯೋಗದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತಹ ಅದಾಲತ್ ಜರುಗಿಸಿ ಗ್ರಾಮವು ಅಭಿವೃದ್ಧಿಯತ್ತ ಮುನ್ನುಗ್ಗುತ್ತಿದ್ದು ಕೆಲವೇ ದಿನಗಳಲ್ಲಿ ಕೊಪ್ಪಳ ಜಿಲ್ಲೆಗೆ ಮಾದರಿ ಗ್ರಾಮವಾಗುವದರಲ್ಲಿ ಸಂದೇಹವಿಲ್ಲ ಎಂದರು. ಗ್ರಾಮದ ಅನೇಕ ಅಂಗನವಾಡಿಗಳಿಗೆ ಭೇಟಿ ನೀಡಿದಾಗ ಮಕ್ಕಳಿಗೆ ಪೀಠೋಪಕರಣಗಳು ಅವಶ್ಯವಿರುವ ಕುರಿತು ಅಲ್ಲಿನ ಮೇಲ್ವಿಚಾರಕರು ಗಮನಕ್ಕೆ ತಂದರು. ಕಾರ್ಪೋರೆಟ್ ಸಮುದಾಯ ನಿಧಿಯಿಂದ ಮಕ್ಕಳಿಗೆ ಪೀಠೋಪಕರಣಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸಿದಾಗ ಕಂಪನಿಯಿಂದ ಉತ್ತಮ ಸ್ಪಂದನೆ ದೊರೆತ ಫಲವಾಗಿ ಗ್ರಾಮದ ಎಲ್ಲಾ ಅಂಗನವಾಡಿ ಮಕ್ಕಳಿಗೆ ಅನುಕೂಲವಾಯಿತು ಎಂದು ಖುಷಿ ವ್ಯಕ್ತಪಡಿಸಿದರು.

ಜಿಲ್ಲಾಧಿಕಾರಿ ಡಾ॥ ಸುರೇಶ ಬಿ ಇಟ್ನಾಳ್ ಮಾತನಾಡಿ ಗ್ರಾಮದ ಅಭಿವೃದ್ಧಿ ಯಾಗಬೇಕಾದರೆ ಕೇವಲ ಅಧಿಕಾರಿಗಳಿಂದ ಸಾಧ್ಯವಿಲ್ಲ ಗ್ರಾಮಸ್ಥರು, ಯುವಕರು ಮತ್ತು ಆಡಳಿತ ಮಂಡಳಿಯ ಸಹಯೋಗದಿಂದ ಗ್ರಾಮದ ಚಿತ್ರಣವನ್ನು ಬದಲಿಸಬಹುದು.

ಅಂಗನವಾಡಿ ಮಕ್ಕಳಿಗೆ ಪಿಠೋಪಕರಣಗಳನ್ನು ವಿತರಿಸಿರುವದು ಮಕ್ಕಳಿಗೆ ಅನುಕೂಲವಾಗಲಿದೆ ಎಂದರು.

ಜಿಲ್ಲಾ ನ್ಯಾಯಾಧೀಶರು ಕಿನ್ನಾಳ ಗ್ರಾಮದ ದತ್ತು ತೆಗೆದುಕೊಂಡಿರುವಂತೆ ಮುಂದಿನ ದಿನದಲ್ಲಿ ಬೇ–ರೊಂದು ಗ್ರಾಮವನ್ನು ದತ್ತು ಪಡೆದು ಅಭಿವೃದ್ಧಿಪಡಿಸುವಂತೆ ಕರೆ ನೀಡಿದರು. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಮಾತನಾಡಿ ಗ್ರಾಮಕ್ಕೆ ಅವಶ್ಯವಿರುವ ಕೆಲಸಗಳನ್ನು ಇಲಾಖೆಯಿಂದ ಒದಗಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವದು ಎಂದರು. ಮಹಾತ್ಮಾ ನರೇಗಾ ಯೋಜನೆಯಡಿ ಗ್ರಾಮಕ್ಕೆ ಚರಂಡಿ, ಸಿಸಿ ರಸ್ತೆ, ಶಾಲಾಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಿಸಲು ರೂ.1.55 ಕೋಟಿ ಕ್ರಿಯಾಯೋಜನೆ ಅನುಮೋದಿಸಿದ್ದು ಎಲ್ಲಾ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದರು. ಇದೇ ಸಂದರ್ಭದಲ್ಲಿ 12 ಅಂಗನವಾಡಿ ಕೇಂದ್ರ ಹಾಗು ಕುವೆಂಪು ಶಾಲೆಯ ಎಲ್ ಕೆ ಜಿ ಹಾಗು ಯುಕೆಜಿ ಮಕ್ಕಳಿಗೆ ಕಾರ್ಪೋರೆಟ್ ಸಮುದಾಯ ನಿಧಿಯಿಂದ ಪಿಠೋಪಕರಣಳಾದ ಚೇರ್, ಟೆಬಲ್, ಶುದ್ದ ಕುಡಿಯುವ ನೀರಿನ ಘಟಕ ಕಲ್ಯಾಣಿ ಸ್ಟೀಲ್ಸ್, ಅಲ್ಟ್ರಾಟೆಕ್ ಸಿಮೆಂಟ್ ಕಂಪನಿಯವರನ್ನು ಸನ್ಮಾನಿಸಲಾಯಿತು. ಪಂಚಾಯತ ಅಭಿವೃದ್ಧಿ ಅಧಿಕಾರಿ ಪರಮೇಶ್ವರಯ್ಯ ತೆಳಗಡೆಮಠ ಕಾರ್ಯಕ್ರಮ ನಿರ್ವಹಿಸಿದರು. ಕಾರ್ಯಕ್ರಮದ ವಂದನಾರ್ಪಣೆಯನ್ನು ಹಿರಿಯ ಶ್ರೇಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾಂತೇಶ ಎಸ್ ದರಗದ ನಿರ್ವಹಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಶ್ರೇಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾಂತೇಶ ಎಸ್ ದರಗದ, ಗ್ರಾಮ ಪಂಚಾಯತ ಅಧ್ಯಕ್ಷೆ ಶ್ವೇತಾ ರಾಘವೇಂದ್ರ ಡಂಬಳ, ಉಪಾಧ್ಯಕ್ಷ ದುರಗಪ್ಪ ಡಂಬರ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿ ಹರಿಶಂಕರ್, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೋಹಿಣಿ ಕೊಟಗಾರ, ಪಂಚಾಯತ ಅಭಿವೃದ್ಧಿ ಅಧಿಕಾರಿ ಪರಮೇಶ್ವರಯ್ಯ ತೆಳಗಡೆಮಠ, ದ್ವಿತಿಯ ದರ್ಜೆ ಲೆಕ್ಕ ಸಹಾಯಕ ತಾಜುದ್ದಿನ್, ಗ್ರಾಮ ಪಂಚಾಯತ ಆಡಳಿತ ಮಂಡಳಿಯ ಎಲ್ಲಾ ಸದಸ್ಯರು ಶಾಲಾ ಮತ್ತು ಅಂಗನವಾಡಿ ಮಕ್ಕಳು, ಅಂಗನವಾಡಿ ಕಾರ್ಯಕರ್ತೆಯರು ಶಾಲಾ ಮುಖ್ಯೋಪಾಧ್ಯಾಯರು, ಗ್ರಾಮಸ್ಥರು, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ಇಪಿಎಫ್‌ಓ: ಸೆ.15 ರಂದು ಪಿಂಚಣಿ ಅದಾಲತ್

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**
ಸೆ.04–ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಸೆಪ್ಟಂಬರ್ 15 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇ–ರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ.

ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ–ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಸೆಪ್ಟಂಬರ್ 10 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392–268943 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೆಡ್ಡಿ ಜನಸಂಘ ಶತಮಾನೋತ್ಸವಕ್ಕೆ ಲಕ್ಷ ಲಕ್ಷ ಜನರು– ಶ್ರೀ ವೇಮಾನಂದ ಸ್ವಾಮೀಜಿಗಳು



**ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**
:1925 ರಲ್ಲಿ ಸ್ಥಾಪನೆಯಾಗಿ, ಲಕ್ಷ ಲಕ್ಷ ಜನರ ಬಾಳಲ್ಲಿ ಬೆಳಕಾಗಿರುವ ಕರ್ನಾಟಕ ರೆಡ್ಡಿಜನ ಸಂಘಕ್ಕೆ ಈಗ ಶತಮಾನದ ಸಂಭ್ರಮ, ಈ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಸೆ. 24 ರಂದು ರೆಡ್ಡಿಜನ ಸಂಘ ಶತಮಾನೋತ್ಸವ ಕಾರ್ಯಕ್ರಮಕ್ಕೆ ಲಕ್ಷ ಲಕ್ಷ ಸಂಖ್ಯೆಯಲ್ಲಿ ಭಾಗವಹಿಸು ಮೂಲಕ ಯಶಸ್ವಿ ಮಾಡೋಣ ಎಂದು ಹರಿಹರ ಎರೆಹೊಸಳ್ಳಿ ರೆಡ್ಡಿ ಗುರುಪೀಠದ ಶ್ರೀ ವೇಮಾನಂದ ಸ್ವಾಮೀಜಿಗಳು ಕರೆ ನೀಡಿದ್ದಾರೆ.

ಕೊಪ್ಪಳ ನಗರದ ಕಿನ್ನಾಳ ರಸ್ತೆಯಲ್ಲಿರುವ ಶ್ರೀ ಶಿವಶರಣೆ ಹೇರಮಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಗುರುವಾರ ಸಂಜೆ ರೆಡ್ಡಿಜನ ಸಂಘದ ಶತಮಾನೋತ್ಸವ ಪೂರ್ವಭಾವಿ ಸಭೆಯಲ್ಲಿ ಸಾನಿಧ್ಯವಹಿಸಿ ಅವರು ಮಾತನಾಡಿದರು.

ರೆಡ್ಡಿಜನಸಂಘ ಹುಟ್ಟಿಕೊಂಡಿರುವುದೇ ರೆಡ್ಡಿ ಸಮುದಾಯದ ಕಲ್ಯಾಣಕ್ಕಾಗಿ. ನೂರು ವರ್ಷಗಳಲ್ಲಿ ಲಕ್ಷ ಲಕ್ಷ ಜನರ ಬಾಳಲ್ಲಿ ಬೆಳಕಾಗಿದೆ. ಶಿಕ್ಷಣ ಸಂಸ್ಥೆಗಳ ಮೂಲಕ ಕ್ರಾಂತಿಯನ್ನೇ ಮಾಡಿದೆ. ಅಷ್ಟೇ ಅಲ್ಲಾ, ಬೆಂಗಳೂರಿನಂತ ನಗರ ಪ್ರದೇಶದಲ್ಲಿ ರೆಡ್ಡಿ ಹಾಸ್ಟೆಲ್ ಮಡಿ, ವಾಸಕ್ಕೆ ಮತ್ತು ಪ್ರಸಾದಕ್ಕೆ ಅವಕಾಶ ನೀಡುವ ಮೂಲಕ ವಿದ್ಯಾರ್ಥಿಗಳು ಜೀವನ ಬೆಳಗುವುದಕ್ಕೆ ಕಾರಣವಾಗಿದೆ.

ಕೇವಲ ಶಿಕ್ಷಣ ಅಷ್ಟೇ ಅಲ್ಲಾ, ಸಾಕಷ್ಟು ಸಮಾಜದ ಕಾರ್ಯಗಳನ್ನು ಮಾಡಲಾಗಿದೆ. ಇಂಥದ್ದೊಂದು ಸಂಘ ನೂರು ವರ್ಷಗಳನ್ನು ಪೂರೈಕೆ ಮಾಡಿದ ಹಿನ್ನೆಲೆಯಲ್ಲಿ ರೆಡ್ಡಿಜನಸಂಘವನ್ನು ರಾಜ್ಯವ್ಯಾಪ್ತಿ ವಿಸ್ತರಣೆ ಮಾಡಿ, ರಾಜ್ಯದ ಪ್ರತಿ ಜಿಲ್ಲಾಕೇಂದ್ರದಲ್ಲಿಯೂ ರೆಡ್ಡಿಜನಸಂಘದ ಮೂಲಕ ಶಿಕ್ಷಣ ಸಂಸ್ಥೆಗಳನ್ನು ತೆರೆಯಲು ಯೋಜನೆ ರೂಪಿಸಿ, ನೂರು ವರ್ಷಗಳ ಸವಿನೆನಪಿಗಾಗಿ ಅಂಥ ಮಹಾನ ಕಾರ್ಯಕ್ಕೆ ಚಾಲನೆ ನೀಡಲಾಗುತ್ತದೆ. ಹೀಗಾಗಿ, ಇಂಥ ಮಹಾನ್ ಶತಮಾನೋಮತ್ಸವ ಕಾರ್ಯಕ್ರಮದಲ್ಲಿ ಲಕ್ಷ ಲಕ್ಷ ಸಂಖ್ಯೆಯಲ್ಲಿ ರಾಜ್ಯದ ಮೂಲೆ ಮೂಲೆಯಿಂದಲೂ ಬಂದು ಭಾಗವಹಿಸುವ ಮೂಲಕ ನಮ್ಮ ಸಂಘಟನೆಯ ಬಲ ಪ್ರದರ್ಶನ ಮಾಡಬೇಕಾಗಿದೆ.

ಹೀಗಾಗಿ, ಕೊಪ್ಪಳ ಜಿಲ್ಲೆಯಲ್ಲಿಯೂ ರೆಡ್ಡಿ ಸಮಾಜ ಬಲಿಷ್ಠವಾಗಿದ್ದು, ದೊಡ್ಡ ಸಂಖ್ಯೆಯಲ್ಲಿ ಇದೆ. ಇಲ್ಲಿ ರಡ್ಡಿ ಜನಾಂಗ ಸದಾ ಕಲ್ಯಾಣಕಾರ್ಯಕ್ರಮ ಮಾಡುತ್ತಾ, ಒಗ್ಗಟ್ಟು ಪ್ರದರ್ಶನ ಮಾಡುತ್ತಿದೆ. ಇಲ್ಲಿಂದಲೂ ಸೆ. 24 ರಂದು ನಡೆಯುವ ರೆಡ್ಡಿಜನ ಸಂಘದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಿದರು.

ಕರ್ನಾಟಕ ರೆಡ್ಡಿ ಜನಸಂಘದ ರಾಜ್ಯ ಉಪಾಧ್ಯಕ್ಷ ಲಕ್ಷ್ಮಣರಡ್ಡಿ, ನಿರ್ದೇಶಕರಾದ ಬಾಬುರೆಡ್ಡಿ, ರಾಜಾರೆಡ್ಡಿ, ಎಂ.ಸಿ.ಪ್ರಭಾಕರೆಡ್ಡಿ, ಎಂ. ಕೃಷ್ಣಾರಡ್ಡಿ, ರಡ್ಡಿ ಸಮಾಜದ ಕೊಪ್ಪಳ ಜಿಲ್ಲಾಧ್ಯಕ್ಷ ಜಗದೀಶಪ್ಪ ಸಿಂಗನಾಳ, ಆರ್. ಪಿ. ರಡ್ಡಿ, ಆನಂದರಡ್ಡಿ, ಪ್ರಭು ಹೆಬ್ಬಾಳ, ವೆಂಕನಗೌಡ, ಮನೋಹರಗೌಡ, ಎಸ್. ಬಿ. ನಾಗರಳ್ಳಿ, ನವೋದಯ ವಿರುಪಾಕ್ಷಪ್ಪ, ದೇವಪ್ಪ ಅರಿಕೇರಿ, ಹನುಮರಡ್ಡಿ ಹಂಗನಕಟ್ಟಿ, ವೆಂಕಾರಡ್ಡಿ ವಕೀಲರು ಮೊದಲಾದವರು ಇದ್ದರು.

### ಬಳ್ಳಾರಿ: ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ 13ನೇ ವಾರ್ಷಿಕ ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್ ಕರೆ

# ವಿಶ್ವವಿದ್ಯಾಲಯಗಳು ಗುಣಮಟ್ಟದ ಶಿಕ್ಷಣ ಒದಗಿಸುವುದರ ಜೊತೆಗೆ ಪರಿಸರ ಸಂರಕ್ಷಣೆ, ಸ್ವಚ್ಛತಾ ಅಭಿಯಾನ ಕೈಗೊಳ್ಳಿ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**
ಸೆ.04–ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಒದಗಿಸುವುದರ ಜೊತೆಗೆ ಪರಿಸರ ಪ್ರಚಾರ ಮತ್ತು ಸಂರಕ್ಷಣೆಯ ಕಡೆಗೆ ಸಕ್ರಿಯ ಪ್ರಯತ್ನಗಳನ್ನು ಮಾಡಬೇಕು ಎಂದು ಕರ್ನಾಟಕದ ರಾಜ್ಯದ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಥಾವರಚಂದ್ ಗೆಹ್ಲೋಟ್ ಅವರು ಹೇಳಿದರು.




ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ 13ನೇ ವಾರ್ಷಿಕ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಶ್ವವಿದ್ಯಾಲಯದ ಆವರಣವನ್ನು ಸ್ವಚ್ಛವಾಗಿಡಲು ಒಂದು ಅಥವಾ ಎರಡು ತಿಂಗಳಿಗೊಮ್ಮೆ ಸ್ವಚ್ಛತಾ ಅಭಿಯಾನ ನಡೆಸಬೇಕು ಎಂದರು.

ಡಾ.ಸರ್ವಪಲ್ಲಿರಾಧಾಕೃಷ್ಣನ್ ಅವರು ಹೇಳಿರುವಂತೆ "ರಾಷ್ಟ್ರಗಳು ಶಿಕ್ಷಣ ಸಂಸ್ಥೆಗಳಲ್ಲಿನಿರ್ಮಿಸಲ್ಪಟ್ಟಿವೆ" ಎಂಬ ಈ ಚಿಂತನೆಯನ್ನು ಮನಸ್ಸಿನಲ್ಲಿಟ್ಟುಕೊಂಡು, ವಿಶ್ವವಿದ್ಯಾಲಯಗಳನ್ನು ಶ್ರೇಷ್ಠತೆಯ ಸಂಸ್ಥೆಗಳನ್ನಾಗಿ ಮಾಡುವುದು ನಮ್ಮ ಗುರಿಯಾಗಿರಬೇಕು. ಇದಕ್ಕಾಗಿ ವಿಶ್ವವಿದ್ಯಾಲಯಗಳನ್ನು ನಾವೀನ್ಯತೆ, ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳ ಕೇಂದ್ರವನ್ನಾಗಿ ಮಾಡುವ ಮತ್ತು ಅಂತರ–ಶಿಸ್ತಿನ ಹಾಗೂ ಅಂತರ–ವಿಶ್ವವಿದ್ಯಾಲಯ ಸಹಯೋಗವನ್ನು ಉತ್ತೇಜಿಸುವ ಕಡೆಗೆ ಕೆಲಸ ಮಾಡುವ ಅವಶ್ಯಕತೆಯಿದೆ ಎಂದರು. 21 ನೇ ಶತಮಾನದ ಅಗತ್ಯವೆಂದರೆ ಡಿಜಿಟಲ್ ಸಾಕ್ಷರತೆ, ನವೀನ ಚಿಂತನೆ, ಜಾಗತಿಕ ದೃಷ್ಟಿಕೋನ ಮತ್ತು ಸಾಮಾಜಿಕ ಜವಾಬ್ದಾರಿಯ ಬಗ್ಗೆ ಜ್ಞಾನ ಬೆಳೆಸಿಕೊಳ್ಳಬೇಕು. ಇದಕ್ಕಾಗಿ, ಜೀವನಪರ್ಯಂತ ವಿದ್ಯಾರ್ಥಿಯಾಗುವ ಮೂಲಕ ಕಲಿಯುತ್ತಲೇ ಇರಬೇಕಾಗುತ್ತದೆ. ಆತ್ಮನಿರ್ಭರ ಭಾರತದ ಮೂಲಕ 2047ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತವಾಗಲು ಯುವಕರು ತಮ್ಮ ಪ್ರತಿಭೆ, ನಾವೀನ್ಯತೆ ಮತ್ತು ಉದ್ಯಮಶೀಲತೆಯ ಮೂಲಕ ಸಮಾಜಕ್ಕೆ ಹೊಸದಿಕ್ಕನ್ನು ನೀಡಬೇಕು. ಯುವಪೀಳಿಗೆ ಉದ್ಯೋಗಾಕಾಂಕ್ಷಿಯಾಗಿ ಬದಲಾಗಿ ಉದ್ಯೋಗ ಒದಗಿಸುವವರ ಪಾತ್ರವನ್ನು ನಿರ್ವಹಿಸಬೇಕು ಎಂದು ಸಲಹೆ ನೀಡಿದರು. ನಮ್ಮ ದೇಶ ಸಾವಿರಾರು ವರ್ಷಗಳಿಂದ ಜ್ಞಾನದ ದೀಪವನ್ನು ಬೆಳಗಿಸುತ್ತಿದೆ, ವೇದಗಳು, ಉಪನಿಷತ್ತುಗಳು, ಆಯುರ್ವೇದ, ಯೋಗ, ವಾಸ್ತು, ತತ್ವಶಾಸ್ತ್ರ, ನ್ಯಾಯಶಾಸ್ತ್ರ ಇವು ನಮ್ಮ ಅಮೂಲ್ಯ ಪರಂಪರೆ. ಹೊಸ ಶಿಕ್ಷಣ ನೀತಿಯು ಶಿಕ್ಷಣ ವ್ಯವಸ್ಥೆಯಲ್ಲಿ ಅವುಗಳಿಗೆ ಮತ್ತೆ ಸ್ಥಾನ ನೀಡಿದೆ. ಯುವಕರು ಈ ಜ್ಞಾನದ ಹರಿವುಗಳನ್ನು ಆಧುನಿಕ ಸಂದರ್ಭದಲ್ಲಿ ಅರ್ಥಮಾಡಿಕೊಳ್ಳಬೇಕು, ಸಂಶೋಧನೆ ಮಾಡಬೇಕು ಮತ್ತು ಜಾಗತಿಕ ವೇದಿಕೆಯಲ್ಲಿ ಪ್ರಸ್ತುತಪಡಿಸಬೇಕು ಎಂದು ಕಿವಿಮಾತು ಹೇಳಿದರು.

ಭಾರತ 'ವಿಶ್ವ ಗುರು' ಆಗುವತ್ತ ಪಯಣದಲ್ಲಿದೆ. ಇಂದು, ದೇಶವು 100 ಕ್ಕೂ ಹೆಚ್ಚು ಯುನಿಕಾರ್ನ್ ಸ್ಟಾರ್ಟ್ ಆಪ್ ಗಳನ್ನು ಹೊಂದಿದೆ. ಭಾರತದ ಡಿಜಿಟಲ್ ಪಾವತಿ ವ್ಯವಸ್ಥೆಯು ವಿಶ್ವದ ಅತ್ಯಂತ ಶಕ್ತಿಶಾಲಿ ವ್ಯವಸ್ಥೆಯಾಗಿದೆ ಮತ್ತು ಚಂದ್ರಯಾನದಿಂದ ಎಐ ವರೆಗಿನ ಪ್ರತಿಯೊಂದು ಕ್ಷೇತ್ರದಲ್ಲೂ ನಾವು ಪ್ರಮುಖ ಪಾತ್ರ ವಹಿಸುತ್ತಿದ್ದೇವೆ. ಈ ಪ್ರಯಾಣದಲ್ಲಿ ಪ್ರಮುಖ ಶಕ್ತಿ ನಿಮ್ಮಂತಹ ಯುವಕರು ಎಂದು ಹೇಳಿದರು. "ಎದ್ದೇಳಿ, ಎಚ್ಚರಗೊಳ್ಳಿ ಮತ್ತು ಗುರಿ ಸಾಧಿಸುವವರೆಗೆ ನಿಲ್ಲಬೇಡಿ" ಸ್ವಾಮಿ ವಿವೇಕಾನಂದರ ಈ ವಾಕ್ಯದಿಂದ ಸ್ಫೂರ್ತಿ ಪಡೆದು, ನಮ್ಮ ಜ್ಞಾನವನ್ನು ಕಾರ್ಯರೂಪಕ್ಕೆ ತರಬೇಕು ಮತ್ತು ರಾಷ್ಟ್ರವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ನಮ್ಮ ಕೌಶಲ್ಯಗಳನ್ನು ಬಳಸಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಬಳ್ಳಾರಿಯು ಪ್ರಾಚೀನ ಕಾಲದಿಂದಲೂ ಬಹಳ ಭವ್ಯವಾದ ಇತಿಹಾಸವನ್ನು ಹೊಂದಿದೆ. ಈ ವಿಶ್ವವಿದ್ಯಾಲಯವು ಕಲೆ, ಸಾಹಿತ್ಯ ಮತ್ತು ಶಿಕ್ಷಣದ ಭೂಮಿಯಾಗಿದೆ. ರಾಜ ಶ್ರೀ ಕೃಷ್ಣದೇವರಾಯನು ತನ್ನ ಪ್ರಜೆಗಳ ಕಡೆಗೆ ತೋರಿಸಿದ ಔದಾರ್ಯ ಮತ್ತು ದಯೆಗಾಗಿ ಪ್ರಸಿದ್ಧವಾಗಿದ್ದ ಐತಿಹಾಸಿಕ ಭೂಮಿಯಲ್ಲಿ ನೆಲೆಗೊಂಡಿದೆ. ಈ ಘಟಿಕೋತ್ಸವದಲ್ಲಿ ಡಾ.ವಸುಂಧರಾ ಭೂಪತಿ, ಬಿ.ನಾಗನಗೌಡ ಮತ್ತು ಇರ್ಫಾನ್ ರಜಾಕ್ ಅವರಿಗೆ ಶಿಕ್ಷಣ, ಸಾಹಿತ್ಯ, ಆರೋಗ್ಯ ಮತ್ತು ಸಾಮಾಜಿಕ ಕಾರ್ಯ ಕ್ಷೇತ್ರದಲ್ಲಿ ತಮ್ಮ ಅತ್ಯುತ್ತಮ ಕೆಲಸಕ್ಕಾಗಿ ಗೌರವ ಪದವಿಗಳನ್ನು ನೀಡಿ ಗೌರವಿಸಲಾಗಿದೆ. ಅವರು ಸಮಾಜ, ಜನರು ಮತ್ತು ರಾಷ್ಟ್ರದ ಹಿತದೃಷ್ಟಿಯಿಂದ ಕೆಲಸ ಮಾಡುವುದನ್ನು ಮುಂದವರಿಸಲಿ ಎಂದು ಆಶಿಸಿದರು.

ನವದೆಹಲಿಯ ಇಂಟರ್ ಯುನಿವರ್ಸಿಟಿ ಎಕ್ಸಲರೇಟರ್ ನ ನಿರ್ದೇಶಕರಾದ ಪ್ರೊ.ಅವಿನಾಶ್ ಚಂದ್ರ ಪಾಂಡೆ ಅವರು ಘಟಿಕೋತ್ಸವ ಭಾಷಣದಲ್ಲಿ ಮಾತನಾಡಿ, ಘಟಿಕೋತ್ಸವವು ಕೇವಲ ಒಂದು ಸಮಾರಂಭವಲ್ಲ; ಇದು ಪ್ರತಿ ವಿದ್ಯಾರ್ಥಿಯ ಪರಿಶ್ರಮ, ಶಿಸ್ತಿನ ಜೀವನ ಮತ್ತು ನಿಶ್ಚಯ ಹಾದಿಯ ಫಲಶ್ರುತಿಯಾಗಿದೆ. ವಿದ್ಯಾರ್ಥಿಗಳ ಸಾಧನೆಗಳು ಭವಿಷ್ಯದ ಪೀಳಿಗೆಗೆ ಪ್ರೇರಣೆಯಾಗಬೇಕು ಎಂದು ಆಶಿಸಿದರು.

ಪೋಷಕರ ತ್ಯಾಗ ಮತ್ತು ಅಚಲ ಬೆಂಬಲವು ಮಕ್ಕಳ ಯಶಸ್ಸಿನ ಆಧಾರವಾಗಿದೆ. ಶಿಕ್ಷಕರ ಬೋಧನೆ, ಮಾರ್ಗದರ್ಶನ ಮತ್ತು ಪ್ರೇರಣೆಯಿಂದ ಇಂದಿನ ಯುವಕರು ತಮ್ಮ ಕನಸುಗಳನ್ನು ಸಾಕಾರಗೊಳಿಸುತ್ತಿದ್ದಾರೆ ಎಂದು ಅಭಿಮತ ವ್ಯಕ್ತಪಡಿಸಿದರು.

ಪದವಿಯೊಂದೇ ಅಂತಿಮ ಗುರಿಯಲ್ಲ, ಅದು ಜೀವನಪರ್ಯಂತ ಕಲಿಕೆಯ ಪಯಣದ ಹಂತ ಮಾತ್ರ. ವಿನಯವಂತಿಕೆ, ಹೊಂದಿಕೊಳ್ಳುವಿಕೆ ಮತ್ತು ನಿರಂತರ ಜ್ಞಾನಾರ್ಜನೆಯು ಸಮಾಜದಲ್ಲಿ ವಿಶಿಷ್ಟರನ್ನಾಗಿ ಮಾಡುತ್ತದೆ. ನಿಜವಾದ ಯಶಸ್ಸು ಸಂಪತ್ತಿನಲ್ಲಿಯಾಗಲಿ ಅಥವಾ ಹುದ್ದೆಗಳಲ್ಲಿ ಆಗಲಿ ಅಳೆಯಲು ಬರುವುದಿಲ್ಲ. ಅದು ನೀವು ನೀಡುವ ಕೊಡುಗೆಯ ಸಮಾಜದ ಮೇಲೆ ಬೀರಿದ ಸಕಾರಾತ್ಮಕ ಪ್ರಭಾವದಲ್ಲಿ ಅಳೆಯಲ್ಪಡುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವ ನಾಗರಾಜ.ಸಿ., ಕುಲಸಚಿವ (ಮೌಲ್ಯಮಾಪನ) ಪ್ರೊ.ಎನ್.ಎಂ.ಸಾಲಿ, ವಿಶ್ವವಿದ್ಯಾಲಯದ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತಿನ ಸದಸ್ಯರುಗಳು, ಎಲ್ಲ ನಿಕಾಯದ ಡೀನರು, ಮುಖ್ಯಸ್ಥರುಗಳು, ಸಂಯೋಜಕರುಗಳು, ವಿವಿಧ ಮಹಾವಿದ್ಯಾಲಯಗಳ ಪಾಂಶುಪಾಲರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಮುಂತಾದ ಗಣ್ಯರು ಹಾಜರಿದ್ದರು.

**3 ಜನರಿಗೆ ಗೌರವ ಡಾಕ್ಟರೇಟ್ ಪ್ರದಾನ:**
ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಇರ್ಫಾನ್ ರಜಾಕ್, ಡಾ.ವಸುಂಧರಾ ಭೂಪತಿ, ಬಾವಿಹಳ್ಳಿ ನಾಗನಗೌಡ ಸೇರಿ ಮೂರು ಮಹನೀಯರಿಗೆ ಗೌರವ ಡಾಕ್ಟರೇಟ್ ನೀಡಿ ರಾಜ್ಯಪಾಲರು ಗೌರವಿಸಿದರು.

ಘಟಿಕೋತ್ಸವದಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ವಿವಿಧ ವಿಭಾಗಗಳ 42 ವಿದ್ಯಾರ್ಥಿಗಳು 51 ಚಿನ್ನದ ಪದಕಗಳನ್ನು ಮುಡಿಗೇರಿಸಿಕೊಂಡರು. ವಿವಿಧ ವಿಭಾಗಗಳ ಒಟ್ಟು 59 ಸಂಶೋಧನಾರ್ಥಿಗಳು ಡಾಕ್ಟರೇಟ್ ಪದವಿ ಪಡೆದುಕೊಂಡರು.

ಎಲ್ಲ ವಿಭಾಗಗಳ ಸ್ನಾತಕ ಪದವಿಯ 80 ವಿದ್ಯಾರ್ಥಿಗಳು ಮತ್ತು ಸ್ನಾತಕೋತ್ತರ ಪದವಿಯಿಂದ 75 ವಿದ್ಯಾರ್ಥಿಗಳು ಸೇರಿ ಒಟ್ಟು 155 ವಿದ್ಯಾರ್ಥಿಗಳು ರ್‍ಯಾಂಕ್ ಪ್ರಮಾಣ ಪತ್ರಗಳನ್ನು ಪಡೆದುಕೊಂಡರು.

**04 ಚಿನ್ನದ ಪದಕ ಪಡೆದ ವಿದ್ಯಾರ್ಥಿ:**
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ವಾಣಿಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿ ಹಂಸ.ಎನ್ ಅವರು 04 ಚಿನ್ನದ ಪದಕಗಳನ್ನು ಪಡೆದುಕೊಂಡರು.

**03 ಚಿನ್ನದ ಪದಕ ಪಡೆದ ವಿದ್ಯಾರ್ಥಿ:**
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಔದ್ಯೋಗಿಕ ರಸಾಯನಶಾಸ್ತ್ರ ವಿಭಾಗದ ವಿದ್ಯಾರ್ಥಿ ರಾಜೇಶ್ವರಿ ಅವರು 03 ಚಿನ್ನದ ಪದಕಗಳನ್ನು ಪಡೆದುಕೊಂಡರು.

**02 ಚಿನ್ನದ ಪದಕ ಪಡೆದ ವಿದ್ಯಾರ್ಥಿಗಳು:**
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಭೌತಶಾಸ್ತ್ರ ವಿಭಾಗದ ಮನೋಜ್, ರಸಾಯನಶಾಸ್ತ್ರ ವಿಭಾಗದ ಸುಹಾನ ತಸ್ಲೀಮ್, ನಂದಿಹಳ್ಳಿಯ ಸ್ನಾತಕೋತ್ತರ ಕೇಂದ್ರದ ಸಮಾಜಕಾರ್ಯ ವಿಭಾಗದ ಶಿಲ್ಪ, ಬಿಬಿಸಿ ಕಾಲೇಜ್ ನ ಬಿಕಾಂ ವಿದ್ಯಾರ್ಥಿನಿ ವಿಷ್ಣುಪ್ರಿಯಾ ಮತ್ತು ವೀರಶೈವ ಮಹಾವಿದ್ಯಾಲಯದ ಬಿಎಸ್ಸಿ ವಿದ್ಯಾರ್ಥಿ ಮಹಮ್ಮದ್ ನಕೀಬಲಿ ಇವರುಗಳು ಪಡೆದು–ಕೊಂಡರು.

# ರಾಜಣ್ಣಗೆ ಮಂತ್ರಿ ಸ್ಥಾನ–ವಾಲ್ಮೀಕಿ ಸಮಾಜದ ಆಗ್ರಹ



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಸೆ.4–ಮಾಜಿ ಸಚಿವ ಕೆ.ಎನ್.ರಾಜಣ್ಣ ಅವರನ್ನು ಮರಳಿ ಮಂತ್ರಿಮಂಡಳಕ್ಕೆ ಸೇರಿಸಿಕೊಳ್ಳಬೇಕೆಂದು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಜಿಲ್ಲಾಧ್ಯಕ್ಷ ದ್ಯಾಮಣ್ಣ ಗಾಳಿ ಕಾಂಗ್ರೆಸ್ ವರಿಷ್ಠರನ್ನು ಆಗ್ರಹಿಸಿದ್ದಾರೆ.

ನಗರದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಶೋಷಿತ ಸಮುದಾಯಗಳ ಹಿರಿಯ ನಾಯಕ, ಮಾಜಿ ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರನ್ನು ವಜಾಗೊಳಿಸಿರುವುದು ಖಂಡನೀಯ ಎಂದರು.

ದಕ್ಷತೆ ಹಾಗೂ ಪ್ರಾಮಾಣಿಕತೆಯಿಂದ ಕೆಲಸ ಮಾಡುತ್ತಿದ್ದ ರಾಜಣ್ಣ ಪಕ್ಷ ನಿಷ್ಠರು. ಅವರನ್ನು ಮಂತ್ರಿಸ್ಥಾನದಿಂದ ತೆಗೆದಿರುವುದರಿಂದ ವಾಲ್ಮೀಕಿ ಸಮುದಾಯಕ್ಕೆ ದೊಡ್ಡ ಅನ್ಯಾಯವಾಗಿದೆ. 50 ವರ್ಷಗಳ ಸುದೀರ್ಘ ರಾಜಕೀಯದಲ್ಲಿದ್ದು ಅನುಭವ ಹೊಂದಿದವರು. ಎಸ್.ಟಿ.ಸಮುದಾಯದ ಧ್ವನಿಯಾಗಿ ಸಮುದಾಯವನ್ನು ವಿಶ್ವಾಸಕ್ಕೆ ತೆ–ಗೆದುಕೊಂಡು ಹೋಗುವ ಶಕ್ತಿಯುಳ್ಳವರು ಎಂದು ಹೇಳಿದ ದ್ಯಾಮಣ್ಣ ಗಾಳಿ, ತತಕ್ಷಣ ಕೆ.ಎನ್.ರಾಜಣ್ಣ ಅವರನ್ನು ಮರಳಿ ಸಚಿವರನ್ನಾಗಿ ಮಾಡಬೇಕು ಎಂದು ಒತ್ತಾಯಿಸಿದರು.

ಸಮಾಜದ ಮುಖಂಡ ಪ್ರಕಾಶ ನಾಯ್ಕರ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕಾದರೆ ರಾಜಣ್ಣವರೇ ಕಾರಣ. ಕಾಂಗ್ರೆಸ್ ಹಾಗೂ ಬಿಜೆಪಿಯಲ್ಲಿ ವಾಲ್ಮೀಕಿ ಜನಾಂಗವನ್ನು ತುಳಿಯುತ್ತಿದ್ದು ಸಮಾಜವು ಎಚ್ಚೆತ್ತುಕೊಳ್ಳಬೇಕಾಗಿದೆ. ಮುಖ್ಯಮಂತ್ರಿಗಳು ತಕ್ಷಣವೇ ರಾಜಣ್ಣ ಅವರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಬೇಕು ಇಲ್ಲದಿದ್ದರೆ ರಾಜ್ಯಾದ್ಯಂತ ಉಗ್ರಹೋರಾಟ ಮಾಡಲಾಗುವುದು. ಮಂತ್ರಿಮಂಡಳಕ್ಕೆ ಸೇರಿಸಲು ಆಗ್ರಹಿಸಿ ಜಿಲ್ಲೆಯಿಂದ ರಾಹುಲ್ ಗಾಂಧಿಯವರಿಗೆ ಒಂದು ಸಾವಿರ ಪತ್ರಗಳನ್ನು ರವಾನಿಸಿ ಮನವಿ ಮಾಡಲಾಗುವುದು ಎಂದರು. ಲಕ್ಷ್ಮಣ ಮಾಲಗಿ, ಬಸವರಾಜ ತಳವಾರ, ಹೇಮಂತ ಚೂರಿ, ಮಂಜುನಾಥ್ ದಳವಾಯಿ ಇದ್ದರು.

**ಶಹಾಪುರದ ಶೋಲಾಫೌಂಡೇಶನ್ ವತಿಯಿಂದ ಈದ್‌ಮಿಲಾದ್ ಪ್ರಯುಕ್ತ ವಿದ್ಯಾರ್ಥಿಗಳಿಗೆ ರಸಪ್ರಶ್ನೆ:**

# ಸೌಹಾರ್ದತೆಗೆ ಪ್ರವಾದಿ ಮೊಹಮ್ಮದರು ನೀಡಿದ ಸಂದೇಶ ಸರ್ವಕಾಲಕ್ಕೂ ಪ್ರಸ್ತುತ:




**ಮಲ್ಲಮ್ಮ ನುಡಿ ವಾರ್ತೆ ಶಹಾಪುರ**

ಸಾವಿರಾರು ವರ್ಷಗಳ ಹಿಂದೆ ಪ್ರವಾದಿ ಮಹಮ್ಮದರು ಪ್ರತಿಪಾದಿಸಿದ ಧರ್ಮ ಬೋಧನೆಯ ವಿಷಯಗಳು ಇಂದಿಗೂ ಪ್ರಸ್ತುತವಾಗಿವೆ, ಸಮಾಜದಲ್ಲಿ ಸಾಮರಸ್ಯ ಸೌಹಾರ್ದತೆಗೆ ಪ್ರವಾದಿಯವರು ನೀಡಿದ ಕೊಡುಗೆಗಳನ್ನು ಸ್ಮರಿಸಬೇಕು, ಈದ್‌ಮಿಲಾದ್ ಆಚರಣೆ ಶ್ರದ್ಧಾಭಕ್ತಿಯಿಂದ ಆಚರಿಸಬೇಕು ಎಂದು ಪೂಜ್ಯ ಹಜರತ್ ಶಾ ಮುಜೀಬುದ್ದೀನ್ ಸರಮಸ್ತ್ ಸಜ್ಜಾದೆ ನಶಿನ ಬಾರಗಾಹೆ ಹಜರತ್ ಸೈಯದ್‌ನಾ ಸೋಫಿ ಸರಮಸ್ತ್ ಸಗರ ತಿಳಿಸಿದರು.

ಈದ್‌ಮಿಲಾದ್ ಪ್ರಯುಕ್ತ ಮುಸ್ಲಿಂ ಶಾದಿ ಮಹಲ್‌ನಲ್ಲಿ ವಿದ್ಯಾರ್ಥಿಗಳಿಗಾಗಿ ರಸಪ್ರಶ್ನೆ ಕಾರ್ಯಕ್ರಮ ಆಯೋಜಿಸಿದ ಸಂದರ್ಭದಲ್ಲಿ ಮಾತನಾಡಿದರು.

ಈದ್‌ಮಿಲಾದ್ ಪ್ರಮುಖ ಆಯೋಜನೆ ಪ್ರತಿಭಾ ಕಾರ್ಯಕ್ರಮ, ಪವಿತ್ರ ಖುರಾನ್‌ಗೆ ಸಂಬಂಧಿಸಿದಂತೆ ರಸಪ್ರಶ್ನೆಗಳು, ಭಾಷಣ, ಸಂಭಾಷಣೆ, ಕಥೆ ಹೇಳುವುದು, ಮದರಸ ವಿದ್ಯಾರ್ಥಿಗಳು ಸೇರಿದಂತೆ ಇತರೆ ಶಾಲೆಯ ವಿದ್ಯಾರ್ಥಿಗಳು ಪಾಲ್ಗೊಂಡು ಪ್ರತಿಭೆ ಪ್ರದರ್ಶಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಸೈಯದ್ ಅಸ್ರಫ್ ಹುನೇಸ್ ಬರಾದಾರ ಸಜ್ಜಾದನಶೀನ ಬಾರಗಾಹೆ ಜಲಾಲೀಯಾ ಗೋಗಿ, ಶೋಲಾ ಫೌಂಡೇಶನ ಅಧ್ಯಕ್ಷ ಸೈಯದ್ ಜಿಯಾವುರ್ ರಹೆಮಾನ್ ಶೋಲಾ, ಸೈಯದ್ ಮಿಸ್‌ಬಾಹುರ ರಹೇಮಾನ, ಸೈಯದ್ ಚಂದಾಹುಸೇನಿ, ಸೈದುದ್ದೀನ್ ಖಾದ್ರಿ ಮಾತನಾಡಿದರು.

ಕಾರ್ಯಕ್ರಮದ ಆರಂಭದಲ್ಲಿ, ಕುರಾನ್ ಪಠಣ, ಹಮದ್ ಪದ್ಯ, ನಾಥ್ ಪ್ರಸತಪಡಿಸಿದರು. 9 ಶಾಲೆಗಳ ವಿದ್ಯಾರ್ಥಿಗಳನ್ನು, 11ಗುಂಪುಗಳಾಗಿ ವಿಂಗಡಿಸಲಾಗಿತ್ತು, ಮೂರು ಶಾಲೆಗಳು ಪ್ರಶಸ್ತಿ ಪಡೆದವು. ಮೊದಲನೇ ಬಹುಮಾನ 5000, ಎರಡನೇ ಬಹುಮಾನ 2500, ಮೂರನೇ ಬಹುಮಾನ 1000 ವಿತರಿಸಲಾಯಿತು. ರಸಪ್ರಶ್ನೆಯ ಮುಖ್ಯಸ್ಥರಾಗಿ ಶಿಕ್ಷಕ ಅಬ್ದುಲ್ ಖದೀರ, ಮುಕ್ತಾರ್ ಅಹ್ಮದ್, ಮಖಬುಲ್ ಅಹಮದ್, ಯುನುಸ್ ಖಾನ್, ಖಾಜಾ ಮೈನುದ್ದಿನ್, ಸಮೀರ್ ಅಹಮದ್ ವಹಿಸಿದ್ದರು, ವಿವಿಧ ಶಾಲೆ ಶಿಕ್ಷಕರು ಪಾಲ್ಗೊಂಡಿದ್ದರು.

# ಮೇರು ವ್ಯಕ್ತಿತ್ವದ ಡಾ. ಎಸ್. ರಾಧಾಕೃಷ್ಣನ್

ಸರಳ, ಸಜ್ಜನಿಕೆ, ಪಾಂಡಿತ್ಯಗಳನ್ನೊಳಗೊಂಡ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಈ ದೇಸ ಕಂಡ ಅತ್ಯುತ್ತಮ ತತ್ವಜ್ಞಾನಿ ಹಾಗೂ ಶಿಕ್ಷಕ, ತತ್ವಜ್ಞಾನಿ ಕುರಿತು ಅವರ ಪ್ರಖಾಂಡ ಪಾಂಡಿತ್ಯ ದೇಶ ವಿದೇಶಗಳಲ್ಲಿ ಜನ ಮೆಚ್ಚುಗೆಗಳಿಸಿತು. ಶಿಕ್ಷಕ ವೃತ್ತಿಗೆ ಪಾವಿತ್ರ್ಯತೆಯನ್ನು ತಂದು–ಕೊಟ್ಟ ಡಾ. ರಾದಾಕೃಷ್ಣನ್ ಅವರ ಜನ್ಮ ದಿನಾಚರಣೆಯ ಅಂಗವಾಗಿ ಈ ಲೇಖನ.



ತತ್ವಜ್ಞಾನಿಗಳು ಮಾತ್ರ ರಾಜ್ಯಕಾರ್ಯ ಭಾರ ಮಾಡಬೇಕು ಎಂದು ಹೇಳಿದ ಪ್ಲೇಟೋನ ವಿಚಾರಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ಭಾರತೀಯರೇನು ಹಿಂದೆ ಬಿದ್ದಿಲ್ಲಾ. 1967 ರಲ್ಲಿ ನಡೆದ ರಾಷ್ಟ್ರಪತಿ ಚುನಾವಣೆಯಲ್ಲಿ ಶೇ% 96.76 ರಷ್ಟು ಮತಗಳಿಂದ ಡಾ.ಎಸ್.ರಾಧಾಕೃಷ್ಣನ್ ಅವರನ್ನು ರಾಷ್ಟ್ರಪತಿಗಳಾಗಿ ಆಯ್ಕೆ ಮಾಡಲಾಯಿತು. ಇದಕ್ಕೆ ಮುಖ್ಯ ಕಾರಣ ಅವರೊಬ್ಬ ಮಹಾನ್ ತತ್ವಜ್ಞಾನಿ ಮತ್ತು ಆದರ್ಶ ಶಿಕ್ಷಕರು.

ಇವರು ಹುಟ್ಟಿದು 1888ನೇ ಇಸವಿ ಸೆಪ್ಟೆಂಬರ್ 5ರಂದು ದಕ್ಷಿಣ ಭಾರತದ 'ತಿರುತ್ತಣಿ' ಎಂಬ ಸಣ್ಣಹಳ್ಳಿಯಲ್ಲಿ, ನಮ್ಮ ಸಮಾಜದ ಆಧಾರಸ್ತಂಭಾ ಶಿಕ್ಷಕರು. ಅವರಿಗೆ ಗೌರವಸ್ಥಾನವಿರಬೇಕೆಂದು ಹಂಬಲಿಸದ ಅವರು ತಮ್ಮ ಹುಟ್ಟು ಹಬ್ಬವನ್ನು ಶಿಕ್ಷಕರ ದಿನಾಚರಣೆಯನಾಗಿ ಆಚರಿಸಲು ಕರೆ ಕೊಟ್ಟರು. ಬೆಳೆಯುವ ಸಿರಿ ಮೊಳಕೆಯಲ್ಲಿ ಎನ್ನುವಂತೆ ' ಬಾಲ್ಯದಲ್ಲಿಯೇ ಧರ್ಮ, ತತ್ವಜ್ಞಾನದ ಕಡೆಗೆ ಒಲವು ಹೆಚ್ಚು ಹುಟ್ಟೂರಿನಲ್ಲಿ ಪ್ರಾಥಮಿಕ ಶಿಕ್ಷಣ ತಿರುಪತಿ ವೇಲೂರ್, ಮದ್ರಾಸಗಳಲ್ಲಿ ಹೆಚ್ಚಿನ ಶಿಕ್ಷಣ ಪಡೆದರು. ತತ್ವಜ್ಞಾನದಲ್ಲಿ ಬಿ.ಎ. ಪದವಿಯನ್ನು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದರು. ಹುಟ್ಟಿನಿಂದ ಸಾಯುವರೆಗೆ ಮನುಷ್ಯರು ಅಧ್ಯಯನದಲ್ಲಿ ನಿರತರಾಗಬೇಕು ಎಂಬ ತತ್ವವನ್ನು ನುಡಿದು ನಡೆದು ತೋರಿಸಿದರು. ಗ್ರಂಥಗಳು ಅವರಿಗೆ ಮಿತ್ರರು ಪಾಶ್ಚಾತ್ಯ ಪಂಡಿತರೊಬ್ಬರು ಅಭಿಪ್ರಾಯದ ಪ್ರಕಾರ ಅವರ ಒಂದು ಕೈಯಲ್ಲಿ ಪುಸ್ತಕವಿರುತಂತೆ. ಹೀಗಿತ್ತು. ಅವರ ಬದುಕಿನ ಹವ್ಯಾಸ ಅವರ ಭಾಷಣವೆಂದರೆ ಅಮೃತಪಾನ ಗಂಗಾಜಲದಂತೆ. ಅದಕ್ಕೆ ತಡೆ ಎಂಬುದಿಲ್ಲಾ. ಅವರ ಲೇಖನಿಯ ಓದುಗರಿಗೆ ಚೇತನದ ಚಿಲುಮೆ. ಇವರ ಲೇಖನಗಳನ್ನು ಓದಿದ ಲೋಕಮಾನ್ಯರು ಸಹ ಇವರ ಮುಂದೆ ದೊಡ್ಡ ಲೇಖಕರಾಗುವಲ್ಲಿ ಸಂದೇಹನೆ ಇಲ್ಲ. ಎಂದು ಹೇಳಿದರು. ಅವರ ಈ ಮಾತು ಮುಂದೆ ಸತ್ಯವಾಯಿತು. ಇವರ ವಿದ್ವತ್ತನ ಮೆಚ್ಚಿ ಕಲ್ಕತ್ತಾ ವಿಶ್ವವಿದ್ಯಾಲಯ ಇವರನ್ನು ಪ್ರಾಧ್ಯಾಪಕರನ್ನಾಗಿ ನೇಮಿಸಿಕೊಂಡಿತು. ಭಾರತೀಯ ಸಂಸಕೃತಿಯ ಮೇಲೆ ಅಧಿಕಾರವಾಣಿಯಿಂದ ಮಾತನಾಡುವ ಸಾಮರ್ಥ್ಯ ವಿವೇಕಾನಂದರ ತರುವಾಯ ಇವರಿಗೆ ಮಾತ್ರ ಇದೆ ಎಂಬುದನ್ನು ನಂಬಿದ ವಿದೇಶಿಯರು ಇವರಿಗೆ ಉಪನ್ಯಾಸಗಳಿಗಾಗಿ ಆಹ್ವನಿಸುತ್ತಿದ್ದರು. 1926 ರಲ್ಲಿ ಇಂಗ್ಲೆಂಡಿನಲ್ಲಿ ಭಾಗವಹಿಸಿ ತಮ್ಮ ವಿದ್ವತ್ವವನ್ನು ಪ್ರದರ್ಶಿಸಿದರು. ಮುಂದೆ ಆಕ್ಷಡನಲ್ಲಿ ಹಿಂದೂಗಳ ಜೀವದೃಷ್ಟಿ ಎಂಬ ವಿಷಯದ ಮೇಲೆ ವಿದ್ವತ್ ಪೂರ್ಣ ವ್ಯಾಖ್ಯಾನ ಮಾಡಿ ಲೋಕ ವಿಖ್ಯಾತರಾದರು. ಬ್ರಿಟಾನಿಕಾ ವಿಶ್ವಕೋಶದಲ್ಲಿಯೂ ಸಹ ಇವರು ಲೇಖನಗಳನ್ನು ಬರೆದರು. ಪಾಂಡಿತ್ಯವೇ ಅವರ ಶ್ವಾಭಿಮಾನಕ್ಕೆ ಶ್ರೀರಕ್ಷೆಯಾಗಿತ್ತು. ಮೈಸೂರಿನಲ್ಲಿ ಪ್ರಾಧ್ಯಾಪಕರಾಗಿದ್ದಾಗ ಬ್ರಟಿಸ್ ಸರಕಾರದ ವೈಸರಾಯ್ ಬಂದಿದ್ದರು. ಎಲ್ಲಾ ಪ್ರಾಧ್ಯಾಪಕರು ಅವರನ್ನು ಭೇಟಿಯಾಗಲು ಹೋದರು. ಇವರು ಹೋಗಿರಲಿಲ್ಲ. ನೀವೇಕೆ ಬಂದಿಲ್ಲವೆಂದು ಸಹೋದ್ಯೋಗಿಗಳು ಕೇಳಿದರೆ ಓದುವದರಲ್ಲಿ ನಿರತನಾಗಿದ್ದೆ ಎಂದು ಉತ್ತರಿಸಿದರು. ಯಾರನ್ನದರು ಹೊಗಳುವುದಾಗಲಿ ತೆಗಳುವುದಾಗಲಿ ಮಾಡಲಿಲ್ಲ.

ಹಲವು ರಂಗಗಳಲ್ಲಿ ಸೇವೆ 1931 ರಲ್ಲಿ ಆಂಧ್ರ ವಿಶ್ವವಿದ್ಯಾಲಯ 1939ರಲ್ಲಿ ಬನಾರಸ್ ವಿಶ್ವವಿದ್ಯಾಲಯದ ಉಪಕುಲಪತಿಗಳಾಗಿ ಅವುಗಳ ಮೇಲೆಗಾಗಿ ಶ್ರಮಿಸಿದರು. ಘಟನಾ ಸಮಿತಿಯ ಸದಸ್ಯರಾಗಿ ವಿಶ್ವಸಂಸ್ಥೆಗೆ ಭಾರತೀಯ ನಿಯೋಗದ ಮುಖಂಡರಾಗಿ ಯುನೆಸ್ಕೋ ಕಾರ್ಯ ಸಮಿತಿಯ ಅಧ್ಯಕ್ಷರಾಗಿ ಹೀಗೆ ಹಲವಾರು ಕ್ಷೇತ್ರಗಳಲ್ಲಿ ತಮ್ಮ ಪಾಂಡಿತ್ಯ ಪರಿಮಳ ಪಸರಿಸಿದರು.

ಸ್ಟಾಲಿನ್ ಬೇಟಿ ರಷ್ಯಾದಲ್ಲಿ ರಾಯಭಾರಿಯಾಗಿ ಭಾರತೀಯ ಉಡುಪಿನಲ್ಲಿಯೇ ಮಾಸ್ಕೋಕ್ಕೆ ಹೋಗಿ ಧರ್ಮ ತತ್ವಗಳಿಂದ ದೂರಾಗಿದ್ದ ಸರ್ವಾಧಿಕಾರಿ ಸ್ಟಾಲಿನನಿಗೆ ಕ್ರೆಮ್ಲಿನ್ ಅರಮನೆಯಲ್ಲಿ ಪರಿಚಯ ಪತ್ರ ಕೋಡುತ್ತಾ ನೀವು ಬಲವನ್ನು ಉಪಯೋಗಿಸಿ ಈ ಅಧಿಕಾರ ಪಡೆದಿದ್ದೀರಿ. ಬಲದಿಂದಲೇ ಮತ್ತೋಬ್ಬನು ನಿಮ್ಮನ್ನು ಕೆಳಗಿಳಿಸಬಹುದು ದಲ್ಲವೇ? ಉಕ್ಕಿನ ಮನುಷ್ಯ ಸ್ಟಾಲಿನನಿಗೆ ಈ ರೀತಿ ನುಡಿಯಬೇಕಾದರೆ ಅವರಲ್ಲಿ ಎಂಥ ಎದೆಗರಿಕೆ ಇರಬೇಕು? ಮಹಾಜನರ ಮುಂದೆ ಕ್ರೂರ ಮನುಷ್ಯನು ಸಹ ಸಾಮಾನ್ಯನಾಗುವನು ಎಂಬುದಕ್ಕೆ ಇನ್ನೂ ಒಂದು ಉದಾಹರಣೆ ಉಂಟು. 1952ರಲ್ಲಿ ರಷ್ಯಾದಿಂದ ಮರಳುವಾಗ ಸ್ಟಾಲಿನನ್ನು ಕಂಡು ಆತನ ಗಲ್ಲದ ಮೇಲೆ ಕಯ್ಯಾಡಿಸಿ ನಿಮ್ಮ ಪ್ರಕೃತಿ ಹೇಗಿದೆ ? ಎಂದು ವಿಚಾರಿಸಿದರು. ರಾಧಾಕೃಷ್ಣನವರ ಸಹಾನೂಬೂತಿಯನ್ನು ಕಂಡ ಸ್ಟಾಲಿನನು ನೀವು ನನ್ನನ್ನು ರಾಕ್ಷಸನೆಂದು ಕಾಣದೇ ಮಾನವನಂತೆ ಕಂಡಿರುವಿರಿ. ಈ ರೀತಿ ನನ್ನನ್ನು ಕಂಡವರಿಲ್ಲ ಎಂದು ಸ್ಟಾಲಿನನು ಹೇಳಿದನು. 1952 ರಿಂದ 1962 ರವರೆಗೆ ಉಪರಾಷ್ಟ್ರಪತಿಯನ್ನಾಗಿ ವಿರೋಧ ಸದಸ್ಯರ ಮೆಚ್ಚುಗೆಯನ್ನು ಸಹ ಪಡೆದಿದ್ದರು. 1954ರಲ್ಲಿ ಭಾರತ ಸರ್ಕಾರ ಇವರಿಗೆ ಭಾರತ ರತ್ನ ಪ್ರಶಸ್ತಿ ನೀಡಿ ಗೌಆರವಿಸಿತ್ತು. ಅದೇ ರೀತಿಯಾಗಿ ಅನೇಕ ಅಂತರಾಷ್ಟ್ರೀಯ ಗೌರವಗಳು ಇವರಿಗೆ ಬಂದವು 1962ರಿಂದ 1972ರ ವರೆಗೆ ರಾಷ್ಟ್ರಪತಿಯಾಗಿ ಸೇವೆ ಸಲ್ಲಿಸಿದರು. ರಾಧಾಕೃಷ್ಣರವರು ರಾಷ್ಟ್ರಪತಿಯಾದದ್ದು, ತತ್ವಜ್ಞಾನಕ್ಕೆ ಸಿಕ್ಕ ಸನ್ಮಾನ ವಾದಂತಾಯಿತು. ಅವರ ಪಾಂಡಿತ್ಯ ದೇಶದ ಹಿತಕ್ಕೆ ವಿನಿಯೋಗವಾಯಿತು. 1975 ಏಪ್ರಿಲ್ 17 ರಂದು ಶಿವಸಾಯುಜ್ಯಗೈದರು. ಅವರ ಸಂದೇಶಗಳು ಸಮಸ್ತ ನಾಡಿಗೆ ವಿಶೇಷವಾಗಿ ಶಿಕ್ಷಣ ಸಮುದಾಯಕ್ಕೆ ದಾರಿದೀಪವಾಗಿದೆ. ಅವರ ವಿಶ್ವಬಂಧುತ್ವ ಕಲ್ಪನೆ, ಧಾರ್ಮಿಕ ಮತ್ತು ನೈತೀಕ ಕ್ರಾಂತಿಯಿಂದ ಸಂಕುಚಿತವನ್ನು ತೋರೆಯುವ ವಿಚರ ಅರ್ಥಪೂರ್ಣ, ಧರ್ಮವೂ ಮಾನವನನ್ನು ಪೂರ್ಣತ್ವಕ್ಕೆ ಒಯ್ಯುವುದು. ಒಳ್ಳೆಯ ಕೇಲಸವನ್ನು ಯಾವದೇ ಫಲಾಪೇಕ್ಷೆಯಿಲ್ಲದೇ ಮಾಡಬೇಕು. ನಮ್ಮ ಪ್ರಗತಿ ನಮ್ಮ ಪ್ರಯತ್ನವನ್ನು ಅವಂಲಬಿಸಿದೆ ಎಂದು ಸಾರಿದರು. ವಿದ್ಯಾರ್ಥಿಗಳು ಶಿಕ್ಷಕರನ್ನು ಅನುಕರಣೆ ಮಾಡುವರು. ಆದ್ದರಿಂದ ಶಿಕ್ಷಕರು ವಿದ್ಯಾರ್ಥಿಗಳಿಗೆ ಮಾದರಿಯಾಗಿರಬೇಕು. ವಿದ್ಯಾರ್ಥಿಗಳೂ ಪುಸ್ತಕಗಳಿಗಿಂತಲೂ ಶಿಕ್ಷಕರಿಂದಲೇ ಹೆಚ್ಚಿನ ವಿಷಯವನ್ನು ಕಲಿಯುವರು. ಹೀಗೆ ಸಮಸ್ತ ವಿದ್ಯಾರ್ಥಿ ಸಮುದಾಯದ ಭವಿಷ್ಯ ನಾಡಿನ ಭಾವಿ ಪ್ರಜೆಗಳ ಸರ್ವತೋಮುಖ ಅಭಿವೃದ್ಧಿ ಶಿಕ್ಷಕರ ಕೈಯಲ್ಲಿದೆ. ಅದಕ್ಕಾಗಿ ಶಿಕ್ಷಕರಿಗೆ ಸಮಾಜದಲ್ಲಿ ಗೌರವ ಸ್ಥಾನವಿರಬೇಕು. ಯಾವ ದೇಶದಲ್ಲಿ ಶಿಕ್ಷಕರಿಗೆ ಸ್ಥಾನಮಾನ ವಿಲ್ಲವೋ ಆ ದೇಶಕ್ಕೆ ಭವಿಷ್ಯವಿಲ್ಲವೆಂದು ಘಂಟಾಘೋಷವಾಗಿ ಸಾರಿದ ರಾಧಕೃಷ್ಣ ಅವರು ಈ ವಿಚಾರವನ್ನು ಸಮಾಜಕ್ಕೆ ತಿಳಿಸುವುದಕ್ಕಾಗಿಯೇ ತಮ್ಮ ಹುಟ್ಟುಹಬ್ಬವನ್ನು ಶಿಕ್ಷಕರ ದಿನಾಚರಣೆಯನ್ನಾಗಿ ಆಚರಿಸಲು ಕರೆ ಕೊಟ್ಟರು.



**ಲೇಖನ:– ಚಂದ್ರಕಾಂತ ಶಿವಬಸಯ್ಯಾ ಮಠಪತಿ ಕಲ್ಬುರ್ಗಿ ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತರು. ಹಾಗೂ ವಡ್ಡಾ ತಾಂಡಾದ ಸ.ಕಿ.ಪ್ರಾ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕರು .**

# ನೀರು ಶುದ್ಧೀಕರಣ ಘಟಕಕ್ಕೆ ಮೇಯರ್, ಉಪಮೇಯರ್ ಭೇಟಿ, ಪರಿಶೀಲನೆ



**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಸೆ.4–ನಗರ ಹೊರವಲಯದ ನಂದಿಕೂರ್ ಗ್ರಾಮದಲ್ಲಿರುವ ಒಳಚರಂಡಿ ನೀರು ಶುದ್ಧೀಕರಣ ಘಟಕಕ್ಕೆ ಮಹಾನಗರ ಪಾಲಿಕೆ ಮೇಯರ್ ವರ್ಷಾ ರಾಜೀವ ಜಾನೆ, ಉಪ ಮೇಯರ್ ತೃಪ್ತಿ ಎಸ್.ಲಾಖೆ ಮತ್ತು ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮೇಯರ್ ವರ್ಷಾ ಜಾನೆ ಅವರು ಈ ಸಂದರ್ಭದಲ್ಲಿ ಮಾತನಾಡಿ, ಒಳಚರಂಡಿ ನೀರನ್ನು ಪ್ರಾಥಮಿಕವಾಗಿ ಈ ಘಟಕದಲ್ಲಿ ಶುದ್ಧೀಕರಣಗೊಳಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ಅಭಿವೃದ್ಧಿ ಮಾಡಲಾಗುತ್ತದೆ. ಜೊತೆಗೆ ನಗರದ ಅಭಿವೃದ್ಧಿಗೂ ಹೆಚ್ಚಿನ ಒತ್ತು ನೀಡಲಾಗುವುದು ಹೇಳಿದರು. ಮುಂದೆ ಯಾವ ರೀತಿ ಯೋಜನೆಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಹಾಗು ಪಾಲಿಕೆಯ ಆಯುಕ್ತರ ಜೊತೆ ಚರ್ಚಿಸಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪಾಲಿಕೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಸೆಪ್ಟೆಂಬರ್ 8ರಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಸೆಪ್ಟೆಂಬರ್ 03: ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಯಾದಗಿರಿ ಹಾಗೂ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಇವರ ಸಂಯುಕ್ತಾಶಯದಲ್ಲಿ 2025–26ನೇ ಸಾಲಿನ ಯಾದಗಿರಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆಪ್ಟೆಂಬರ್ 8ರ ಬೆಳಿಗ್ಗೆ 9ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಪುರುಷರು ಮತ್ತು ಮಹಿಳೆ ಕ್ರೀಡಾಪಟುಗಳು ಆನ್‌ಲೈನ್ ಲಿಂಕ್ ವಿಳಾಸ: https://dasarac-mcup-2025.etrpindia.com/KA-sports ಅಥವಾ ಕ್ಯೂ ಆರ್ ಕೋಡ್: ಉಪಯೋಗಿಸಿಕೊಂಡು

ಜಿಲ್ಲಾ ಮಟ್ಟದಲ್ಲಿ ಕ್ರೀಡಾಕೂಟದಲ್ಲಿ ಭಾಗವಹಿಸಬಹುದಾಗಿದೆ.

ಷರತ್ತುಗಳು : ತಾಲ್ಲೂಕು ಮಟ್ಟದಲ್ಲಿ ವೈಯಕ್ತಿಕ ಮತ್ತು ಗುಂಪು ಆಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳು ಕಡ್ಡಾಯವಾಗಿ ನೋಂದಾಯಿಸಬೇಕು. ನೇರವಾಗಿ ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ವೈಯಕ್ತಿಕ ಮತ್ತು ಗುಂಪುಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಕಡ್ಡಾಯವಾಗಿ ಗುಂಪನ್ನು ರಚಿಸಿ ಗುಂಪಿನಲ್ಲಿ ನೋಂದಾಯಿಸತಕ್ಕದ್ದು, ಕ್ರೀಡಾಪಟುಗಳು ಕ್ರೀಡಾಕೂಟದ ಆನ್‌ಲೈನ್ ಅಥವಾ ಕ್ಯೂ–ಆರ್ ಕೋಡ್ ಮೂಲಕ ನೊಂದಾವಣೆ ಮಾಡಿಕೊಳ್ಳತಕ್ಕದ್ದು. ಆನ್ ಲೈನ್‌ನಲ್ಲಿ ನೋಂದಾವಣೆ ಮಾಡಿದ ಕ್ರೀಡಾಪಟುಗಳು ಕಡ್ಡಾಯವಾಗಿ ಸ್ವೀಕೃತಿ ಪ್ರತಿಯನ್ನು ಕ್ರೀಡಾಕೂಟ ಸಂಘಟಕರಿಗೆ ಕ್ರೀಡಾಕೂಟ ದಿನದಂದು ಮುಂಚಿತವಾಗಿ ಸಲ್ಲಿಸತಕ್ಕದ್ದು, ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸಬುಕ್ ಪ್ರತಿಯನ್ನು ಮೊಬೈಲ್ ನಂಬರೊಂದಿಗೆ ಕಡ್ಡಾಯವಾಗಿ ಆನ್‌ಲೈನ್ ನಲ್ಲಿ ಒದಗಿಸಬೇಕೆಂದು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆ: ಹೆಸರು ನೋಂದಣಿಗೆ ಸೂಚನೆ

**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಸೆ.04.–ಅಕ್ಟೋಬರ್ 01 ರಂದು ವಿಶ್ವ ಹಿರಿಯ ನಾಗರಿಕರ ದಿನಾಚಾರಣೆ ಅಂಗವಾಗಿ ಹಿರಿಯ ನಾಗರಿಕರಿಗಾಗಿ ಈ ಕೆಳಕಂಡಂತೆ ಜಿಲ್ಲಾ ಮಟ್ಟದ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ವಯೋಮಿತಿ (60 ರಿಂದ 69 ವರ್ಷ ಮತ್ತು 70 ವರ್ಷ ಹಾಗೂ ಮೇಲ್ಪಟ್ಟವರಿಗೆ) (ಪುರುಷ/ಮಹಿಳೆ) ಏಕಪಾತ್ರ ಅಭಿನಯ, ಗಾಯನ ಸ್ಪರ್ಧೆ ಸಾಂಸ್ಕೃತಿಕ ಸ್ಪರ್ಧೆಯನ್ನು ಹಾಗೂ ವಯೋಮಿತಿ (60 ರಿಂದ 70 ವರ್ಷ, 70ವರ್ಷ ಮೇಲ್ಪಟ್ಟವರಿಗೆ) (ಪುರುಷ/ಮಹಿಳೆ) ಬಿರುಸಿನ ನಡಿಗೆ, ಮ್ಯೂಸಿಕಲ್ ಚೇರ್ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಹಿರಿಯ ನಾಗರಿಕರು ವಯೋಮಿತಿ 60 ವರ್ಷ ಮೇಲ್ಪಟ್ಟ ವಯಸ್ಸಿನವರಾಗಿರಬೇಕು. ವಯಸ್ಸಿನ ದೃಢೀಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ದಾಖಲೆಯನ್ನು ಸಲ್ಲಿಸಬೇಕು. ಹಿರಿಯ ನಾಗರಿಕರು ತಮ್ಮ ಹೆಸರುಗಳನ್ನು ಚಾಲ್ತಿಯಲ್ಲಿರುವ ದೂರವಾಣಿ ಸಂಖ್ಯೆಯೊಂದಿಗೆ ನೊಂದಾಯಿಸಿಕೊಳ್ಳಬೇಕು. ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸುವ ಹಿರಿಯ ನಾಗರಿಕರು ಸಾಂಸ್ಕೃತಿ ಸ್ಪರ್ಧೆಗಳಲ್ಲಿ ಭಾಗವಹಿಸುವಂತಿಲ್ಲ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸುವ ಹಿರಿಯ ನಾಗರಿಕರು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸುವಂತಿಲ್ಲ.

ಆಸಕ್ತಿಯುಳ್ಳ ಅರ್ಹ ಹಿರಿಯ ನಾಗರಿಕರು ಎಲ್ಲಾ ಅಗತ್ಯ ಮಾಹಿತಿಯೊಂದಿಗೆ 2025ರ ಸೆಪ್ಟೆಂಬರ್ 8ರ ಸಂಜೆ 5 ಗಂಟೆಯೊಳಗಾಗಿ ಕಲಬುರಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಜಿಲ್ಲಾ ಕಚೇರಿಯಲ್ಲಿ ಕಚೇರಿ ವೇಳೆಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ಈ ಸ್ಪರ್ಧೆಗಳನ್ನು ಇದೇ ಸೆಪ್ಟೆಂಬರ್ 9 ರಂದು ಕಲಬುರಗಿ ನಗರದ ಚಂದ್ರಶೇಖರ ಪಾಟೀಲ ಜಿಲ್ಲಾ ಕ್ರೀಡಾಂಗಣ/ ವಿಜಯ ವಿದ್ಯಾಲಯ ಆವರಣದಲ್ಲಿ ಆಯೋಜಿಸಲಾಗುತ್ತದೆ.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಈ ಕಚೇರಿ ದೂರವಾಣಿ ಸಂಖ್ಯೆ:08472–235222, ಪ್ರಕಾಶ ಜಾಧವ–9972563646 ಸ್ವಪ್ನಾ ಪಾಟೀಲ–7411612044 ಹಾಗೂ ಪ್ರಕಾಶ ದ್ಯಾಬೇರಿ 8217274757 ಇವರ ಮೊಬೈಲ್ ಸಂಖ್ಯೆಗೆ ಸಂಪರ್ಕಿಸಲು ಹಾಗೂ ಕಚೇರಿ ವೇಳೆಯಲ್ಲಿ ಕರೆ ಮಾಡಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದಾಗಿದೆ ಎಂದು

# ಅರ್ಥ ಪೂರ್ಣವಾಗಿ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಗೆ ನಿರ್ಧಾರ



**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಸೆ:4: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿವಿಧ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಇದೇ ಸೆಪ್ಟೆಂಬರ್ 17 ರಂದು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಆಚರಿಸುವ ಕುರಿತು ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು. ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಜಿಲ್ಲಾ ಉಸ್ತುವಾರಿ ಸಚಿವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಲಿದ್ದಾರೆ. ಇದಕ್ಕಾಗಿ ವೇದಿಕೆ, ಶಾಮಿಯಾನ, ಆಸನದ ವ್ಯವಸ್ಥೆ, ಶಿಷ್ಟಾಚಾರದಂತೆ ಗಣ್ಯರನ್ನು ಆಹ್ವಾನಿಸಲು ನಿರ್ಧರಿಸಲಾಯಿತು. ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ್ ಅವರು ಮಾತನಾಡಿ, ಅಂದು ಕ್ರೀಡಾಂಗಣದ ಸ್ವಚ್ಛತೆ, ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ಸೂಕ್ತ ಪೊಲೀಸ್ ಬಂದೋಬಸ್ತ್, ಕವಾಯತು ಪ್ರದರ್ಶನಕ್ಕೆ ಪೂರ್ವಭಾವಿ ಸಿದ್ಧತೆ, ಅಗ್ನಿಶಾಮಕ, ಆರೋಗ್ಯ ಇಲಾಖೆ ಅಂಬ್ಯುಲೆನ್ಸ್ ನುರಿತ ಸಿಬ್ಬಂದಿಗಳೊಂದಿಗೆ ಇರುವಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ವೇದಿಕೆ ಸಿದ್ಧತೆ ನೋಡಿಕೊಳ್ಳಲು ಸಹಾಯಕ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿ, ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಪ್ರಬಂಧ ಹಾಗೂ ಇತರೆ ಸ್ಪರ್ದೆ ಏರ್ಪಡಿಸಲು ಕ್ರಮ ಕೈಗೊಳ್ಳಬೇಕು. ಇದಕ್ಕಾಗಿ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ, ಹೈದ್ರಾಬಾದ್ ಕರ್ನಾಟಕ ವಿಮೋಚನೆ ಚಳುವಳಿಯಲ್ಲಿ ಭಾಗವಹಿಸಿದವರನ್ನು ಸನ್ಮಾನಿಸಲು, ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಸನ್ಮಾನಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಸಾಮೂಹಿಕ ಕವಾಯತಿಗೆ 8 ವಿವಿಧ ತಂಡಗಳು ಭಾಗವಹಿಸಲು, ಪ್ರಾಯೋಗಿಕ ಕವಾಯತು ನಿರ್ವಹಣೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಅಧ್ಯಕ್ಷತೆಯ ಸಮಿತಿ, ಆಮಂತ್ರಣ ಪತ್ರಿಕೆ ವಿತರಿಸುವ ವ್ಯವಸ್ಥೆಗೆ ಸಹಾಯಕ ಆಯುಕ್ತರ ಅಧ್ಯಕ್ಷತೆಯ ಸಮಿತಿ, ರಚಿಸಲಾಯಿತು. ಕಾರ್ಯಕ್ರಮದ ಸಂದರ್ಭದಲ್ಲಿ ಸೂಕ್ತ ವಿದ್ಯುತ್ ವ್ಯವಸ್ಥೆ, ಅಲಂಕಾರ, ಶಾಲಾ ಕಾಲೇಜುಗಳಲ್ಲಿ ಕಾರ್ಯಕ್ರಮ ಆಚರಣೆ, ಮುಖ್ಯ ಕಾರ್ಯಕ್ರಮದ ವೇದಿಕೆ ಹತ್ತಿರ ರಂಗೋಲಿ ಹಾಕಲು, ಅಂದು ಬೆಳಿಗ್ಗೆ 8 ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಧಿಕಾರಿಗಳಿಂದ ರಾಷ್ಟ್ರಧ್ವಜಾರೋಹಣ ನೆರವೇರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲು

ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು. ಸಭೆಯಲ್ಲಿ ಭಾವೈಕ್ಯತಾ ಸಮಿತಿ ಸದಸ್ಯರಾದ ವಿಶ್ವನಾಥ್ ಸಿರವಾಳ, ಚನ್ನಪ್ಪಗೌಡ ಮೋಸಂಬಿ, ವಿವಿಧ ಸಂಘ ಸಂಸ್ಥೆಗಳ ಪರವಾಗಿ ಶೇಖ್ ಇಮ್ರಾನ್, ಹಣಮಂತರಾಯ ಮಾಲಿಪಾಟೀಲ, ಭೀಮು ಪೂಜಾರಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ದುಗುನೂರು ಗ್ರಾಮ ಪಂಚಾಯಿತಿಗೆ ಬೀಗ ಜಡಿದು ಪ್ರತಿಭಟನೆ, ಸ್ಥಳಕ್ಕೆ ಧಾವಿಸಿದ ತಾಲೂಕು ಪಂಚಾಯತ ಅಧಿಕಾರಿ

**ಮಲ್ಲಮ್ಮ ನುಡಿ ವಾರ್ತೆ ಸೇಡಂ,**

ಸೇ, 04, ತಾಲೂಕಿನ ದುಗನೂರ ಗ್ರಾಮ ಪಂಚಾಯಿತಿ ಕಚೇರಿಗೆ ಅಧ್ಯಕ್ಷರ ನೇತೃತ್ವದಲ್ಲಿ ಬೀಗ ಜಡಿದು ಪ್ರತಿಭಟನೆ ನಡೆಸಲಾಯಿತು. ಈ ಸುದ್ದಿ ತಿಳಿದು ತಕ್ಷಣ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚನ್ನಣ್ಣರಾಯಣ್ಣನವರು ಸ್ಥಳಕ್ಕೆ ಧಾವಿಸಿ ಹೋರಾಟಕ್ಕೆ ಕಾರಣವೇನು ಎನ್ನುವುದನ್ನು ಕೇಳಿದಾಗ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಗ್ರಾಮ ಪಂಚಾಯತಿ ಯಲ್ಲಿನ ಸಮಸ್ಸೆಗಳನ್ನು ತಿಳಿಸಿದರು ತಮ್ಮ ಈ ಸಮಸ್ಸೆಗಳಿಗೆ ಆದಷ್ಟು ಬೇಗನೆ ಪರಿಹಾರ ನೀಡುವುದಾಗ ಹೇಳಿದರು. ಆದರೆ ತಮ್ಮ ಈ ಹೇಳಿಕೆಯನ್ನು ನಾನು ಒಪ್ಪುವುದಿಲ್ಲ ತಾವು ನೇರವಾಗಿ ನಮ್ಮ ಗ್ರಾಮದ ಸಮಸ್ಸೆ ಯನ್ನು ನೋಡಬೇಕು ಎಂದುಗ್ರಾಮ ಪಂಚಾಯತ್ ಸದಸ್ಯರಾದ ವಿನೋದ ಸೌಕಾರ್ ಪಟ್ಟು ಹಿಡಿದರು ಅದಕ್ಕೆ ಅಧಿಕಾರಿ ಅವರು ಸಂಪೂರ್ಣವಾಗಿ ಗ್ರಾಮವನ್ನು ವೀಕ್ಷಣೆ ಮಾಡಿ ಒಳಚರಂಡಿ ವ್ಯವಸ್ಥೆ, ಕೊಳವೆ ಬಾವಿ ವ್ಯವಸ್ಥೆ ಇನ್ನು ಹತ್ತು ಹಲವಾರು ಸಮಸ್ಸೆಗಳನ್ನು ರೈತಬಾಂದವರು ಅಧಿಕಾರಿಯೊಂದಿಕೆ ಹಂಚ್ಚಿಕೊಂಡರು. ಪಂಚಾಯತ್ ಸಧಸ್ಯ ವಿನೋದ ಸೌಕಾರ್ ಮಾತನಾಡಿ ದುಗನೂರ ಗ್ರಾಮ್ ಪಂಚಾಯಿತಿಯಲ್ಲಿ ಸುಮಾರ 2 ವರ್ಷಗಳಿಂದ ಏಳು ಜನ ಪೀ.ಡಿ.ಓ.ಗಳಿಗೆ ಬದಲಾವಣೆ ಮಾಡಲಾಗಿದೆ. ಯಾವ ಕಾರಣಕ್ಕಾಗಿ ಪಿ. ಡಿ. ಓ. ಅವರನ್ನು ಬದಲಾವಣೆ ಮಾಡಲಾಗುತ್ತಿದೆ ಎನ್ನುವುದು ಗೊತ್ತಾಗುತ್ತಿಲ್ಲ ಇದರಿಂದ ಗ್ರಾಮದಲ್ಲಿ ಯಾವುದೇ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿಲ್ಲ ಹಲವಾರು ಬಿಲ್ಲುಗಳು ಪೆಂಡಿಂಗ್ ಬಿದ್ದಿವೆ. ಸಿಬ್ಬಂದಿಗಳಿಗೆ ಸಮಯಕ್ಕೆ ಸರಿಯಾಗಿ ಸಂಬಳ ವಾಗುತ್ತಿಲ್ಲ ಎಂದು ಮಾತನಾಡಿದರು ಇದಕ್ಕೆ ಉತ್ತರವಾಗಿ ಕಾರ್ಯನಿರ್ವಾಹಕ ಅಧಿಕಾರ ಗಳು ಆದಷ್ಟು ಬೇಗನೆ ನಿಮ್ಮ ಸಮಸ್ಸೆಗಳಿಗೆ ಪರಿಹರಿಸಲಾಗುತ್ತದೆ ಎಂದು ಗ್ರಾಮ ಪಂಚಾಯತ್ ಬೀಗವನ್ನು ತೆಗೆಸಿ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವಸದಸ್ಯರೊಂದಿಗೆ ಮಾತನಾಡಿ ಪ್ರತಿಯೊಬ್ಬರ ಸಮಸ್ಸೆಗಳನ್ನು ಆಲಿಸಿ ಸೆಪ್ಟೆಂಬರ್ 15 ರಂದು ನನ್ನ ನೇತೃತ್ವದಲ್ಲಿ ಸಾಮಾನ್ಯ ಸಭೆ ನಡೆಸಲಾಗುವುದು ಎಂದು ಭರವಸೆ ನೀಡಿದರು. ಈ ಸಂಧರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ನಾಗಮ್ಮ ಜಗದೇವಪ್ಪ ನಾಚವಾರ, ಉಪಾಧ್ಯಕ್ಷರಾದ ಶ್ರೀಮತಿ ಸಾವಿತ್ರಮ್ಮ ಲಕ್ಷ್ಮಪ್ಪ ಬಿಲಕಲ್, ಸದಸ್ಯರಾದ ವಿನೋದ್ ನಾಗೇಂದ್ರಪ್ಪ ಸೌಕಾರ್ ದುಗನೂರ್, ಅಂಬಣ್ಣ ನರಸಪ್ಪ, ಶ್ರೀಮತಿ ಕೊಂತೆಮ್ಮ ನರಸಪ್ಪ, ಶ್ರೀಮತಿ ಈರಮ್ಮ ಮಹೇಶ, ಹೇಮರೆಡ್ಡಿ ಗೋವಿಂದರೆಡ್ಡಿ, ಶ್ರೀಮತಿ ಕಿಷ್ಟಮ್ಮ ಹೊನ್ನಪ್ಪ, ಶ್ರೀಮತಿ ಚನ್ನಮ್ಮ್ ಸದಾಶಿವಪ್ಪ, ಭೀಮಪ್ಪ ನರಸಪ್ಪ, ಹಾಗೂ ಗ್ರಾಮಸ್ಥರು ಪಂಚಾಯತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

